05 May 2026 Tuesday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಸಸಿಗಳಿಗೆ ನೀರು,ಗೊಬ್ಬರ ಹಾಕಿದರೆ ಹೇಗೆ ಒಳ್ಳೆಯ ಗುಣಮಟ್ಟದ ಹೂ,ಹಣ್ಣು ಕೊಡುತ್ತದೆಯೋ, ಹಾಗೆಯೇ ನಮ್ಮಲ್ಲಿ ಬಿತ್ತಿದ ಗುಣಮಟ್ಟದ ಆಲೋಚನೆಗಳು ಕೂಡ!

-ಸ್ನೇಹಾ ಆನಂದ್

info.varthaman@gmail.com



ಅಕ್ಕ ಕೆಫೆಯಿಂದ ಸ್ತ್ರೀ ಸಬಲೀಕರಣ: ಸಂಸದ ಸುನೀಲ್ ಬೋಸ್ ಪುಟ ಸಂ. 2



ಸ್ಥಳೀಯ ಸಂಸ್ಥೆಗಳ ಬಲವರ್ಧನೆಗೆ ಸಚಿವರ ಒಲವು ಪುಟ ಸಂ. 3



ಎಐ-ಸೆಂಟರ್ ಆಫ್ ಎಕ್ಸಲೆನ್ಸ್ ಕೇಂದ್ರದ ಉದ್ಘಾಟನೆ ಪುಟ ಸಂ. 4

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN Volume: 69 Issue: 162 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

## ಸಬ್‌ಕಾ ವಿಕಾಸ್‌ಗೆ ಬೆಂಬಲ

**ಬೆಂಗಳೂರು:** ಎನ್‌ಡಿಎ ಮೈತ್ರಿಕೂಟದ ಅಭೂತಪೂರ್ವ ಗೆಲುವು ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿಯ ನಾಯಕತ್ವ ಮತ್ತು ವಿಕಸಿತ ಭಾರತಕ್ಕಾಗಿ ಅವರ ಪರಿವರ್ತನಾ ಪ್ರೇರಿತ ಕಾರ್ಯಸೂಚಿಯಲ್ಲಿ ಜನರು ಹೊಂದಿರುವ ನಿರಂತರ ನಂಬಿಕೆಯ ದೃಢೀಕೃತ ಫಲಿತಾಂಶವಾಗಿದೆ ಎಂದು ಕೇಂದ್ರ ಸಚಿವ ಎಚ್.ಡಿಕುಮಾರಸ್ವಾಮಿ ಹೇಳಿದ್ದಾರೆ.

ಪಂಚರಾಜ್ಯಗಳ ಚುನಾವಣಾ ಫಲಿತಾಂಶ ಪ್ರಕಟವಾದ ಬೆನ್ನಲ್ಲೇ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿರುವ ಅವರು, ಈ ನಿರ್ಣಾಯಕ ಜನಾದೇಶವು ಜನರ ಆಕಾಂಕ್ಷೆ ಮತ್ತು ಸಬ್‌ಕಾ ಸಾಥ್, ಸಬ್‌ಕಾ ವಿಕಾಸ್, ಸಬ್‌ಕಾ ವಿಶ್ವಾಸ್‌ನ ಮಾರ್ಗದರ್ಶಿ ತತ್ವಗಳ ನಡುವಿನ ಆಳವಾದ ಹೊಂದಾಣಿಕೆಯನ್ನು ಪ್ರತಿಬಿಂಬಿಸುತ್ತದೆ. ಇದು ಎನ್‌ಡಿಎ ಮೈತ್ರಿಕೂಟದ ವಿಶ್ವಾಸಾರ್ಹತೆ, ಕಾರ್ಯಕ್ಷಮತೆ ಮತ್ತು ಅಂತರ್ಗತ ಆಡಳಿತದ ವೇದಿಕೆಯಾಗಿ ಬಲಪಡಿಸುತ್ತದೆ ಎಂದಿದ್ದಾರೆ.

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಕಾರ್ಯತಂತ್ರ ಮತ್ತು ರಾಷ್ಟ್ರೀಯ ಏಕತೆಗೆ ಅಚಲ ಬದ್ಧತೆಯು ಈ ಫಲಿತಾಂಶವನ್ನು ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸಿದೆ. ದೇಶಾದ್ಯಂತ ಎನ್‌ಡಿಎ ಮೈತ್ರಿಕೂಟದ ವ್ಯಾಪ್ತಿ ಮತ್ತು ಸಾಂಸ್ಥಿಕ ಆಳವನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ಕುಮಾರಸ್ವಾಮಿ ವಿಶ್ವಾಸ ವ್ಯಕ್ತ ಪಡಿಸಿದ್ದಾರೆ.

# ಪ್ರಧಾನಿ ಮೋದಿಗೆ ಜೈ : ದೀದಿಗೆ ಬೈ

## ಪಶ್ಚಿಮ ಬಂಗಾಳ, ಪುದುಚೇರಿ, ಅಸ್ಸಾಂ ಬಿಜೆಪಿ ತೆಕ್ಕೆಗೆ । ಕೇರಳದಲ್ಲಿ ಕಾಂಗ್ರೆಸ್ ಗೆಲುವು, ತಮಿಳುನಾಡು ಟಿವಿಕೆ ಪಾಲು

**ನವದೆಹಲಿ:** ಪಂಚರಾಜ್ಯ ಚುನಾವಣೆಯಲ್ಲಿ ಬಿಜೆಪಿ ಕಮಾಲ್ ಮಾಡಿದೆ. 5 ರಾಜ್ಯಗಳಲ್ಲಿ 3ರಲ್ಲಿ ಜಯಗಳಿಸುವ ಮೂಲಕ ತನ್ನ ಸಾಮ್ರಾಜ್ಯವನ್ನು ಮತ್ತಷ್ಟು ವಿಸ್ತರಣೆ ಮಾಡಿದೆ. ಪಶ್ಚಿಮ ಬಂಗಾಳದಲ್ಲಿ ಮೊದಲ ಬಾರಿಗೆ ಭರ್ಜರಿ ಜಯಗಳಿಸುವ ಮೂಲಕ ದೀದಿಗೆ ಶಾಕ್ ನೀಡಿದೆ. ಪಶ್ಚಿಮ ಬಂಗಾಳದ ಆಡಳಿತ ಪಕ್ಷ ಟಿಎಂಸಿ 15 ವರ್ಷಗಳ ನಂತರ ಹೀನಾಯ ಸೋಲು ಕಂಡಿದೆ. ಈ ಮೂಲಕ ಸಿಎಂ ಮಮತಾ ಬ್ಯಾನರ್ಜಿ ಅವರಿಗೆ ಮುಖಭಂಗವಾಗಿದೆ.

ತಮಿಳುನಾಡಿನ 234 ಕ್ಷೇತ್ರಗಳಲ್ಲಿ ಟಿವಿಕೆ 108 ಸ್ಥಾನಗಳಲ್ಲಿ ಗೆಲುವು ಸಾಧಿಸಿದೆ. ಈ ಮೂಲಕ ಅತಿ ಹೆಚ್ಚು ಸ್ಥಾನ ಪಡೆದ ಪಕ್ಷವಾಗಿ ಹೊರಹೊಮ್ಮಿದೆ. ಆಡಳಿತ ಪಕ್ಷ ಡಿಎಂಕೆ 72 ಮತ್ತು ಎಡಿಎಂಕೆ 54 ಸ್ಥಾನ ಪಡೆಯುವಲ್ಲಿ ಯಶಸ್ವಿ ಆಗಿವೆ. ತಮಿಳುನಾಡಿನಲ್ಲಿ ಸಮ್ಮಿಶ್ರ ಸರ್ಕಾರ ಅಧಿಕಾರಕ್ಕೆ ಬರಲಿದೆ. ವಿಜಯ್ ಅವರಿಗೆ ಸರ್ಕಾರ ರಚಿಸಲು 10 ಸ್ಥಾನಗಳ ಕೊರತೆ ಇದೆ. ಈಗಾಗಲೇ ವಿಜಯ್ ಅವರ ತಂದೆ ಕಾಂಗ್ರೆಸ್ ಜೊತೆ ಕೈಜೋಡಿಸಲು ಆಹ್ವಾನ ನೀಡಿದ್ದಾರೆ.

ಅಸ್ಸಾಂನಲ್ಲಿ ಆಡಳಿತ ವಿರೋಧಿ ಅಲೆ ನಡುವೆಯೂ ಬಿಜೆಪಿ 102 ಸ್ಥಾನ ಪಡೆದು ತನ್ನ ಸರ್ಕಾರವನ್ನು ಉಳಿಸಿಕೊಂಡಿದೆ. ಅಸ್ಸಾಂನಲ್ಲಿ ಕಾಂಗ್ರೆಸ್ ಕೇವಲ 21 ಸ್ಥಾನ ಗಳಿಸಿದೆ. ಪುದುಚೇರಿಯಲ್ಲಿ ಎನ್‌ಡಿಎ ಮೈತ್ರಿ ಕೂಟ ಜಯಗಳಿಸಿದೆ.

ಕೇರಳದಲ್ಲಿ ನಿರೀಕ್ಷೆಯಂತೆ ಕಾಂಗ್ರೆಸ್ ಜಯಭೇರಿ ಭಾರಿಸಿದೆ. ಕಾಂಗ್ರೆಸ್ ನೇತೃತ್ವದ ಯುಡಿಎಫ್ ಜಯಗಳಿಸಿದೆ. ಆಡಳಿತ ಪಕ್ಷ ಯುಡಿಎಫ್ ಅಧಿಕಾರ ಕಳೆದುಕೊಂಡಿದೆ.





### ತಮಿಳುನಾಡು 234

| | |
|---|---|
| ಟಿವಿಕೆ | 110 |
| ಡಿಎಂಕೆ | 71 |
| ಎಡಿಎಂಕೆ | 54 |

### ಅಸ್ಸಾಂ 126

| | |
|---|---|
| ಬಿಜೆಪಿ | 102 |
| ಕಾಂಗ್ರೆಸ್ | 21 |
| ಇತರೆ | 3 |

### ಪಶ್ಚಿಮ ಬಂಗಾಳ 293

| | |
|---|---|
| ಬಿಜೆಪಿ | 202 |
| ಟಿಎಂಸಿ | 85 |
| ಕಾಂಗ್ರೆಸ್ | 2 |
| ಕಮ್ಯೂನಿಸ್ಟ್ | 1 |
| ಇತರೆ | 3 |

### ಪುದುಚೇರಿ–30

| | |
|---|---|
| ಎನ್‌ಡಿಎ | 17 |
| ಐಎನ್‌ಡಿಎ | 6 |
| ಟಿವಿಕೆ | 3 |
| ಇತರೆ | 4 |

### ಕೇರಳಂ–140

| | |
|---|---|
| ಎಲ್‌ಡಿಎಫ್ | 35 |
| ಯುಡಿಎಫ್ | 100 |
| ಬಿಜೆಪಿ | 3 |
| ಇತರೆ | 2 |

## ಮುಸ್ಲಿಂ ಮತ ಕೈತಪ್ಪಿಲ್ಲ: ಸಚಿವ ಮಲ್ಲಿಕಾರ್ಜುನ್



**ದಾವಣಗೆರೆ:** ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಸಾಕಷ್ಟು ಗೊಂದಲ ಉಂಟಾಗಿದ್ದವು. ಆದರೂ, ಕ್ಷೇತ್ರದ ಮತದಾರರು ಶಾಮನೂರು ಕುಟುಂಬವನ್ನು ಆಶೀರ್ವದಿಸಿದ್ದಾರೆ. ಅಲ್ಪಸಂಖ್ಯಾತ ಸಮುದಾಯದ ಮತಗಳು ಕಾಂಗ್ರೆಸ್ ಕೈತಪ್ಪಿಲ್ಲ ಎಂದು ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ತಿಳಿಸಿದರು.

ಪುತ್ರ ಸಮರ್ಥ್ ಗೆಲುವಿನ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶಾಮನೂರು ಶಿವಶಂಕರಪ್ಪ ಅವರು 1994ರಲ್ಲಿ 1,300 ಮತಗಳ ಅಂತರದಿಂದ ಗೆದ್ದಿದ್ದರು. 2023ರಲ್ಲಿ 48,000 ಮತಗಳ ಭಾರಿ ಅಂತರದಲ್ಲಿ ವಿಜೇತರಾಗಿದ್ದರು. 5,708 ಮತಗಳ ಅಂತರದಿಂದ ಸಮರ್ಥ್ ಶಾಮನೂರು ಗೆದ್ದಿದ್ದಾರೆ. ಗೆಲುವಿನ ಅಂತರದ ಬಗ್ಗೆ ತಲೆಕೆಡಿಸಿಕೊಂಡಿಲ್ಲ ಎಂದರು.

## 'ದೇವರ ನಾಡು' ಕೈವಶ

**ತಿರುವನಂತಪುರಂ:** ಕೇರಳ ವಿಧಾನ ಸಭಾ ಚುನಾವಣೆ ಫಲಿತಾಂಶ ಹೊರಬಿದ್ದಿದೆ. ಕಾಂಗ್ರೆಸ್ ನೇತೃತ್ವದ ಯುನೈಟೆಡ್ ಡೆಮಾಕ್ರಟಿಕ್ ಫ್ರಂಟ್ ಭರ್ಜರಿ ಜಯ ದಾಖಲಿಸಿದೆ. ಪಿಣರಾಯಿ ವಿಜಯನ್ ನೇತೃತ್ವದ ಎಲ್‌ಡಿಎಫ್ ಆಡಳಿತಕ್ಕೆ ಅಂತ್ಯ ಹಾಡಿರುವ ಯುಡಿಎಫ್ 10 ವರ್ಷದ ಬಳಿಕ ಮತ್ತೆ ಅಧಿಕಾರ ಹಿಡಿಯುವಲ್ಲಿ ಯಶಸ್ವಿಯಾಗಿದೆ. ಕೇರಳದ 140 ವಿಧಾನಸಭಾ ಕ್ಷೇತ್ರಗಳ ಪೈಕಿ ಯುಡಿಎಫ್ ಸುಮಾರು 100 ಸ್ಥಾನಗಳಲ್ಲಿ ಭರ್ಜರಿ ಗೆಲುವು ಸಾಧಿಸಿದೆ. ಸ್ಪಷ್ಟ ಬಹುಮತ ಪುಟ 2ಕ್ಕೆ

## ತಮಿಳುನಾಡಿಗೆ ವಿಜಯ್ 'ದಳಪತಿ'

### ಮೊದಲ ಚುನಾವಣೆಯಲ್ಲಿಯೇ ಭರ್ಜರಿ ಜಯಗಳಿಸಿದ ಟಿವಿಕೆ


**ಚೆನ್ನೈ:** ತಮಿಳುನಾಡಿನ ವಿಧಾನಸಭೆ ಸಮರದಲ್ಲಿ ನಟ ವಿಜಯ್ ನೇತೃತ್ವದ ತಮಿಳಗ ವೆಟ್ರಿ ಕಳಗಂ ಪಕ್ಷವು (ಟಿವಿಕೆ) ಹಳೆ ಹುಲಿಗಳ ಲೆಕ್ಕಾಚಾರವನ್ನು ತಲೆಕೆಳಗು ಮಾಡಿದೆ. ದಶಕಗಳಿಂದ ಡಿಎಂಕೆ ಮತ್ತು ಎಐಎಡಿಎಂಕೆ ನಡುವೆ ಸುತ್ತುತ್ತಿದ್ದ ತಮಿಳು ರಾಜಕಾರಣದಲ್ಲಿ ವಿಜಯ್ ಈಗ 'ಸೂಪರ್ ಕಿಂಗ್' ಆಗಿ ಉದಯಿಸಿದ್ದಾರೆ. ಯುವಶಕ್ತಿ ಮತ್ತು ಮಹಿಳೆಯರ ಅಭೂತಪೂರ್ವ ಬೆಂಬಲವೇ ಈ ಐತಿಹಾಸಿಕ ಬದಲಾವಣೆಗೆ ಕಾರಣ ಎನ್ನಲಾಗಿದೆ.

ತಮಿಳುನಾಡಿನ ಸುಮಾರು 2.38 ಕೋಟಿ ಯುವ ಮತದಾರರು ಸಾಂಪ್ರದಾಯಿಕ ದ್ರಾವಿಡ ಪಕ್ಷಗಳ ಮೇಲಿನ ಅಸಮಾಧಾನದಿಂದಾಗಿ ಹೊಸ ಪರ್ಯಾಯವನ್ನು ಹುಡುಕುತ್ತಿದ್ದರು. ವಿಜಯ್ ಅವರಲ್ಲಿ ಹೊಸ ಭರವಸೆ ಕಂಡ ಈ ಯುವ ಸಮೂಹ, ಅವರ ವಿಜಯ್ ಮಕ್ಕಳ ಇಯಕ್ಕಂ ಸಂಘಟನೆಯನ್ನು ಶಕ್ತಿಯುತ ಮತ ಬ್ಯಾಂಕ್ ಆಗಿ ಪರಿವರ್ತಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಟಿವಿಕೆ ಪಕ್ಷದ ಪ್ರಣಾಳಿಕೆಯಲ್ಲಿದ್ದ ಮಹಿಳಾ ಕೇಂದ್ರಿತ ಯೋಜನೆಗಳು ಡಿಎಂಕೆಗೆ ತೀವ್ರ ಪೆಟ್ಟು ನೀಡಿವೆ. ಗೃಹಿಣಿಯರಿಗೆ ಮಾಸಿಕ ಹಣಕಾಸಿನ ನೆರವನ್ನು 2,500 ರೂ.ಗೆ ಏರಿಸುವ ಭರವಸೆ, ಪ್ರತಿ ಮನೆಗೂ ಉಚಿತ ಎಲ್‌ಪಿಜಿ ಸಿಲಿಂಡರ್ ಯೋಜನೆ. ಈ ಎರಡು ಅಂಶಗಳು ಮಹಿಳಾ ಮತದಾರರನ್ನು ಸೆಳೆಯುವಲ್ಲಿ ಪುಟ 2ಕ್ಕೆ



## ಪ.ಬಂಗಾಳದ ದೀದಿ ಕೋಟೆ ಛಿದ್ರ



**ನವದೆಹಲಿ:** ಪಶ್ಚಿಮ ಬಂಗಾಳ ವಿಧಾನಸಭೆ ಚುನಾವಣೆಯಲ್ಲಿ ಏಕೈಕ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿರುವ ದೀದಿ ಕೋಟೆಯನ್ನು ಛಿದ್ರ ಗೊಳಿಸಿದೆ. ಬಿಜೆಪಿ ಮೊತ್ತ ಮೊದಲ ಬಾರಿಗೆ ಸ್ಪಷ್ಟ ಬಹುಮತದೊಂದಿಗೆ ಸರ್ಕಾರ ರಚಿಸಲು ಸಿದ್ಧತೆ ನಡೆಸಿದೆ. ಇದರೊಂದಿಗೆ ರಾಷ್ಟ್ರೀಯ ಪ್ರಜಾ ಸತ್ತಾತ್ಮಕ ಮೈತ್ರಿಕೂಟ (ಎನ್‌ಡಿಎ) ಆಡಳಿತ ನಡೆ ಸುವ ರಾಜ್ಯಗಳ ಸಂಖ್ಯೆ 21ಕ್ಕೆ ಏರಿಕೆಯಾಗಿದೆ.

ಕೇಂದ್ರದಲ್ಲಿ ಪ್ರಮುಖ ವಿರೋಧ ಪಕ್ಷವಾದ ಇಂಡಿಯಾ ಬಣ, ತಮಿಳುನಾಡನ್ನು ಕಳೆದು ಕೊಂಡಿದೆ. ಆದರೆ ಕೇರಳವನ್ನು ಗೆದ್ದ ನ ಪುಟ 2ಕ್ಕೆ ದೇಶಾದ್ಯಂತ ಆರು ರಾಜ್ಯಗಳಲ್ಲಿ ತನ್ನ



## ಕಾಂಗ್ರೆಸ್‌ಗೆ ಟಿವಿಕೆ ಆಹ್ವಾನ

**ಚೆನ್ನೈ:** ತಮಿಳುನಾಡಿನ ವಿಧಾನಸಭಾ ಚುನಾವಣೆಯಲ್ಲಿ ವಿಜಯ್ ಅವರ ತಮಿಳಗ ವೆಟ್ರಿ ಕಳಗಂ (ಟಿವಿಕೆ) ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ. ಸರ್ಕಾರ ರಚನೆಗೆ ಅಗತ್ಯವಾದಷ್ಟು ಬಹುಮತ ದೊರೆಯುವ ಸಾಧ್ಯತೆ ಕಡಿಮೆ ಇದೆ. ಹೀಗಾಗಿ ವಿಟಿಕೆ ಜೊತೆಗೆ ಕಾಂಗ್ರೆಸ್ ಮೈತ್ರಿ ಮಾಡಿಕೊಳ್ಳುವಂತೆ ವಿಜಯ್ ಅವರ ತಂದೆ ಆಹ್ವಾನ ನೀಡಿದ್ದಾರೆ.


234 ಸದಸ್ಯ ಬಲದ ತಮಿಳುನಾಡು ವಿಧಾನಸಭೆಗೆ ಸರ್ಕಾರ ರಚಿಸಲು 117 ಮ್ಯಾಜಿಕ್ ನಂಬರ್ ಆಗಿದೆ. ಆದರೆ ಟಿವಿಕೆ ಪಕ್ಷ ಸುಮಾರು ಪುಟ 2ಕ್ಕೆ

## ಮತದಾರರ ಭಾವನೆ ಪ್ರತಿಬಿಂಬ: ಸಿಎಂ ಸಿದ್ದರಾಮಯ್ಯ ವಿಶ್ಲೇಷಣೆ

**ಬೆಂಗಳೂರು:** ಹಲವು ರಾಜ್ಯಗಳಲ್ಲಿ ಕಾಂಗ್ರೆಸ್ ನಿರೀಕ್ಷೆಗಳನ್ನು ಮೀರಿದೆ. ಕೆಲವು ಪ್ರದೇಶಗಳಲ್ಲಿನ ಫಲಿತಾಂಶಗಳು ಬದಲಾಗುತ್ತಿರುವ ಮತದಾರರ ಭಾವನೆಗಳನ್ನು ಪ್ರತಿಬಿಂಬಿಸುತ್ತವೆ ಎಂದು ಪಂಚರಾಜ್ಯಗಳ ಚುನಾವಣಾ ಫಲಿತಾಂಶ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಬೆಂಗಳೂರಿನಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇರಳದಲ್ಲಿ ನಿರೀಕ್ಷೆಗಿಂತ ಉತ್ತಮ ಪ್ರದರ್ಶನ ನೀಡಿ ದ್ದರೂ ಪಕ್ಷವು ಅಸ್ಸಾಂನಲ್ಲಿ ಜನಾದೇಶವನ್ನು ಒಪ್ಪಿಕೊಂಡಿದೆ ಎಂದು ಹೇಳಿದರು.

ಅಸ್ಸಾಂನಲ್ಲಿ, ನಾವು ನಿರೀಕ್ಷಿತ ಫಲಿತಾಂಶವನ್ನು ಪಡೆದುಕೊಂಡಿದ್ದೇವೆ. ನಾವು ಜನರ ಜನಾದೇಶವನ್ನು ಸ್ವೀಕರಿಸುತ್ತೇವೆ. ಕೇರಳದಲ್ಲಿ, ನಾವು ನಿರೀಕ್ಷೆಗಿಂತ ಹೆಚ್ಚಿನ ಸ್ಥಾನಗಳನ್ನು ಗೆದ್ದಿದ್ದೇವೆ. ನಾವು ಸುಮಾರು 76 ರಿಂದ 80 ಸ್ಥಾನಗಳನ್ನು ನಿರೀಕ್ಷಿಸಿದ್ದೆವು. ಆದರೆ, ನಾವು ಸುಮಾರು ಪುಟ 2ಕ್ಕೆ



## ಉಪ ಸಮರದಲ್ಲಿ ಕಾಂಗ್ರೆಸ್ ಗೆಲುವು

### ಬಾಗಲಕೋಟೆ, ದಾವಣಗೆರೆಯಲ್ಲೂ ಬಿಜೆಪಿಗೆ ಮುಖಭಂಗ

**ಬಾಗಲಕೋಟೆ:** ರಾಜ್ಯದ ಬಾಗಲಕೋಟೆ ಹಾಗೂ ದಾವಣಗೆರೆ ವಿಧಾನಸಭಾ ಕ್ಷೇತ್ರಗಳಿಗೆ ನಡೆದ ಉಪಚುನಾವಣೆಯಲ್ಲಿ ಆಡಳಿತ ಪಕ್ಷ ಕಾಂಗ್ರೆಸ್ ಎರಡೂ ಕ್ಷೇತ್ರಗಳಲ್ಲಿಯೂ ಗೆಲುವು ಸಾಧಿಸುವ ಮೂಲಕ ತನ್ನ ಸ್ಥಾನಗಳನ್ನು ಉಳಿಸಿಕೊಂಡಿದೆ.

ಬಾಗಲಕೋಟೆಯಲ್ಲಿ ಎಚ್.ವೈ.ಮೇಟಿ ಅವರ ನಿಧನದಿಂದ ತೆರವಾಗಿದ್ದ ಕ್ಷೇತ್ರದ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ತಮ್ಮ ಪ್ರತಿಸ್ಪರ್ಧಿ ಬಿಜೆಪಿಯ ವೀರಭದ್ರಯ್ಯ ಚರಂತಿಮಠ ವಿರುದ್ಧ 22,332 ಮತಗಳ ಅಂತರದಿಂದ ಗೆಲುವಿನ ನಗೆ ಬೀರಿದ್ದಾರೆ. ಈ ಮೂಲಕ ಕ್ಷೇತ್ರವನ್ನು ಮರಳಿ ಕಾಂಗ್ರೆಸ್ ತನ್ನ ತೆಕ್ಕೆಗೆ ಪಡೆದುಕೊಂಡಿದೆ.

ಬಿಜೆಪಿ ಅಭ್ಯರ್ಥಿಯಾಗಿದ್ದ ವೀರಣ್ಣ ಚರಂತಿಮಠ ಪ್ರಬಲ ಪೈಪೋಟಿ ನೀಡಿದ್ದರೂ ಅಂತಿಮವಾಗಿ ಸೋಲುಂಡಿದ್ದಾರೆ. ಎಚ್.ವೈ.ಮೇಟಿ ನಿಧನದ ಹಿನ್ನೆಲೆ ಅವರ ಕುಟುಂಬಕ್ಕೇ ಕಾಂಗ್ರೆಸ್ ಟಿಕೆಟ್ ನೀಡಿತ್ತು. ಮೇಟಿ ಪುತ್ರ ಉಮೇಶ್ ಅವರನ್ನು ಉಪಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಯಾಗಿ ಕಣಕ್ಕಿಳಿಸಿತ್ತು. ಉಮೇಶ್ ಮೇಟಿ ಮೊದಲ ಬಾರಿ ಚುನಾವಣೆಗೆ ಸ್ಪರ್ಧಿಸಿ ಗೆಲುವು ಕಂಡಿದ್ದಾರೆ. ಪುಟ 2ಕ್ಕೆ



## ಸಮರ್ಥ್‌ಗೆ ಪ್ರಯಾಸದ ಜಯ

**ದಾವಣಗೆರೆ:** ಆಡಳಿತಾರೂಢ ಕಾಂಗ್ರೆಸ್ ಹಾಗೂ ಪ್ರತಿಪಕ್ಷ ಬಿಜೆಪಿ ನಡುವೆ ತೀವ್ರ ಜಿದ್ದಾಜಿದ್ದಿಗೆ ಕಾರಣವಾಗಿದ್ದ ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ, ಶಾಮನೂರು ಶಿವಶಂಕರಪ್ಪ ಅವರ ಮೊಮ್ಮಗ ಸಮರ್ಥ್ ಶಾಮನೂರು ಕೊನೆಗೂ ಗೆಲುವು ಸಾಧಿಸಿದ್ದಾರೆ.

ತೀವ್ರ ಕುತೂಹಲ ಕೆರಳಿಸಿದ್ದ ಪುಟ 2ಕ್ಕೆ



## ವಿಜಯ್ ನಿವಾಸಕ್ಕೆ ತ್ರಿಶಾ ಭೇಟಿ

**ಚೆನ್ನೈ:** ನಟಿ ತ್ರಿಶಾ ತಮ್ಮ ಹುಟ್ಟುಹಬ್ಬದ ನಿಮಿತ್ತ ಸೋಮವಾರ ಬೆಳಿಗ್ಗೆ ತಿರುಮಲ ತಿರುಪತಿ ದೇವಸ್ಥಾನದಲ್ಲಿ ಪ್ರಾರ್ಥನೆ ಸಲ್ಲಿಸಿದರು. ದರ್ಶನ ಪಡೆದ ನಂತರ ಅವರು ಚೆನ್ನೈಗೆ ಹಿಂತಿರುಗಿ ನೇರವಾಗಿ ದಳಪತಿ ವಿಜಯ್ ಅವರ ನಿವಾಸಕ್ಕೆ ತೆರಳಿದರು. ವಿಧಾನಸಭಾ ಚುನಾವಣೆಯಲ್ಲಿ ಭರ್ಜರಿ ಗೆಲುವು ಸಾಧಿಸಿರುವ ವಿಜಯ್ ಅವರಿಗೆ ತ್ರಿಶಾ ಅಭಿನಂದನೆ ಸಲ್ಲಿಸಿದ್ದಾರೆ.

ರಾಜಕೀಯ ಪಕ್ಷ ಸ್ಥಾಪಿಸಿದ 6 ತಿಂಗಳಲ್ಲಿ ಚೊಚ್ಚಲ ಚುನಾವಣೆಯಲ್ಲಿ ಭರ್ಜರಿ ಗೆಲುವು ಸಾಧಿಸಿರುವ ವಿಜಯ್ ಅವರ ಟಿವಿಕೆ ಪಕ್ಷ ಇತಿಹಾಸ ಸೃಷ್ಟಿಸಿ ಸರ್ಕಾರ ರಚಿಸಲು ಸಜ್ಜಾಗಿರುವ ಸಮಯದಲ್ಲಿ ತ್ರಿಷಾ ಭೇಟಿ ಮಾಡಿದ್ದಾರೆ. ತ್ರಿಶಾ ಮತ್ತು ವಿಜಯ್ ಪರಸ್ಪರ ಪ್ರೀತಿಸುತ್ತಿದ್ದಾರೆ ಎಂಬ ವದಂತಿ ಬಹಳ ಹಿಂದಿನಿಂದಲೂ ಇದೆ. ವಿಜಯ್ ಅವರ ಪತ್ನಿ ಡಿಸೆಂಬರ್‌ನಲ್ಲಿ ವಿಚ್ಛೇದನಕ್ಕೆ ಅರ್ಜಿ ಸಲ್ಲಿಸಿದ್ದಾರೆ.

## ಜೀವರಾಜ್‌ಗೆ ಪ್ರಮಾಣ ಪತ್ರ

### ಅಂಚೆ ಮತ ಮರು ಎಣಿಕೆಯಲ್ಲಿ ಗೆಲುವು

**ಚಿಕ್ಕಮಗಳೂರು:** ಶೃಂಗೇರಿ ಕ್ಷೇತ್ರದ ಅಂಚೆ ಮತ ಮರು ಎಣಿಕೆಯಲ್ಲಿ ಗೆಲುವು ಸಾಧಿಸಿರುವ ಬಿಜೆಪಿ ಅಭ್ಯರ್ಥಿ ಡಿ.ಎನ್.ಜೀವರಾಜ್ ಅವರಿಗೆ ಚುನಾವಣಾ ಅಧಿಕಾರಿ ಗೌರವ್ ಕುಮಾರ್ ಶೆಟ್ಟಿ ಪ್ರಮಾಣ ಪತ್ರ ನೀಡಿದರು.

ಡಿ.ಎನ್.ಜೀವರಾಜ್ ಮಾತನಾಡಿ, ಜನ ನನ್ನನ್ನು ಗೆಲ್ಲಿಸಿದ್ದರು. ಆದರೆ ಇಲ್ಲಿಯ ಕೆಲವರು ಸೋಲಿಸಿದ್ದರು. ಕಾನೂನಿನ ಹೋರಾಟದ ಮೂಲಕ ನನಗೆ ಜಯಸಿಕ್ಕಿದೆ ಎಂದರು. ವೋಟ್ ಟ್ಯಾಂಪರಿಂಗ್ ಆರೋಪಕ್ಕೆ ಸ್ಪಷ್ಟನೆ ಕೊಟ್ಟ ಅವರು, ಟ್ಯಾಂಪರಿಂಗ್ ಆರೋಪದಡಿ ತಮ್ಮ ವಿರುದ್ಧ ದಾಖಲಾದ ಪ್ರಕರಣ ಠಾಣಾ ವ್ಯಾಪ್ತಿಗೆ ಬರುವುದಿಲ್ಲ. ಆಯೋಗ ಮಾಡಬೇಕಾದ ಕೆಲಸವನ್ನು ಕಾಂಗ್ರೆಸ್ ನವರು ಮಾಡಿದ್ದಾರೆ. ಇವರ ಸರ್ಕಾರದಲ್ಲೇ ಇದ್ದ ಮತಗಳು



ಟ್ಯಾಂಪರಿಂಗ್ ಆಗೋಕೆ ಹೇಗೆ ಸಾಧ್ಯ ಎಂದು ಪ್ರಶ್ನಿಸಿದರು. 2023ರ ಎಣಿಕೆಯಲ್ಲಿ ಬಿಜೆಪಿ ಪುಟ 2ಕ್ಕೆ

## ಜೈಲಿನಲ್ಲಿ ದರ್ಶನ್‌ಗೆ ಸೌಕರ್ಯ: ವರದಿ ನೀಡಲು ಸುಪ್ರೀಂ ಸೂಚನೆ

**ಬೆಂಗಳೂರು:** ನಟ ದರ್ಶನ್‌ಗೆ ಜೈಲಿನಲ್ಲಿ ಮೂಲಸೌಕರ್ಯ ಒದಗಿಸಲಾಗಿದೆಯೇ ಎಂಬ ಬಗ್ಗೆ ವರದಿ ಸಲ್ಲಿಸುವಂತೆ ರಾಜ್ಯ ಸರ್ಕಾರಕ್ಕೆ ಸುಪ್ರೀಂಕೋರ್ಟ್ ನಿರ್ದೇಶನ ನೀಡಿದೆ.

ಕೊಲೆ ಪ್ರಕರಣದಲ್ಲಿ ಜೈಲು ಸೇರಿರುವ ದರ್ಶನ್, ಜಾಮೀನು ಕೋರಿ ಸುಪ್ರೀಂಕೋರ್ಟ್ಗೆ ಸಲ್ಲಿಸಿರುವ ಅರ್ಜಿ ವಿಚಾರಣೆ ಪುಟ 2ಕ್ಕೆ





## ಗ್ಯಾರಂಟಿ ಕೈಹಿಡಿದಿದೆ: ಡಿಕೆಶಿ

**ಬೆಂಗಳೂರು:** ಜನ ನಮ್ಮ ಜೊತೆ ಇದ್ದಾರೆ. ನಮ್ಮ ಗ್ಯಾರಂಟಿ ನಮ್ಮ ಕೈಹಿಡಿದಿದೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ತಿಳಿಸಿದರು.

ಉಪ ಚುನಾವಣೆ ಫಲಿತಾಂಶದ ನಂತರ ಮಾತನಾಡಿದ ಅವರು, ನಮ್ಮ ಗ್ಯಾರಂಟಿ ರಾಜ್ಯದಲ್ಲಿ ಚೆನ್ನಾಗಿ ನಡೆಯುತ್ತಿದೆ. ಜನ ಸ್ಪಂದಿಸಿದ್ದಾರೆ. ಇದಕ್ಕೆ ಈ ಫಲಿತಾಂಶ ಉದಾಹರಣೆ. ಇನ್ನೂ ರೌಂಡ್ ಇದೆ, ಚೆನ್ನಾಗಿ ಆಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ದಾವಣಗೆರೆಯಲ್ಲಿ ಕಾಂಗ್ರೆಸ್‌ಗೆ ಎಸ್‌ಡಿಪಿಐ ವೋಟ್ ನಮಗೆ ಡೇಂಜರ್ ಆಗಿದೆ. ಎಸ್‌ಡಿಪಿಐ ಅವರನ್ನು ಲೈಟಾಗಿ ತೆಗೆದುಕೊಂಡಿಲ್ಲ. ಇಷ್ಟು ಆಗಲಿದೆ ಅಂತ ಅಂದಾಜಿಸಿರಲಿಲ್ಲ. ಅದು ಪೊಲಿಟಿಕಲ್ ಪಾರ್ಟಿ ಅಲ್ಲ. ಮುಸ್ಲಿಂ ನಾಯಕರು ಕೆಲಸ ಮಾಡಿಲ್ಲ ಎಂಬ ಬಗ್ಗೆ ನಾನು ಮಾತನಾಡಲ್ಲ. ಈ ಬಗ್ಗೆ ಮುಖ್ಯಮಂತ್ರಿಗಳು ಎಲ್ಲಾ ವಿಷಯ ತಿಳಿಸಿದ್ದಾರೆ ಎಂದರು.

ತಮಿಳುನಾಡು ಫಲಿತಾಂಶದಿಂದ ಆಶ್ಚರ್ಯ ಆಗಿದೆ. ಅಲ್ಲಿ ಹೊಸ ಯುಗಾರಂಭವಾಗಿದೆ. ತಮಿಳುನಾಡು ಫಲಿತಾಂಶ ಗ್ರಹಿಸಲು ಆಗಲಿಲ್ಲ. ಶೇ.30–40 ವೋಟ್ ಹೋಗ ಪುಟ 2ಕ್ಕೆ



## ಮೊದಲ ಪುಟದಿಂದ

### 'ದೇವರ ನಾಡು' ಕೈವಶ

ಪಡೆದಿದೆ. 10 ವರ್ಷಗಳ ಎಲ್‌ಡಿಎಫ್ ಆಡಳಿತದ ನಂತರ ಕೇರಳದ ಜನರು ಈ ಬಾರಿ ಬದಲಾವಣೆಗೆ ಮತ ನೀಡಿದ್ದಾರೆ.

ಮಾಜಿ ಮುಖ್ಯಮಂತ್ರಿ ದಿವಂಗತ ಉಮ್ಮನ್ ಚಾಂಡಿ ಪುತ್ರ ಚಾಂಡಿ ಉಮ್ಮನ್ ಅವರು ಪುತುಪಳ್ಳಿಯಲ್ಲಿ ಸುಮಾರು 52,907 ಮತಗಳ ಬೃಹತ್ ಅಂತರದಿಂದ ಜಯಗಳಿಸಿದ್ದಾರೆ. ಹರಿಪಾಡ್ ಕ್ಷೇತ್ರದಲ್ಲಿ ರಮೇಶ್ ಚೆನ್ನಿತ್ತಲ 23,000ಕ್ಕೂ ಹೆಚ್ಚು ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ.

ಮುಖ್ಯಮಂತ್ರಿ ಪಿಣರಾಯಿ ವಿಜಯನ್ ನೇತೃತ್ವದ ಎಡರಂಗ ಮೈತ್ರಿಕೂಟಕ್ಕೆ ಆಡಳಿತ ವಿರೋಧಿ ಅಲೆ ತೀವ್ರವಾಗಿ ತಟ್ಟಿದೆ. ಪ್ರಮುಖವಾಗಿ ಯುವಜನರಿಗೆ ಉದ್ಯೋಗಾವಕಾಶಗಳ ಕೊರತೆ ಮತ್ತು ಕೇರಳ ಕಾಂಗ್ರೆಸ್ ನಾಯಕ ಜೋಸ್ ಕೆ.ಮಾಣಿ ಅವರಂತಹ ಹಿರಿಯ ನಾಯಕರ ಸೋಲು ಎಲ್‌ಡಿಎಫ್‌ಗೆ ಭಾರೀ ಆಘಾತ ನೀಡಿದೆ.

ಕೇರಳದಲ್ಲಿ ಪ್ರತಿ ಐದು ವರ್ಷಕ್ಕೊಮ್ಮೆ ಅಧಿಕಾರ ಬದಲಾಗುವ ಸಂಪ್ರದಾಯವನ್ನು ಈ ಫಲಿತಾಂಶ ಮತ್ತೆ ನೆನಪಿಸಿದೆ. ಕಾಂಗ್ರೆಸ್ ಮೈತ್ರಿಕೂಟದ ಸಂಘಟಿತ ಹೋರಾಟ ಮತ್ತು ಜನಕಲ್ಯಾಣ ಯೋಜನೆಗಳ ಭರವಸೆಗಳು ಜನರನ್ನು ಸೆಳೆಯುವಲ್ಲಿ ಯಶಸ್ವಿಯಾಗಿವೆ.

### ಸಮರ್ಥ್‌ಗೆ ಪ್ರಯಾಸದ ಜಯ

ದಾವಣಗೆರೆ ದಕ್ಷಿಣದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಶಾಮನೂರು ಅವರು ಬಿಜೆಪಿ ಅಭ್ಯರ್ಥಿ ಶ್ರೀನಿವಾಸ ದಾಸಕರಿಯಪ್ಪ ಅವರ ವಿರುದ್ಧ 5967 ಮತಗಳ ಅಂತರದಿಂದ ಗೆಲುವು ಸಾಧಿಸಿದರು. ಮತದಾನ ಆರಂಭಗೊಂಡ ಮೊದಲ 6 ಸುತ್ತಿನಲ್ಲಿಯೂ ಸಮರ್ಥ್ ಶಾಮನೂರು ಹಿನ್ನಡೆ ಕಾಯ್ದುಕೊಂಡಿದದ್ದರು. 7ನೇ ಸುತ್ತಿನಲ್ಲೂ ಬಿಜೆಪಿ ಅಭ್ಯರ್ಥಿ ಶ್ರೀನಿವಾಸ ದಾಸಕರಿಯಪ್ಪ ಮುನ್ನಡೆಯಲ್ಲಿದ್ದರು. ಆದರೆ 8 ಹಾಗೂ 9ನೇ ಸುತ್ತಿನಲ್ಲಿ ಅಂಕಿ–ಸಂಖ್ಯೆ ಉಲ್ಟಾ ಆಯಿತು. ಕೊನೆಗೆ ಗೆಲುವು ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಶಾಮನೂರು ಪಾಲಾಗಿದೆ. ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಅವರ ಬೆಂಬಲಿಗರು ವಿಜಯೋತ್ಸವ ಆಚರಿಸಿದರು.

### ಉಪ ಸಮರದಲ್ಲಿ ಕಾಂಗ್ರೆಸ್ ಗೆಲುವು

ಎಚ್.ವೈ.ಮೇಟಿ ಪುತ್ರ ಉಮೇಶ್ ಮೇಟಿ 98,919 ಮತಗಳನ್ನು ಪಡೆದರು. ಬಿಜೆಪಿಯ ಮಾಜಿ ಶಾಸಕ ವೀರಭದ್ರಯ್ಯ ಚರಂತಿಮಠ 76,587 ಮತಗಳನ್ನು ಪಡೆದರು. 2023ರ ವಿಧಾನಸಭಾ ಚುನಾವಣೆಯಲ್ಲಿ ಬಾಗಲಕೋಟೆಯಲ್ಲಿ ಎಚ್.ವೈ ಮೇಟಿ ಬಿಜೆಪಿಯ ಚರಂತಿಮಠ ಅವರನ್ನು 5,878 ಮತಗಳ ಅಂತರದಿಂದ ಸೋಲಿಸಿದ್ದರು.

### ಮತದಾರರ ಭಾವನೆ ಪ್ರತಿಬಿಂಬ: ಸಿಎಂ ಸಿದ್ದರಾಮಯ್ಯ ವಿಶ್ಲೇಷಣೆ

95 ಸ್ಥಾನಗ ಳಿಗೆ ಏರಿದ್ದೇವೆ ಎಂದು ಸಿದ್ದರಾಮಯ್ಯ ತಿಳಿಸಿದರು.

ಪಶ್ಚಿಮ ಬಂಗಾಳ ಮತ್ತು ತಮಿಳುನಾಡಿನಲ್ಲಿ ಆಡಳಿತ ವಿರೋಧಿ ಅಲೆ ಇದ್ದಿರಬಹುದು ಮತ್ತು ಅದು ಫಲಿತಾಂಶಗಳ ಮೇಲೆ ಪ್ರಭಾವ ಬೀರಿರಬಹುದು. ತಮಿಳುನಾಡಿನಲ್ಲಿ ಹೊಸದಾಗಿ ರಾಜಕೀಯ ಪ್ರವೇಶ ಪಡೆದ ಅಭ್ಯರ್ಥಿಗೆ ಅಭಿನಂದನೆ ಸಲ್ಲಿಸಿದರು.

### ಗ್ಯಾರಂಟಿ ಕೈಹಿಡಿದಿದೆ: ಡಿಕೆಶಿ

ಬಹುದು ಅಂದುಕೊಂಡಿದ್ದೆವು. ಈ ಪ್ರಮಾಣದಲ್ಲಿ ಬದಲಾವಣೆ ಆಗುತ್ತದೆ ಅಂತ ಅಂದುಕೊಂಡಿರಲಿಲ್ಲ ಎಂದರು.

ಕೇರಳ ಫಲಿತಾಂಶದ ಬಗ್ಗೆ ನಂಬಿಕೆ ಇತ್ತು. 10 ವರ್ಷ ಆಗಿತ್ತು. ಹೀಗಾಗಿ ಜನ ಬದಲಾವಣೆ ಬಯಸಿದ್ದಾರೆ. ಇವತ್ತು ದೊಡ್ಡ ಬೆಂಬಲ ಸಿಕ್ಕಿದೆ. ಅಸ್ಸಾಂನಲ್ಲಿ ಪಾರ್ಟಿ ಡ್ಯೂಟಿ ಮಾಡಿದ್ದೇನೆ. ಹೆಚ್ಚು ಸೀಟ್ ನಿರೀಕ್ಷೆ ಇತ್ತು. ಪಶ್ಚಿಮ ಬಂಗಾಳದಲ್ಲಿ ವೋಟ್ ಡಿಲೀಟ್ ಮಾಡಿದ್ದಾರೆ. ಮೆಷಿನ್ ಕೂಡ ಸಮಸ್ಯೆ ಮಾಡಿದ್ದರು. ಗೆಲ್ಲಲೇಬೇಕು ಅನ್ನೋ ಕಾರಣಕ್ಕೆ ಬಿಜೆಪಿ ಏನೇನೋ ಮಾಡಿದ್ದಾರೆ ಎಂದು ಡಿಕೆ ಶಿವಕುಮಾರ್ ಆರೋಪಿಸಿದರು.

### ಜೈಲಿನಲ್ಲಿ ದರ್ಶನ್‌ಗೆ ಸೌಕರ್ಯ: ವರದಿ ನೀಡಲು ಸುಪ್ರೀಂ ಸೂಚನೆ

ನಡೆಸಿದ ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ಜೆಬಿ ಪಾರ್ದಿವಾಲಾ ನೇತೃತ್ವದ ಪೀಠ, ರಾಜ್ಯ ಸರ್ಕಾರಕ್ಕೆ ಹಾಗೂ ವಿಚಾರಣಾಧೀನ ನ್ಯಾಯಾಲಯಕ್ಕೆ 1 ವಾರದೊಳಗೆ ವರದಿ ಸಲ್ಲಿಸಲು ಸೂಚಿಸಿದೆ. ಜೈಲಿನಲ್ಲಿ ಮೂಲಸೌಕರ್ಯ ಒದಗಿ ಸಲಾ ಗಿದೆಯೇ ಎಂದು ರಾಜ್ಯ ಸರ್ಕಾರಕ್ಕೆ ಹಾಗೂ ಸಾಕ್ಷಿಗಳ ವಿಚಾರಣೆ ಪ್ರಗತಿ ಬಗ್ಗೆ ವಿಚಾರಣಾ ನ್ಯಾಯಾಲಯಕ್ಕೆ ನಿರ್ದೇಶನ ನೀಡಿದೆ.

ದರ್ಶನ್‌ಗೆ ಜೈಲಿನಲ್ಲಿ ಮೂಲಸೌಕರ್ಯ ನೀಡಿಲ್ಲ.

ದರ್ಶನ್ ಅವ ರನ್ನು ಬೆಳಕು ಇಲ್ಲದ ಸೆಲ್‌ನಲ್ಲಿ ಇರಿಸಲಾಗಿದೆ ಎಂದು ಹಿರಿಯ ವಕೀಲ ಮುಕುಲ್ ರೋಹಟಗಿ ವಾದಿಸಿದ್ದರು. ವಾದ ಆಲಿಸಿದ ನ್ಯಾಯಾಲಯ ಈವರೆಗೆ ಎಷ್ಟು ಸಾಕ್ಷಿಗಳ ವಿಚಾರಣೆಯಾಗಿದೆ. ಇನ್ನು ಉಳಿದ ಸಾಕ್ಷ್ಯಗಳ ವಿಚಾರಣೆ ಪ್ರಕ್ರಿಯೆಗೆ ಎಷ್ಟು ಸಮಯ ಬೇಕು ಎಂಬ ಬಗ್ಗೆ ವಾರದಲ್ಲಿ ವರದಿ ನೀಡುವಂತೆ ಸೂಚನೆ ನೀಡಿದೆ.

### ಜೀವರಾಜ್‌ಗೆ ಪ್ರಮಾಣ ಪತ್ರ

ಅಭ್ಯರ್ಥಿ ಜೀವರಾಜ್‌ಗೆ 692 ಅಂಚೆ ಮತ, ಕಾಂಗ್ರೆಸ್ ಅಭ್ಯರ್ಥಿ ರಾಜೇಗೌಡ 569 ಅಂಚೆ ಮತ ಬಿದ್ದಿತ್ತು. ಮರು ಎಣಿಕೆಯಲ್ಲಿ ಜೀವರಾಜ್ 690 ಮತ (2 ಮತ ಕಡಿಮೆ) ರಾಜೇಗೌಡ 314 ಮತ (251 ಮತ ಕಡಿಮೆ) ಪಡೆದಿದ್ದಾರೆ. ಮರು ಎಣಿಕೆಯಲ್ಲಿ ರಾಜೇಗೌಡರಿಗೆ ಬಿದ್ದ 318 ಮತಗಳು ಅಸಿಂಧು ಎಂದು ಘೋಷಿಸಲಾಗಿದೆ. ಈ ಮೂಲಕ ಅಂಚೆ ಮತಗಳ ಮರು ಎಣಿಕೆಯಲ್ಲಿ 52 ಮತಗಳಿಂದ ಬಿಜೆಪಿ ಅಭ್ಯರ್ಥಿ ಜೀವರಾಜ್ ಗೆಲುವು ಸಾಧಿಸಿದ್ದಾರೆ.

### ತಮಿಳುನಾಡಿಗೆ ವಿಜಯ್ 'ದಳಪತಿ'

ಗೇಮ್ ಚೇಂಜರ್ ಆಗಿದೆ ಎನ್ನಲಾಗುತ್ತಿದೆ.

ವಿದ್ಯಾರ್ಥಿಗಳಿಗಾಗಿ 25 ಲಕ್ಷ ರೂ.ವರೆಗೆ ಅಡಮಾನ ರಹಿತ ಶೈಕ್ಷಣಿಕ ಸಾಲದ ಭರವಸೆ. ಮೀನುಗಾರರಿಗೆ ಕನಿಷ್ಠ ಬೆಂಬಲ ಬೆಲೆ ಘೋಷಣೆ. ವ್ಯವಸ್ಥಿತ ಭ್ರಷ್ಟಾಚಾರದ ವಿರುದ್ಧ ವಿಜಯ್ ನೀಡಿದ ಕರೆಯು ಮಧ್ಯಮ ವರ್ಗದ ಜನರನ್ನು ಆಕರ್ಷಿಸಿತ್ತು.

ವಿಜಯ್ ಕೇವಲ ಸಿನಿಮೀಯ ಶೈಲಿಯಲ್ಲಿ ಪ್ರಚಾರ ಮಾಡದೆ ಸಂಘಟನಾತ್ಮಕವಾಗಿ ಕೆಲಸ ಮಾಡಿದ್ದರು. ರಾಜ್ಯಾದ್ಯಂತ ಸುಮಾರು 69,000 ಬೂತ್ ಏಜೆಂಟ್‌ಗಳನ್ನು ನೇಮಿಸಿ, ಬಲಿಷ್ಠ ಐಟಿ ವಿಭಾಗದ ಮೂಲಕ ಸಾಮಾಜಿಕ ಜಾಲತಾಣಗಳಲ್ಲಿ ಅಲೆ ಸೃಷ್ಟಿಸಿದ್ದು ಈ ಬಾರಿ ಡಿಎಂಕೆ ಪಲ್ಟಿ ಹೊಡೆಯಲು ಪ್ರಮುಖ ಕಾರಣವಾಗಿದೆ ಎನ್ನಲಾಗಿದೆ.

ದ್ರಾವಿಡ ರಾಜಕಾರಣದ ದ್ವಿಪಕ್ಷೀಯ ಯುಗಕ್ಕೆ ಅಂತ್ಯಹಾಡಿರುವ ವಿಜಯ್, ತಮಿಳುನಾಡಿನ ಜನಸಾಮಾನ್ಯರ ಧ್ವನಿಯಾಗಿ ಮೂಡಿಬಂದಿದ್ದಾರೆ. ಆಡಳಿತ ವಿರೋಧಿ ಅಲೆ ಮತ್ತು ತಮ್ಮ ಪ್ರಭಾವಿ ವ್ಯಕ್ತಿತ್ವದ ಸಮಾಗಮದಿಂದ ವಿಜಯ್ ಈಗ ತಮಿಳುನಾಡಿನ ರಾಜಕೀಯ ಇತಿಹಾಸದಲ್ಲಿ ಹೊಸ ಅಧ್ಯಾಯ ಬರೆದಿದ್ದಾರೆ.

### ಕಾಂಗ್ರೆಸ್‌ಗೆ ಟಿವಿಕೆ ಆಹ್ವಾನ

110 ಸ್ಥಾನಗಳನ್ನು ಗಳಿಸಿರುವುದರಿಂದ ಸರ್ಕಾರ ರಚಿಸಲು ಮೈತ್ರಿ ಪಕ್ಷಗಳ ಅಗತ್ಯವಿದೆ. ಹೀಗಾಗಿ ಟಿವಿಕೆ ಜೊತೆ ಸೇರಿ ಸರ್ಕಾರ ರಚನೆಗೆ ಅಗತ್ಯ ಬೆಂಬಲ ನೀಡುವಂತೆ ವಿಜಯ್ ಅವರ ತಂದೆ ಎಸ್.ಎ ಚಂದ್ರಶೇಖರ್ ಮುಕ್ತ ಆಹ್ವಾನವನ್ನು ನೀಡಿದ್ದಾರೆ. ಅಗತ್ಯ ಸಂಖ್ಯೆಗಳನ್ನು ಪಡೆಯಲು ಟಿವಿಕೆ ಕಾಂಗ್ರೆಸ್‌ನೊಂದಿಗೆ ಅಧಿಕಾರವನ್ನು ಹಂಚಿಕೊಳ್ಳಲು ಸಿದ್ಧವಾಗಿದೆ ಎಂದು ಅವರು ತಿಳಿಸಿದ್ದಾರೆ.

ಕಾಂಗ್ರೆಸ್ ಈ ಹಿಂದೆ ಇತರ ಪಕ್ಷಗಳನ್ನು ಬೆಂಬಲಿಸುವ ಮೂಲಕ ತನ್ನ ಪ್ರಭಾವವನ್ನು ಕಳೆದುಕೊಂಡಿದೆ. ಈಗ ಈ ಹೊಸ ಮೈತ್ರಿ ಮೂಲಕ ಅಧಿಕಾರವನ್ನು ಮರಳಿ ಪಡೆಯುವ ಅವಕಾಶವನ್ನು ಹೊಂದಿದೆ ಎಂದು ಅವರು ಹೇಳಿದ್ದಾರೆ.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ಬಿಜೆಪಿ ಗೆಲುವು: ಮೈಸೂರಲ್ಲಿ ಸಂಭ್ರಮಾಚರಣೆ



ಮೈಸೂರು: ಪಶ್ಚಿಮ ಬಂಗಾಳ ಸೇರಿ ಮೂರು ರಾಜ್ಯಗಳಲ್ಲಿ ಬಿಜೆಪಿ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು.

ಈ ವೇಳೆ ಶಾಸಕ ಟಿ.ಎಸ್.ಶ್ರೀವತ್ಸ ಮಾತನಾಡಿ, ಪಶ್ಚಿಮ ಬಂಗಾಳದಲ್ಲಿ ಇದೇ ಮೊದಲ ಬಾರಿ ಪೂರ್ಣ ಬಹುಮತದೊಂದಿಗೆ ಬಿಜೆಪಿ ಅಧಿಕಾರಕ್ಕೆ ಬರುತ್ತಿದೆ. ಮಮತಾ ಬ್ಯಾನರ್ಜಿಯವರ 15 ವರ್ಷಗಳ ದುರಾಡಳಿತ ಅಂತ್ಯಗೊಂಡಿದೆ. ಸಂವಿಧಾನ ವಿರೋಧಿಯಾಗಿ ನಡೆದುಕೊಂಡ ಮಮತಾ ಬ್ಯಾನರ್ಜಿಗೆ ಮತದಾರರು ತಕ್ಕ ಪಾಠ ಕಲಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಚಿವ ಅಮಿತ್ ಶಾ, ಬಿಜೆಪಿ ರಾಷ್ಟ್ರಾಧ್ಯಕ್ಷ ನಿತಿನ್ ನಬಿನ್ ಜೊತೆಗೆ ಲಕ್ಷಾಂತರ ಕಾರ್ಯಕರ್ತರು ಪಕ್ಷದ ಗೆಲುವಿಗೆ ಶ್ರಮಿಸಿದ್ದಾರೆ. ಅಸ್ಸಾಂ ಮತ್ತು ಪುದುಚೇರಿಯಲ್ಲೂ ಬಿಜೆಪಿ ಅಭೂತಪೂರ್ವ ಗೆಲುವು ಸಾಧಿಸಿದೆ. ಮಮತಾ ಬ್ಯಾನರ್ಜಿ ಮಹಿಳಾ ಮೀಸಲಾತಿ ವಿರೋಧಿಸಿದ್ದ ಫಲ ಇದಾಗಿದೆ. ತನಿಖಾಧಿಕಾರಿ, ಚುನಾವಣಾಧಿಕಾರಿ ಹಾಗೂ ನ್ಯಾಯಾಮೂರ್ತಿಗಳಿಗೂ ಬೆಲೆ ನೀಡದೇ ಏಕಮುಖ ಧೋರಣೆ ತೋರಿದ್ದಕ್ಕೆ ಜನತೆಯೇ ಅವರಿಗೆ ತಕ್ಕಪಾಠ ಕಲಿಸಿದ್ದಾರೆಂದರು.

ಪಶ್ಚಿಮ ಬಂಗಾಳದಂತೆ ಕರ್ನಾಟದಲ್ಲೂ ಕಾಂಗ್ರೆಸ್ ದುರಾಡಳಿತ ನಡೆಸುತ್ತಿದೆ. ಮುಂಬರುವ ಕರ್ನಾಟಕದ ಚುನಾವಣೆಯಲ್ಲೂ ಪಶ್ಚಿಮ ಬಂಗಾಳದ ಮಾದರಿಯಲ್ಲೇ ಫಲಿತಾಂಶ ಬರಲಿದೆ. ರಾಜ್ಯದಲ್ಲೂ ದುರಾಡಳಿತ ಮಿತಿಮೀರಿದೆ. ಎರಡು ಕ್ಷೇತ್ರಗಳ ಉಪಚುನಾವಣೆಯಲ್ಲಿ ಅನುಕಂಪ ಕೆಲಸ ಮಾಡಿದೆ. ಉಪ ಚುನಾವಣೆಯಲ್ಲಿ ಮತದಾರರು ಆಡಳಿತಾರೂಢ ಪಕ್ಷಕ್ಕೆ ಮತಹಾಕುವುದು ವಾಡಿಕೆ. ನಾವು ಅಧಿಕಾರದಲ್ಲಿದ್ದಾಗ ನಡೆದ ಉಪ ಚುನಾವಣೆಯಲ್ಲಿ ಬಿಜೆಪಿ ಗೆಲುವು ಸಾಧಿಸಿತ್ತು. ಎರಡು ಕ್ಷೇತ್ರಗಳ ಉಪ ಚುನಾವಣೆಯಲ್ಲಿ ಅದು ಮರುಕಳಿಸಿದೆ. ಮುಂಬರುವ ಸಾರ್ವತ್ರಿಕ ಚುನಾವಣೆಯಲ್ಲಿ ಆಡಳಿತಾರೂಢ ಕಾಂಗ್ರೆಸ್ ಪಕ್ಷ ಹೀನಾಯವಾಗಿ ಸೋಲು ಕಾಣಲಿದೆ ಎಂದರು.

ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ ಮಾತನಾಡಿ, ನಿರೀಕ್ಷೆಗೂ ಮೀರಿದ ಗೆಲುವು ಇದಾಗಿದೆ. ಇದೊಂದು ಐತಿಹಾಸಿಕ ರಾಜಕೀಯ ಬದಲಾವಣೆಯಾಗಿದ್ದು, ಮತದಾರರ ಅಭಿಪ್ರಾಯ ಬಿಜೆಪಿ ಪರವಾಗಿ ಎಂಬ ಫಲಿತಾಂಶ ಬಂದಿದೆ. ರಾಜ್ಯ ರಾಜಕೀಯದಲ್ಲಿಯೂ ಮುಂದಿನ ದಿನಗಳಲ್ಲಿ ಬದಲಾವಣೆಗಳಾಗಲು ಇದು ಸಂಕೇತವಾಗಿದೆ. ಹಿಂದೂಗಳು, ಮಹಿಳೆಯರಿಗೆ ತೊಂದರೆ ನೀಡುತ್ತಿದ್ದ ಮಮತಾ ಬ್ಯಾನರ್ಜಿ ದುರಾಡಳಿತ ಅಂತ್ಯವಾಗಿದೆ. 2028ರ ಚುನಾವಣೆಗೆ ಇದು ದಿಕ್ಸೂಚಿಯಾಗಿದೆ. ಪಾಂಡಿಚೇರಿ, ಅಸ್ಸಾಂನಲ್ಲಿಯೂ ಪಕ್ಷ ಅಭೂತ ಪೂರ್ವ ಗೆಲುವು ಸಾಧಿಸಿರುವುದು ನಮ್ಮೆಲ್ಲರ ರಾಷ್ಟ್ರೀಯ ನಾಯಕರ ಶ್ರಮ ಎಂದರು.

ಬಿಜೆಪಿ ಗ್ರಾಮಾಂತರ ಜಿಲ್ಲಾಧ್ಯಕ್ಷ ಎನ್.ಸುಬ್ಬಣ್ಣ ಮಾತನಾಡಿ, ಮೂರು ರಾಜ್ಯಗಳಲ್ಲಿಯೂ ಬಿಜೆಪಿ ಜಯಭೇರಿ ಭಾರಿಸಿದೆ. ಅದರಲ್ಲೂ ತಮಿಳುನಾಡಿನಲ್ಲಿ ಹಿಂದೂ ವ್ಯವಸ್ಥೆಯನ್ನು ಟೀಕೆ ಮಾಡುತ್ತಿದ್ದ ಸ್ಟಾಲಿನ್ ಸೋಲು ಸ್ವಾಗತಿಸುತ್ತೇವೆ. ಮುಂಬರ ಚುನಾವಣೆಗಳಿಗೆ ಈ ಫಲಿತಾಂಶಗಳು ದಿಕ್ಸೂಚಿಯಾಗಿದೆ ಎಂದರು. ಬಿಜೆಪಿ ಗ್ರಾಮಾಂತರ ಮಾಜಿ ಜಿಲ್ಲಾಧ್ಯಕ್ಷೆ ಮಂಗಳಾ ಸೋಮಶೇ ಖರ್, ವಸ್ತುಪ್ರದರ್ಶನ ಪ್ರಾಧಿಕಾರದ ಮಾಜಿ ಅಧ್ಯಕ್ಷ ಮಿರ್ಲೆ ಶ್ರೀನಿವಾಸ್‌ಗೌಡ, ಮೈಮುಲ್ ನಿರ್ದೇಶಕ ಸದಾನಂದ, ಬಿಜೆಪಿ ವಕ್ತಾರ ಕೆ.ವಸಂತ್‌ಕುಮಾರ್, ಮುಖಂಡರಾದ ಡಾ.ಈ.ಸಿ. ನಿಂಗರಾಜೇಗೌಡ, ಎಂ.ಅಪ್ಪಣ್ಣ, ನಗರವಕ್ತಾರ ಎಂ. ಮೋಹನ್, ಮಹೇಶ್ ರಾಜೇ ಅರಸ್, ಬಿ.ಎಂ.ಸಂತೋಷ್ ಕುಮಾರ್, ಮುಖಂಡರಾದ ಪುನೀತ್‌ಗೌಡ, ದೇವರಾಜ್, ಪ್ರದೀಪಕುಮಾರ್, ಡಿ.ಲೋಹಿತ್, ಶಿವರಾಜ್, ಗಿರಿಗೌಡ ಇನ್ನಿತರರು ಉಪಸ್ಥಿತರಿದ್ದರು.

# ಅಕ್ಕ ಕೆಫೆಯಿಂದ ಸ್ತ್ರೀ ಸಬಲೀಕರಣ

## ಸಂಸದ ಸುನೀಲ್ ಬೋಸ್ ಅಭಿಮತ | 'ಅಕ್ಕಕೆಫೆ' 'ಮಲತ್ಯಾಜ್ಯ ನಿರ್ವಹಣಾ ಘಟಕ ಉದ್ಘಾಟನೆ



ಗುಂಡ್ಲುಪೇಟೆ (ಚಾಮರಾಜನಗರ): ಮಹಿಳೆಯರೇ ಸ್ವತಃ ಊಟ–ತಿಂಡಿ ತಯಾರಿಸಿ, ಕೈಗೆಟುಕುವ ವಿಶೇಷ ದರದಲ್ಲಿ ಗ್ರಾಹಕರಿಗೆ ಉಣಬಡಿಸುವ 'ಅಕ್ಕ ಕೆಫೆ' ಯೋಜನೆಯು ಮಹಿಳಾ ಸಬಲೀಕರಣ ಹಾಗೂ ಅವರ ಹಣಕಾಸು ಬಲವರ್ಧನೆಗೆ ಅತ್ಯಂತ ಸಹಕಾರಿಯಾಗಲಿದೆ ಎಂದು ಚಾಮರಾಜನಗರ ಲೋಕಸಭಾ ಸದಸ್ಯರಾದ ಸುನೀಲ್ ಬೋಸ್ ವಿಶ್ವಾಸ ವ್ಯಕ್ತಪಡಿಸಿದರು.

ಶನಿವಾರ (ಮೇ 04ರಂದು) ತೆರಕಣಾಂಬಿಯಲ್ಲಿ 'ಅಕ್ಕ ಕೆಫೆ' ಹಾಗೂ ತೆರಕಣಾಂಬಿ ಹೊರವಲಯ ಮತ್ತು ಕೊಳ್ಳೇಗಾಲ ತಾಲೂಕಿನ ಕೊಂಗರಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಒಟ್ಟು 176.89 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಲಾಗಿರುವ 'ಮಲತ್ಯಾಜ್ಯ ನಿರ್ವಹಣಾ ಘಟಕ'ವನ್ನು ಉದ್ಘಾಟಿಸಿ ಮಾತನಾಡಿದರು.

**ಮಲೆ ಮಹದೇಶ್ವರ ಬೆಟ್ಟದಲ್ಲೂ 'ಅಕ್ಕ ಕೆಫೆ' ಆರಂಭಕ್ಕೆ ಚಿಂತನೆ**

"ರಾಜ್ಯ ಸರ್ಕಾರವು ರಾಷ್ಟ್ರೀಯ ಜೀವನೋಪಾಯ ಮಿಷನ್ (ಎನ್.ಆರ್.ಎಲ್.ಎಂ) ಅಡಿಯಲ್ಲಿ ಮಹಿಳೆಯರೇ ಸಂಪೂರ್ಣವಾಗಿ ನಿರ್ವಹಿಸುವ ಈ ಅಕ್ಕ ಕೆಫೆಗಳನ್ನು ಪ್ರಾರಂಭಿಸಿದೆ. ಪ್ರಸ್ತುತ ತೆರಕಣಾಂಬಿಯಲ್ಲಿ ಆರಂಭವಾಗಿರುವ ಈ ಕೆಫೆಯನ್ನು ಮುಂದಿನ ದಿನಗಳಲ್ಲಿ ಮಲೆ ಮಹದೇಶ್ವರ ಬೆಟ್ಟ ಹಾಗೂ ತಾಲೂಕು ಕೇಂದ್ರಗಳಲ್ಲೂ ತೆರೆಯುವ ಉದ್ದೇಶವಿದೆ. ಅನ್ನ ಹಾಕುವ ಕಾಯಕ ಶ್ರೇಷ್ಠವಾಗಿದ್ದು, ಇಲ್ಲಿ ಶುಚಿ–ರುಚಿಗೆ ಆದ್ಯತೆ ನೀಡುವುದರ ಜೊತೆಗೆ ಸ್ವಚ್ಛತೆ ಕಾಪಾಡಿಕೊಂಡು ಮಾದರಿಯಾಗಿ ಕೆಫೆ ಮುನ್ನಡೆಸಬೇಕು," ಎಂದು ಸಂಸದರು ಸಲಹೆ ನೀಡಿದರು.

**ನೈರ್ಮಲ್ಯ ಹಾಗೂ ಸುಸ್ಥಿರ ಆರೋಗ್ಯಕ್ಕೆ ಆದ್ಯತೆ**

ಮಲತ್ಯಾಜ್ಯ ನಿರ್ವಹಣಾ ಘಟಕದ ಕುರಿತು ಮಾತನಾಡಿದ ಅವರು, "ಈ ಘಟಕದ ನಿರ್ಮಾಣದಿಂದ ಸುತ್ತಮುತ್ತಲಿನ ಗ್ರಾಮಗಳ ಜನರ ಆರೋಗ್ಯ ರಕ್ಷಣೆ ಹಾಗೂ ಸುಸ್ಥಿರ ನೈರ್ಮಲ್ಯಕ್ಕೆ ಉತ್ತೇಜನ ಸಿಗಲಿದೆ. ಗ್ರಾಮೀಣ ಭಾಗದ ಸ್ವಚ್ಛತೆ ಕಾಪಾಡುವ ನಿಟ್ಟಿನಲ್ಲಿ ಇದು ಪ್ರಮುಖ ಹೆಜ್ಜೆಯಾಗಿದ್ದು, ಗ್ರಾಮಗಳಲ್ಲಿ ಮಳೆ ನೀರು ಮತ್ತು ಚರಂಡಿಗಳು ಸುಗಮವಾಗಿ ಹರಿಯುವಂತಾಗಲು ಹೆಚ್ಚಿನ ಗಮನಹರಿಸಬೇಕಿದೆ," ಎಂದರು.

**ಮಹಿಳೆಯರ ಅಭಿವೃದ್ಧಿಯೇ ಸರ್ಕಾರದ ಗುರಿ: ಶಾಸಕ ಗಣೇಶ್ ಪ್ರಸಾದ್**

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕ ಹೆಚ್.ಎಂ. ಗಣೇಶ್ ಪ್ರಸಾದ್ ಮಾತನಾಡಿ, "ಅಕ್ಕ ಕೆಫೆ ಮಹಿಳೆಯರ ಸ್ವಾವಲಂಬಿ ಬದುಕಿಗೆ ಆಶಾಕಿರಣವಾಗಿದೆ. ಮೂರು ತಿಂಗಳಿಗೊಮ್ಮೆ ಕೆಫೆ ನಿರ್ವಹಣೆಯನ್ನು ಪರಿಶೀಲಿಸಿ, ಅದು ಉತ್ತಮವಾಗಿ ನಡೆಯಲು ಅಗತ್ಯ ಕ್ರಮ ವಹಿಸಲಾಗುವುದು. ರಾಜ್ಯ ಸರ್ಕಾರವು ಮಹಿಳೆಯರ ಅಭಿವೃದ್ಧಿಯನ್ನೇ ಪ್ರಮುಖ ಉದ್ದೇಶವಾಗಿಟ್ಟುಕೊಂಡು ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುತ್ತಿದೆ. ಇಂತಹ ಮಹಿಳಾ ಉತ್ತೇಜಕ ಕಾರ್ಯಕ್ರಮಗಳಿಗೆ ಸಾರ್ವಜನಿಕರ ಬೆಂಬಲ ಅತ್ಯಗತ್ಯ," ಎಂದು ಮನವಿ ಮಾಡಿದರು.

**ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಗಣ್ಯರು**

ಈ ಸಂದರ್ಭದಲ್ಲಿ ಕಾಡಾ ಅಧ್ಯಕ್ಷರಾದ ಪಿ.ಮರಿಸ್ವಾಮಿ, ತಾಲೂಕು ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಉಮಾಪತಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ (ಅಇಔ) ಮೋನಾ ರೋತ್, ಉಪ ಕಾರ್ಯದರ್ಶಿ ಶೃತಿ.ಡಿ.ಸಿ, ತಾಲೂಕು ಪಂಚಾಯತ್ ಇಒಗಳಾದ ಹೆಚ್.ಎ. ಷಣ್ಮುಗಂ, ಗುರುಶಾಂತಪ್ಪ ಬೆಳ್ಳುಂಡಿ, ಮುಖಂಡರಾದ ನಂಜುಂಡಪ್ರಸಾದ್, ನಂಜಪ್ಪ, ಬಸವರಾಜು, ಬೊಮ್ಮಯ್ಯ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಬಲಚವಾಡಿ ಗ್ರಾಮಕ್ಕೆ ಗೌರವ

**'ಜಲ ಅರ್ಪಣ್ ದಿವಸ್' ಅಂಗವಾಗಿ ಜಲ ಜೀವನ್ ಮಿಷನ್ ಯೋಜನೆಯಡಿ ಶೇ. 100ರಷ್ಟು ನಳ ಸಂಪರ್ಕ ಹೊಂದಿ, ದಿನದ 24 ಗಂಟೆಯೂ ಶುದ್ಧ ಕುಡಿಯುವ ನೀರು ಪೂರೈಸುತ್ತಿರುವ 'ಬಲಚವಾಡಿ' ಗ್ರಾಮವನ್ನು '24ಥ7 ನೀರು ಸರಬರಾಜು ಗ್ರಾಮ'ವೆಂದು ಘೋಷಿಸಿ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗೆ (ಕಆಔ) ಪ್ರಶಂಸನಾ ಪ್ರಮಾಣ ಪತ್ರ ವಿತರಿಸಲಾಯಿತು. ಇದರ ಜೊತೆಗೆ, ಎನ್.ಆರ್.ಎಲ್.ಎಂ ಅಡಿಯಲ್ಲಿ ಮಹಿಳೆಯರಿಂದಲೇ ಸಂಪೂರ್ಣವಾಗಿ ನಿರ್ವಹಿಸಲ್ಪಡುವ 'ಅಕ್ಕ ಕೆಫೆ'ಗೆ ಚಾಲನೆ ನೀಡಲಾಗಿದ್ದು, ಇದರ ಗುಣಮಟ್ಟ ಕಾಯ್ದುಕೊಳ್ಳಲು ಪ್ರತಿ ಮೂರು ತಿಂಗಳಿಗೊಮ್ಮೆ ಅಧಿಕಾರಿಗಳಿಂದ ಪರಿಶೀಲನೆ ನಡೆಸಲು ತೀರ್ಮಾನಿಸಲಾಗಿದೆ. ಅಲ್ಲದೆ, ಗ್ರಾಮಗಳಲ್ಲಿ ನೈರ್ಮಲ್ಯ ಕಾಪಾಡುವ ನಿಟ್ಟಿನಲ್ಲಿ 176.89 ಲಕ್ಷ ರೂ. ವೆಚ್ಚದಲ್ಲಿ ನಿರ್ಮಾಣವಾಗಿರುವ ಮಲತ್ಯಾಜ್ಯ ನಿರ್ವಹಣಾ ಘಟಕವನ್ನೂ ಇದೇ ಸಂದರ್ಭದಲ್ಲಿ ಲೋಕಾರ್ಪಣೆಗೊಳಿಸಲಾಯಿತು.**

### ಮೇ7ರಂದು ಡಾ.ಎಲ್. ರೇವಣ್ಣ ಸಿದ್ದಯ್ಯಗೆ ಅಭಿನಂದನೆ

ಮೈಸೂರು: ಜೆಎಸ್‌ಎಸ್ ಹಿರಿಯ ಪ್ರ.ನಿ. ವಿದ್ಯಾರ್ಥಿಗಳ ಗೃಹ ನಿರ್ಮಾಣ ಸಹಕಾರ ಸಂಘ, ಜೆಎಸ್‌ಎಸ್ ಹಿರಿಯ ವಿದ್ಯಾರ್ಥಿಗಳ ಸಂಘ, ಮೈಸೂರು– ಚಾಮರಾಜನಗರ ಜಿಲ್ಲಾ ಗುಬ್ಬಿ ತೋಟದಪ್ಪನವರ ವಿದ್ಯಾರ್ಥಿ ನಿಲಯಗಳ ವತಿಯಿಂಧ ಮೇ 7 ರಂದು ಮಧ್ಯಾಹ್ನ 2ಕ್ಕೆ ವರುಣಾದ ಶಿವರಾತ್ರಿ ರಾಜೇಂದ್ರ ಅನುಭವ ಮಂಟಪದ ಗೌರವ ಡಾಕ್ಟರೇಟ್‌ಗೆ ಭಾಜನರಾಗಿರುವ ಡಾ.ಎಲ್.ರೇವಣ್ಣ ಸಿದ್ದಯ್ಯ ಅವರಿಗೆ ಅಭಿನಂದನಾ ಸಮಾರಂಭ ಆಯೋಜಿಸಲಾಗಿದೆ ಎಂದು ಸಹಕಾರ ಸಂಘದ ಅಧ್ಯಕ್ಷ ಎ.ಎಸ್. ಚನ್ನಬಸಪ್ಪ ತಿಳಿಸಿದರು.

ಶಿವರಾತ್ರಿ ದೇಶಿ ಕೇಂದ್ರ ಸ್ವಾಮೀಜಿ ಸಾನ್ನಿಧ್ಯ ವಹಿಸುವರು, ತಾವು ಅಧ್ಯಕ್ಷತೆ ವಹಿಸ ಲಿದ್ದು, ಎಚ್.ಎಸ್. ಚಂದ್ರಮೌಳಿ ಅಭಿನಂದನಾ ನುಡಿ ಆಡುವರು, ಡಿ.ಪಿ. ಸತೀಶ್, ಜೆ.ಬಿ. ರಂಗಸ್ವಾಮಿ ಅತಿಥಿಗಳಾಗಿರುವರು. ಇನ್ನಿತರ ಪದಾಧಿಕಾರಿಗಳಾದ ಎ.ಎಸ್. ಗುರುಸ್ವಾಮಿ, ಸುಬ್ಬಪ್ಪ, ವಾಟಾಳ್ ಆನಂದ್, ಸಿ. ರಾಜಶೇಖರಮೂರ್ತಿ ಇದ್ದರು.



# ಬಿಜೆಪಿ ಮಂಡಲದಿಂದ ವಿಜಯೋತ್ಸವ



ಗುಂಡ್ಲುಪೇಟೆ: ಪಂಚರಾಜ್ಯ ಚುನಾವಣೆಯಲ್ಲಿ 3 ರಾಜ್ಯ ಗಳಲ್ಲಿ ಪಶ್ಚಿಮ ಬಂಗಾಳ, ಅಸ್ಸಾಂ, ಮತ್ತು ಪುದುಚೇರಿ ಬಿಜೆಪಿ ಅಧಿಕಾರಿಕ್ಕೆ ಬಂದ ಹಿನ್ನೆಲೆ ಪಟ್ಟಣದಲ್ಲಿ ಬಿಜೆಪಿ ಮಂಡಲದ ವತಿಯಿಂದ ವಿಜಯೋತ್ಸವ ಆಚರಿಸಲಾಯಿತು.

ಪಟ್ಟಣದ ಎಂಡಿಸಿಸಿ ಸರ್ಕಲ್ ಬಳಿ ಜಮಾವಣೆ ಗೊಂಡ ಬಿಜೆಪಿ ಮುಖಂಡರು ಪ್ರಧಾನ ಮಂತ್ರಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಷಾ ಪರ ಘೋಷಣೆ ಕೂಗಿ ಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮಿಸಿದರು. ಈ ವೇಳೆ ಮಾಜಿ ಶಾಸಕ ಹಾಗೂ ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನಕುಮಾರ್ ಮಾತನಾಡಿ, ಪಂಚರಾಜ್ಯ ಚುನಾವಣೆಯ 5 ರಾಜ್ಯಗಳ ಪೈಕಿ 3 ರಾಜ್ಯಗಳಲ್ಲಿ ಬಿಜೆಪಿ ಪಕ್ಷ ಬಹುಮತದಿಂದ ಗೆದ್ದು ವಿಜಯೋತ್ಸವ ಆಚರಿಸುತ್ತಿದೆ. ಇದಕ್ಕೆ ಪ್ರಧಾನಿ ನರೇಂದ್ರ ಮೋದಿ ಒಳ್ಳೆಯ ಜನಪರ ಕೆಲಸಗಳೇ ಕಾರಣ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ಮಹದೇವಪ್ರಸಾದ್, ಪುರಸಭೆ ಮಾಜಿ ಅಧ್ಯಕ್ಷ ಎಲ್.ಸುರೇಶ್, ನಾಗೇಶ್, ಕಲ್ಲಹಳ್ಳಿ ಮಹೇಶ್, ನಾಗೇಂದ್ರ ಮಾಡ್ರಹಳ್ಳಿ, ಸುನೀಲ್ ಮೂಡ್ಲು, ಗರಹನಹಳ್ಳಿ ಮಹೇಂದ್ರ, ನಮೋ ಮಂಜು, ಅಂಕಹಳ್ಳಿ ಮಹೇಂದ್ರ, ಶಿಂಡನಪುರ ಮಂಜುನಾಥ್ ಎಸ್.ಸಿ, ತಾಪಂ ಮಾಜಿ ಸದಸ್ಯ ರೇವಣ್ಣ ಕಬ್ಬಹಳ್ಳಿ, ರೇವಣ್ಣ ಹಂಗಳ ಪುರ, ಸೇರಿದಂತೆ ಮುಖಂಡರು ಕಾರ್ಯಕರ್ತರು ಹಾಜರಿದ್ದರು.

## ಮೊದಲ ಪುಟದಿಂದ

### ಪ.ಬಂಗಾಳದ ದೀದಿ ಕೋಟೆ ಛಿದ್ರ

ನಾಯಕ ತ್ವವನ್ನು ಉಳಿಸಿಕೊಂಡಿದೆ. ಪಶ್ಚಿಮ ಬಂಗಾಳ ಗೆಲುವಿನ ನಂತರ ಬಿಜೆಪಿ 15 ರಾಜ್ಯಗಳಲ್ಲಿ ಸ್ವತಂತ್ರವಾಗಿ ಆಡಳಿತ ನಡೆಸಲಿದೆ. ಬಿಹಾರ (ಜೆಡಿಯು ಜೊತೆ), ಆಂಧ್ರಪ್ರದೇಶ (ಟಿಡಿಪಿ ಜೊತೆ), ನಾಗಾಲ್ಯಾಂಡ್ (ನಾಗಾ ಪೀಪಲ್ಸ್ ಫ್ರಂಟ್ ಜೊತೆ), ಮೇಘಾಲಯ (ನ್ಯಾಷನಲ್ ಪೀಪಲ್ಸ್ ಪಾರ್ಟಿ ಜೊತೆ) ಮೈತ್ರಿಕೂಟ ಆಡಳಿತವಿರುವ ರಾಜ್ಯಗಳ ಸಂಖ್ಯೆ 21ಕ್ಕೆ ಏರಿದೆ. ತಮಿಳುನಾಡಿನಿಂದ ಡಿಎಂಕೆ–ಕಾಂಗ್ರೆಸ್ ಮೈತ್ರಿಕೂಟವನ್ನು ಹೊರದಬ್ಬಲಾಗಿದೆ. ಆದರೆ ಕಾಂಗ್ರೆಸ್ ನೇತೃತ್ವದ ಯುನೈಟೆಡ್ ಡೆಮಾಕ್ರಟಿಕ್ ಫ್ರಂಟ್ (ಯುಡಿಎಫ್) ಕೇರಳದಲ್ಲಿ ಸರ್ಕಾರ ರಚಿಸಲು ಸಜ್ಜಾಗಿದೆ. ಕಾಂಗ್ರೆಸ್ ಕರ್ನಾಟಕ, ತೆಲಂಗಾಣ ಮತ್ತು ಹಿಮಾಚಲ ಪ್ರದೇಶದಲ್ಲಿ ಮಾತ್ರ ಸ್ವತಂತ್ರವಾಗಿ ಸರ್ಕಾರ ಹೊಂದಿದೆ. ಜಾರ್ಖಂಡ್‌ನಲ್ಲಿ ಹೇಮಂತ್ ಸೋರೆನ್ ನೇತೃತ್ವದ ಜೆಎಂಎಂ ಜೊತೆ ಕಾಂಗ್ರೆಸ್ ಮೈತ್ರಿ ಮಾಡಿಕೊಂಡಿದೆ. ಪಂಜಾಬ್‌ನಲ್ಲಿ ಭಗವಂತ್ ಮಾನ್ ನೇತೃತ್ವದ ಆಮ್ ಆದ್ಮಿ ಪಕ್ಷ (ಎಎಪಿ) ಇಂಡಿ ಒಕ್ಕೂಟದ ಭಾಗವಾಗಿಲ್ಲ.

# ಬಿಇಓ ರಾಜುಗೆ ಸದ್ಗುರು ದ್ರೋಣಾಚಾರ್ಯ ಪ್ರಶಸ್ತಿ



ಎಚ್.ಡಿ.ಕೋಟೆ: ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಮೈಸೂರು, ಬೆಂಗಳೂರಿನ ಕಾವ್ಯಶ್ರೀ ಚಾರಿಟಬಲ್ ಟ್ರಸ್ಟ್ ಹಾಗೂ ಮೈಸೂರಿನ ಅಸೋಸಿಯೇಷನ್ ಆಫ್ ಅಲೆಯನ್ಸ್ ಕ್ಲಬ್ ಇಂಟರ್ ನ್ಯಾಷನಲ್ ಸಂಸ್ಥೆ ಅವರು ಹೆಚ್.ಡಿ.ಕೋಟೆ ಕ್ಷೇತ್ರಶಿಕ್ಷಣಾಧಿಕಾರಿ ಸಿ.ಎನ್. ರಾಜು ಅವರಿಗೆ "ಸದ್ಗುರು ದ್ರೋಣಾಚಾರ್ಯ" ಪ್ರಶಸ್ತಿ ನೀಡಿ ಗೌರವಿಸಿವೆ.

ಎರಡು ವರ್ಷಗಳಿಂದ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯ ಫಲಿತಾಂಶದಲ್ಲಿ ಮೈಸೂರು ಜಿಲ್ಲೆಗೆ ಕೊನೆ ಸ್ಥಾನದಲ್ಲಿತ್ತು. ಒಂಬತ್ತು ತಿಂಗಳಲ್ಲಿ ಬಿಇಓ ಆಗಿ ಅಧಿಕಾರವಹಿಸಿ ಕೊಂಡ ರಾಜು, ಹಲವು ಯೋಜನೆಗಳನ್ನು ರೂಪಿಸಿದ್ದರು. ಪರಿಣಾಮ "2026ನೇ ಸಾಲಿನ ಫಲಿತಾಂಶದಲ್ಲಿ ಜಿಲ್ಲೆಗೆ ಮೊದಲ ಸ್ಥಾನಕ್ಕೆ" ಬರಲು ಕಾರಣವಾಗಿತ್ತು.

ಅಲ್ಪಾವಧಿಯಲ್ಲಿ ತೋರಿದ "ಸಾಧನೆ ಹಾಗೂ ಶೈಕ್ಷಣಿಕ ಕ್ಷೇತ್ರದಲ್ಲಿ ಸಲ್ಲಿಸಿರುವ ಅನನ್ಯ ಸೇವೆ" ಗುರುತಿಸಿ, ಮೈಸೂರಿನ ವಿಜಯನಗರದಲ್ಲಿರುವ ಕನ್ನಡ ಸಾಹಿತ್ಯ ಪರಿಷತ್ತಿನ ಕನ್ನಡ ಭವನದಲ್ಲಿ ಭಾನುವಾರ ನಡೆದ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗಿದೆ.

ಬೆಂಗಳೂರು ಸಿದ್ಧಾರೂಢ ಮಿಶನ್ ಆಶ್ರಮದ ಡಾ.ಆರೂಢ ಭಾರತೀ ಸ್ವಾಮೀಜಿ, ಕನ್ನಡಪ್ರಭ ದಿನಪತ್ರಿಕೆ ಕಾರ್ಯನಿರ್ವಾಹಕ ಸಂಪಾದಕ ಅಂಶಿಪ್ರಸನ್ನಕುಮಾರ್, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್,ಕರ್ನಾಟಕ ಸುಗಮ ಸಂಗೀತ ಪರಿಷತ್ ಅಧ್ಯಕ್ಷ ನಾಗರಾಜ್ ವಿ ಭೈರಿ, ಕನ್ನಡ ಪ್ರಾಧ್ಯಾಪಕ ಡಾ.ಬಿ ಪ್ರಹ್ಲಾದ್ ರೆಡ್ಡಿ, ಕವಯತ್ರಿ ಕೆ.ಟಿ.ಲತಾ, ಡಾ.ಟಿ.ತ್ಯಾಗರಾಜ್, ಡಾ.ಕೆ.ವಸಂತ

# ಸಿ.ಸಿ.ರಸ್ತೆ, ಚರಂಡಿ ಕಾಮಗಾರಿಗೆ



ಗುಂಡ್ಲುಪೇಟೆ: ತಾಲ್ಲೂಕಿನ ಮಡಹಳ್ಳಿ ಗ್ರಾಮದಲ್ಲಿ ಸುಮಾರು 40ಲಕ್ಷ ವೆಚ್ಚದಲ್ಲಿ ಸಿ.ಸಿ.ರಸ್ತೆ ಮತ್ತು ಚರಂಡಿ ಕಾಮಗಾರಿಗೆ ಶಾಸಕ ಎಚ್.ಎಂ.ಗಣೇಶ್ ಪ್ರಸಾದ್ ಗುದ್ದಲಿಪೂಜೆ ನೆರವೇರಿಸಿದರು.

ನಂತರ ಮಾತನಾಡಿ ಮುಖ್ಯಮಂತ್ರಿಗಳ ವಿಶೇಷ ಅನುದಾನದಲ್ಲಿ ಮಡಹಳ್ಳಿ ಗ್ರಾಮದಲ್ಲಿ ಸಿ.ಸಿ.ರಸ್ತೆ ಮತ್ತು ಚರಂಡಿ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಲಾಗಿದೆ ಹಾಗೂ ಉಪ್ಪಾರ ಸಮುದಾಯ ಭವನದ ಮುಂದುವರಿದ ಕಾಮಗಾರಿಗೆ 8 ಲಕ್ಷ ಅನುದಾನ ಬಿಡುಗಡೆಯಾಗಿದ್ದು ಶೀಘ್ರದಲ್ಲೇ ಕೆಲಸ ಆರಂಭಿಸಲಾಗುವುದು ಎಂದು ಹೇಳಿದರು.

ಮುಖ್ಯಮಂತ್ರಿಗಳ ವಿಶೇಷ ಅನುದಾನದಲ್ಲಿ ದೇವಸ್ಥಾನಗಳ ಅಭಿವೃದ್ಧಿ,ಸಮುದಾಯ ಭವನಗಳ ಅಭಿವೃದ್ಧಿ, ಲೋಕೋಪಯೋಗಿ ಇಲಾಖೆ ವತಿಯಿಂದ ರಸ್ತೆಗಳ ಅಭಿವೃದ್ಧಿಗೆ ಹಣ ಬಿಡುಗಡೆ ಮಾಡಲಾಗಿದೆ ವಿರೋಧ ಪಕ್ಷದವರು ಸರ್ಕಾರದಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಹಣವಿಲ್ಲ ಎಂದು ಟೀಕೆ ಮಾಡುತ್ತಾರೆ ಆದರೆ ಮುಖ್ಯಮಂತ್ರಿಗಳ ವಿಶೇಷ ಅನುದಾನ 50ಕೋಟಿ ನೀಡಿದ್ದು ಅಭಿವೃದ್ಧಿ ಕಾಮಗಾರಿ ಮಾಡಲಾಗುತ್ತಿದೆ ಎಂದರು. ಈ ಸಂಧರ್ಭದಲ್ಲಿ ಕಾಡ ಮಾಜಿ ಅಧ್ಯಕ್ಷ ಹಂಗಳ ನಂಜಪ್ಪ,ಟೌನ್ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಮಾಜಿ ಅಧ್ಯಕ್ಷ ಮಧು, ಮೂಖಹಳ್ಳಿ ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷ ಬಸವಣ್ಣ, ಗ್ರಾ.ಪಂ ಮಾಜಿ ಉಪಾಧ್ಯಕ್ಷ ಶಿವಮೂರ್ತಿ, ಲೋಕೇಶ್, ಹೊನ್ನಪ್ಪ, ಮಣಿ ಮಡಹಳ್ಳಿ, ಮಹದೇವಪ್ಪ, ಶ್ರೀಕಂತಪ್ಪ, ಛೆ.ನಾಗಪ್ಪ ಮಡಹಳ್ಳಿ ಗ್ರಾಮಸ್ಥರು ಇದ್ದರು.

# ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ



ಚಾಮರಾಜನಗರ: ತಾಲ್ಲೂಕಿನ ಕಾಡಂಚಿನ ಪುಣಜನೂರು ಗ್ರಾಮಪಂಚಾಯಿತಿಯ ಎತ್ತೇಗೌಡನದೊಡ್ಡಿ ಗ್ರಾಮಕ್ಕೆ ಶಾಸಕ ಸಿ.ಪುಟ್ಟರಂಗಶೆಟ್ಟಿ ಭೇಟಿನೀಡಿ, ನಿವಾಸಿಗಳ ಅಹವಾಲು ಸ್ವೀಕರಿಸಿದರು.

ಗ್ರಾಮದಲ್ಲಿ ಕುಡಿಯುವ ನೀರು ಸರಬರಾಜು, ರಸ್ತೆ ಮತ್ತು ಚರಂಡಿ ಸೇರಿದಂತೆ ಮೂಲಸೌಕರ್ಯ ಒದಗಿಸುವ ಕುರಿತು ಪರಿಶೀಲಿಸಿದರು.ಇದೇವೇಳೆ 40 ಲಕ್ಷ ರೂ.ವೆಚ್ಚದಲ್ಲಿ ಸಿಮೆಂಟ್ ಕಾಂಕ್ರಿಟ್ ರಸ್ತೆ ಹಾಗೂ ಚರಂಡಿನಿರ್ಮಾಣ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿದರು. ಇದೇವೇಳೆ ಮಾತನಾಡಿ, ತಮ್ಮ ಅಧಿಕಾರವಧಿಯಲ್ಲಿ ಕಾಡಂಚಿನ ಗ್ರಾಮಗಳ ಜನತೆಗೆ ಮೂಲಒದಗಿಸುತ್ತ ಬಂದಿದ್ದೇನೆ. ಆಶ್ರಯ ಮನೆ, ಗಂಗಾ ಕಲ್ಯಾಣ ಯೋಜನೆ ಸೇರಿದಂತೆ ಸರಕಾರ ಮಂಜೂರು ಮಾಡುವ ಅನುದಾನ ಹಾಗೂ ಸೌಲಭ್ಯಗಳನ್ನು ಜನರಿಗೆ ಪ್ರಾಮಾಣಕವಾಗಿ ತಲುಪಿಸುವ ಕೆಲಸ ಮಾಡಲಾಗುತ್ತಿದೆ,

ಸಂಬಂಧಪಟ್ಟ ಗುತ್ತಿಗೆದಾರರು ಗುಣಮಟ್ಟದ ರಸ್ತೆ ನಿರ್ಮಾಣ ಮಾಡಿ ಈ ಭಾಗದ ಸಾರ್ವಜನಿಕರ ಸಂಚಾರಕ್ಕೆ ಅನುವು ಮಾಡಿಕೊಡಬೇಕು ಎಂದು ಸೂಚನೆ ನೀಡಿದರು. ಹಾಡಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾದಲ್ಲಿ ಅಂತರ್ಜಲ ಪರೀಕ್ಷಕರನ್ನು ಕರೆಸಿ, ಪಾಯಿಂಟ್ ಮಾಡಿಸಿ, ನೀರುಬರುವ ಸಾಧ್ಯತೆ ಕಂಡುಬಂದರೆ ಕೊಳವೆ ಬಾವಿಕೊರೆಸಿ, ಜನರಿಗೆ ನೀರುಕೊಡಿ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಶಾಸಕರು ಅಂಗನವಾಡಿಗೆ ಭೇಟಿ ನೀಡಿ, ಮೂಲಸೌಕರ್ಯ ಕುರಿತು ಪರಿಶೀಲಿಸಿದರು. ತಮಗೆ ವಾಸಿಸಲು ಮನೆಗಳನ್ನು ನಿರ್ಮಿಸಿಕೊಡಬೇಕು ಎಂದು ನಿವಾಸಿಗಳು ಇದೇ ವೇಳೆ ಶಾಸಕರಿಗೆ ಮನವಿ ಮಾಡಿದರು. ಈ ಸಂದರ್ಭದಲ್ಲಿ ಪಿಎಸಿಸಿ ಅಧ್ಯಕ್ಷ ಮಣ ನಾಯಕ, ಗ್ರಾಪಂ ಮಾಜಿ ಉಪಾಧ್ಯಕ್ಷ ಶಿವನಾಯಕ, ಮುಖಂಡ ನಾಗವಳ್ಳಿ ನಾಗಯ್ಯ, ಮಹದೇವನಾಯಕ ಕೆಆರ್ಐಡಿಎಲ್ ಎಂಜಿನಿಯರ್ಗಳಾದ ಅರುಣ್, ಮಹದೇವಪ್ರಸಾದ್ ಎತ್ತೇಗೌಡನದೊಡ್ಡಿ ಗ್ರಾಮಸ್ಥರು ಹಾಜರಿದ್ದರು.

# ಕ್ರೀಡೆ ಆರೋಗ್ಯವಂತ ಸಮಾಜದ ಸಂಕೇತ

**ಉದ್ಯಮಿ ಹೊಸಹೊಳಲು ನಂಜುಂಡಸ್ವಾಮಿ***



ಕೆ.ಆರ್.ಪೇಟೆ: ಗ್ರಾಮೀಣ ಭಾಗದಲ್ಲಿ ಆಯೋಜಿಸುವ ಕ್ರೀಡೆಗಳು ಸಾಮರಸ್ಯಕ್ಕೆ ವೇದಿಕೆಯಾಗಿದ್ದು,ಜಾತಿ,ಮತ, ಪಂಥದ ಭೇದವಿಲ್ಲದೇ ಎಲ್ಲರನ್ನೂ ಒಂದುಗೂಡಿಸುವ ಶಕ್ತಿ ಕ್ರೀಡೆಗಿದೆ ಎಂದು ಉದ್ಯಮಿ ಹೊಸಹೊಳಲು ನಂಜುಂಡಸ್ವಾಮಿ ತಿಳಿಸಿದರು.

ಪಟ್ಟಣದ ನಾಲ್ವಡಿ ಕೃಷ್ಣರಾಜ ಒಡೆಯರ್ ತಾಲ್ಲೂಕು ಕ್ರೀಡಾಂಗಣದಲ್ಲಿ ಸ್ಟೇಡಿಯಂ ಬಾಯ್ಸ್ ವತಿಯಿಂದ ಏರ್ಪಡಿಸಿದ್ದ ಧರ್ಮಧ್ವಜ ಕಪ್ ಕ್ರಿಕೆಟ್ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದರು.

ಯಾವುದೇ ಕ್ರೀಡೆಗಳಲ್ಲಿ ಜಾತಿ ಮತವಿಲ್ಲದೆ ಯುವಕರ ಪ್ರತಿಭೆ ಗುರುತಿಸುವ ವೇದಿಕೆಯಾಗಿದೆ. ಕ್ರೀಡೆಯು ಸಕಾರಾತ್ಮಕತೆಯ ಮಾನಸಿಕತೆಯೊಂದಿಗೆ ದೈಹಿಕ ಶಕ್ತಿಯನ್ನು ತುಂಬುತ್ತದೆ ಹುಮ್ಮಸ್ಸಿನಿಂದ ಜೀವನ ನಡೆಸಲು ಕ್ರೀಡೆ ಸಹಕಾರಿಯಾಗಿದೆ. ಕ್ರೀಡಾಪಟುಗಳು ಸೋಲು ಗೆಲುವಿನ ಲೆಕ್ಕಾಚಾರ ಹಾಕುವ ಬದಲು ಕ್ರೀಡಾ ಸ್ಪೂರ್ತಿಯೊಂದಿಗೆ ಭಾಗವಹಿಸಬೇಕು.ಪಟ್ಟಣದಲ್ಲಿ ಹಲವು ಕ್ರಿಕೆಟ್ ಆಟಗಳನ್ನು ನಿಯೋಜನೆ ಮಾಡುತ್ತಿದ್ದು ಅಪ್ಪಟ ಕ್ರೀಡಾ ಪ್ರತಿಭೆಗಳು ಹೊರಬಂದು ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಗುರುತಿಸಿಕೊಳ್ಳುವಂತೆ ಮಾಡುವುದೆ ಈ ಟೂರ್ನಿಯ ಉದ್ದೇಶ ಎಂದು ನಾವು ಭಾವಿಸಿದೇನೆ ಎಂದ ಅವರು ಕ್ರೀಡಾಪಟುಗಳು ಕ್ರೀಡೆಯನ್ನು ಸವಾಲಾಗಿ ಸ್ವೀಕರಿಸಿ ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿದ್ದು, ಅಲ್ಲಿಯೂ ಉತ್ತಮ ಪ್ರದರ್ಶನ ನೀಡಿ ಗೆಲುವು ಸಾಧಿಸಿ.ಕ್ರೀಡೆಗಳಿಂದ ಸ್ಪರ್ಧಾ ಮನೋಭಾವ ಮೂಡುತ್ತದೆ. ವಿದ್ಯಾರ್ಥಿಗಳು ಓದಿಗಷ್ಟೇ ಸೀಮಿತವಾದರೆ ಮಾನಸಿಕ ಒತ್ತಡ ಹೆಚ್ಚುತ್ತದೆ.ಕ್ರೀಡೆಗಳಲ್ಲಿ ಭಾಗವಹಿಸಿದರೆ ಒತ್ತಡ ನಿವಾರಣೆಯಾಗುತ್ತದೆ. ಆದ್ದರಿಂದ ಮಕ್ಕಳಲ್ಲಿ ಕ್ರೀಡಾಸಕ್ತಿ ಬೆಳೆಸಬೇಕು ಎಂದು ಉದ್ಯಮಿ ನಂಜುಂಡಸ್ವಾಮಿ ಸಲಹೆ ನೀಡಿದರು

ಉದ್ಯಮಿ ನಂಜುಂಡಸ್ವಾಮಿ ಅವರನ್ನ ಧರ್ಮಧ್ವಜ ಯುವ ಬಳಗದ ಯುವಕರು ಪಟ್ಟಣದ ಟಿ.ಬಿ ವೃತ್ತದಿಂದ ತಾಲ್ಲೂಕು ಕ್ರೀಡಾಂಗಣದ ತನಕ ಬೈಕ್ ರ್ಯಾಲಿ ಮೂಲಕ ಅದ್ದೂರಿಯಾಗಿ ಸ್ವಾಗತಿಸಿದರು. ಈ ಸಂದರ್ಭದಲ್ಲಿ ವಿಘ್ನೇಶ್ವರ್, ವೆಂಕಟೇಶ್, ಶಶಿ, ರಕ್ಷಿತ್, ಶ್ರೀಧರ್, ಇಮ್ರಾನ್, ಅಣ್ಣಾಮಲೈ, ರವಿ ರಫೀಕ್, ಸೇರಿದಂತೆ ಸ್ಟೇಡಿಯಂ ಬಾಯ್ಸ್ ಯುವಕರ ಬಳಗದ ಯುವಕರು ಇದ್ದರು.

# ಸ್ಥಳೀಯ ಸಂಸ್ಥೆಗಳ ಬಲವರ್ಧನೆಗೆ ಒಲವು

## ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಸಭೆ । ಉಸ್ತುವಾರಿ ಸಚಿವರ ಉಪಸ್ಥಿತಿ



ಮಡಿಕೇರಿ: ಸ್ಥಳೀಯ ಸಂಸ್ಥೆಗಳ ಬಲವರ್ಧನೆ ಮತ್ತು ಆಡಳಿತದಲ್ಲಿ ಜನರ ಪಾಲ್ಗೊಳ್ಳುವಿಕೆಯನ್ನು ಖಚಿತಪಡಿಸುವ ಉದ್ದೇಶದಿಂದ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸೋಮವಾರ 'ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ'ಯ ಮಹತ್ವದ ಸಭೆಯನ್ನು ಆಯೋಜಿಸಲಾಗಿತ್ತು. ಕೊಡಗು ಜಿಲ್ಲಾ ಉಸ್ತುವಾರಿ ಸಚಿವರಾದ ಎನ್.ಎಸ್. ಭೋಸರಾಜು ಮತ್ತು ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಹಾಗೂ ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷರಾದ ಡಿ.ಆರ್. ಪಾಟೀಲ ಅವರ ಉಪಸ್ಥಿತಿಯಲ್ಲಿ ಈ ಸಭೆ ಜರುಗಿತು.

### ಸಂವಿಧಾನದ ಆಶಯದಂತೆ ಕಾರ್ಯನಿರ್ವಹಿಸಿ

**ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷರಾದ ಡಿ.ಆರ್. ಪಾಟೀಲ ಅವರು ಮಾತನಾಡಿ, "ಸಾರ್ವಜನಿಕರ ಪಾಲ್ಗೊಳ್ಳುವಿಕೆಯಿಂದ ಮಾತ್ರ ಯಾವುದೇ ಅಭಿವೃದ್ಧಿ ಯೋಜನೆಗಳು ಸಂಪೂರ್ಣ ಯಶಸ್ವಿಯಾಗಲು ಸಾಧ್ಯ. ಅಧಿಕಾರಿಗಳು ಜನರ ಬೇಡಿಕೆಗಳಿಗೆ ಅನುಗುಣವಾಗಿ, ಅವರ ಶ್ರೇಯೋಭಿವೃದ್ಧಿಗಾಗಿ ಸೂಕ್ತ ಕ್ರಿಯಾಯೋಜನೆ ಗಳನ್ನು ರೂಪಿಸಿ ಜೀವನಮಟ್ಟ ಸುಧಾರಣೆಗೆ ಕ್ರಮವಹಿಸಬೇಕು. ಗ್ರಾಮ ಪಂಚಾಯಿತಿಗಳಿಗೆ ಸರ್ಕಾರವು ಹೆಚ್ಚಿನ ಅಧಿಕಾರವನ್ನು ನೀಡಿದ್ದು, ಅದನ್ನು ಸಂವಿಧಾನದ ಆಶಯದಂತೆ ಹಾಗೂ ನಿಯಮಾನುಸಾರವಾಗಿ ಬಳಸಿಕೊಳ್ಳಬೇಕು" ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು. "ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯು ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಕಾರ್ಯ ನಿರ್ವಹಿಸುವ ಉನ್ನತ ಮಟ್ಟದ ಸಮಿತಿಯಾಗಿದೆ. ಇದು ಗ್ರಾಮೀಣಾಭಿವೃದ್ಧಿ ಇಲಾಖೆಯಡಿ ಜಿಲ್ಲಾ ಮಟ್ಟದ ಯೋಜನೆಗಳನ್ನು ಏಕೀಕರಿಸುತ್ತದೆ. ಗ್ರಾಮ ಪಂಚಾಯಿತಿಗಳು 'ಗ್ರಾಮ ಸರ್ಕಾರ'ಗಳಾಗಿ, ಹಾಗೂ ನಗರಸಭೆ, ಪುರಸಭೆಗಳು 'ಸ್ಥಳೀಯ ಸರ್ಕಾರ'ಗಳಾಗಿ ಕಾರ್ಯನಿರ್ವಹಿಸಿ ಜನರ ಬೇಡಿಕೆಗಳಿಗೆ ಸ್ಪಂದಿಸಬೇಕು" ಎಂದು ಅವರು ವಿವರಿಸಿದರು.**

### ಮಹಿಳಾ ಸಬಲೀಕರಣ ವಾರ್ಡ್ ಸಮಿತಿ ರಚನೆ

**ಮಹಿಳಾ ಸಬಲೀಕರಣದ ಬಗ್ಗೆ ಪ್ರಸ್ತಾಪಿಸಿದ ಪಾಟೀಲರು, "ವಿಕೇಂದ್ರೀಕೃತ ಆಡಳಿತ ವ್ಯವಸ್ಥೆಯು ಮಹಿಳೆಯರ ಸಬಲೀಕರಣಕ್ಕೆ ಪ್ರಮುಖ ಪಾತ್ರ ವಹಿಸುತ್ತದೆ" ಎಂದರು. ಅಲ್ಲದೆ, ಅಧಿಕಾರ ವಿಕೇಂದ್ರೀಕರಣದ ಹಿನ್ನೆಲೆಯಲ್ಲಿ ನಗರಸಭೆ, ಪುರಸಭೆ ವ್ಯಾಪ್ತಿಯ ಪ್ರತಿ ವಾರ್ಡ್ ಮಟ್ಟದಲ್ಲಿ ಜೂನ್ 15ರ ಒಳಗಾಗಿ 'ವಾರ್ಡ್ ಸಮಿತಿ' ಹಾಗೂ 'ನೆರೆಹೊರೆ ಗುಂಪು'ಗಳನ್ನು ಕಡ್ಡಾಯವಾಗಿ ರಚಿಸುವಂತೆ ಆದೇಶಿಸಿದರು.**

### ಜನರ ಸಹಭಾಗಿತ್ವವೇ ಅಭಿವೃದ್ಧಿಯ ಮೂಲ

ಸಭೆಯನ್ನುದ್ದೇಶಿಸಿ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್. ಭೋಸರಾಜು ಅವರು, "ಸ್ಥಳೀಯ ಸಂಸ್ಥೆಗಳನ್ನು ಬಲಪಡಿಸಿ ಅಭಿವೃದ್ಧಿಯತ್ತ ಕೊಂಡೊಯ್ಯುವಲ್ಲಿ ಕೇವಲ ಜನಪ್ರತಿನಿಧಿಗಳಷ್ಟೇ ಅಲ್ಲದೆ, ಸಾರ್ವಜನಿಕರ ಸಹಭಾಗಿತ್ವವೂ ಅತ್ಯಂತ ಪ್ರಮುಖವಾಗಿದೆ. ಸ್ಥಳೀಯ ಸಂಸ್ಥೆಗಳ ಅಭಿವೃದ್ಧಿಗಾಗಿ ನಿಖರವಾದ ಯೋಜನೆಗಳನ್ನು ರೂಪಿಸಿ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಈ ದಿಸೆಯಲ್ಲಿ ಎಲ್ಲಾ ವರ್ಗದ ಜನರೊಂದಿಗೂ ಚರ್ಚಿಸುವುದು ಅಗತ್ಯ" ಎಂದು ಸಲಹೆ ನೀಡಿದರು.

"ಯೋಜನೆಯ ಅನುಷ್ಠಾನವು ವ್ಯವಸ್ಥಿತ ರೀತಿಯಲ್ಲಿ ನಡೆಯಬೇಕು ಎನ್ನುವುದು ಸರ್ಕಾರದ ಬಹುದೊಡ್ಡ ಆಶಯವಾಗಿದೆ. ಸ್ಥಳೀಯರ ವಿಶ್ವಾಸವನ್ನು ಗಳಿಸಿ, ಅವರ ಅಭಿಪ್ರಾಯಗಳನ್ನು ಸಂಗ್ರಹಿಸಿ, ಅವುಗಳನ್ನು ಸರಿಯಾದ ರೀತಿಯಲ್ಲಿ ಜಾರಿಗೆ ತಂದಾಗ ಮಾತ್ರ ನೈಜ ಪರಿವರ್ತನೆ ಸಾಧ್ಯ. ನಾವು ಮಾಡುವ ಕೆಲಸ ಹಾಗೂ ಪ್ರಯತ್ನವು ಸರಿಯಾದ ದಿಕ್ಕಿನಲ್ಲಿರಬೇಕು" ಎಂದು ಕಿವಿಮಾತು ಹೇಳಿದರು.

### ಸದಸ್ಯರ ಅಹವಾಲುಗಳು ಮತ್ತು ಅಧಿಕಾರಿಗಳ ಸ್ಪಷ್ಟನೆ

**ಇದೇ ವೇಳೆ, ನಗರಸಭೆ ಸದಸ್ಯ ಅರುಣ್ ಶೆಟ್ಟಿ ಅವರು ಮಾತನಾಡಿ, ನಗರಸಭೆಯಲ್ಲಿ ಶೇ. 70ರಷ್ಟು ನೌಕರರ ಕೊರತೆಯಿದ್ದು, ಕೂಡಲೇ ಹುದ್ದೆಗಳನ್ನು ಭರ್ತಿ ಮಾಡಬೇಕು, ಬೀದಿ ನಾಯಿಗಳ ಹಾವಳಿ ನಿಯಂತ್ರಿಸಬೇಕು ಹಾಗೂ ಮಂದಗತಿಯಲ್ಲಿ ಸಾಗುತ್ತಿರುವ ರಸ್ತೆ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು ಎಂದು ಮನವಿ ಮಾಡಿದರು. ಮತ್ತೋರ್ವ ಸದಸ್ಯ ಮನ್ಸೂರ್, "ಅಧಿಕಾರ ವಿಕೇಂದ್ರೀಕರಣದ ಬಗ್ಗೆ ಈವರೆಗೆ ಯಾವುದೇ ನೈಜ ಯೋಜನೆಗಳು ನಡೆದಿಲ್ಲ" ಎಂದು ಅಸಮಾಧಾನ ವ್ಯಕ್ತಪಡಿಸಿದರು. ಇದಕ್ಕೆ ಉತ್ತರಿಸಿದ ನಗರಸಭೆ ಪೌರಾಯುಕ್ತ ಎಚ್.ಆರ್. ರಮೇಶ್, ಈಗಾಗಲೇ ಯೋಜನೆಯ ಕರಡು ಪ್ರತಿಯನ್ನು ಸಿದ್ಧಪಡಿಸಲಾಗಿದೆ ಎಂದು ಮಾಹಿತಿ ನೀಡಿದರು. ಜಿ.ಪಂ. ಯೋಜನಾ ನಿರ್ದೇಶಕ ಅಬ್ದುಲ್ ನಬಿ ಅವರು, ಯೋಜನೆ ತಯಾರಿಯ ಬಗ್ಗೆ ಈಗಾಗಲೇ ಕಾರ್ಯಾಗಾರವನ್ನು ಯಶಸ್ವಿಯಾಗಿ ನಡೆಸಲಾಗಿದೆ ಎಂದು ಸ್ಪಷ್ಟಪಡಿಸಿದರು.**

ಜಿಲ್ಲಾಧಿಕಾರಿ ಎಸ್.ಜೆ. ಸೋಮಶೇಖರ್ ಅವರು ಮಾತನಾಡಿ, "ವಿಕೇಂದ್ರೀಕರಣ ವ್ಯವಸ್ಥೆಯ ಜಾರಿಯಲ್ಲಿ ಕೊಡಗು ಜಿಲ್ಲೆ ರಾಜ್ಯಕ್ಕೆ ಮಾದರಿಯಾಗಬೇಕು. ಗ್ರಾಮ ಮಟ್ಟದಲ್ಲೇ ಜನರ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಕಂಡುಕೊಳ್ಳಬೇಕು" ಎಂದು ಆಶಿಸಿದರು. ಸಭೆಯಲ್ಲಿ ನಗರಸಭೆ ಅಧ್ಯಕ್ಷೆ ಪಿ. ಕಲಾವತಿ, ಗ್ಯಾರಂಟಿ ಯೋಜನೆಗಳ ಜಿಲ್ಲಾಧ್ಯಕ್ಷ ಧರ್ಮಜ ಉತ್ತಪ್ಪ, ವಿಕೇಂದ್ರೀಕರಣ ಸಲಹೆಗಾರ ಡಾ. ಕೆಂಪೇಗೌಡ, ಜಿ.ಪಂ. ಸಿಇಒ ಆನಂದ್ ಪ್ರಕಾಶ್ ಮೀನಾ, ಎಸ್ಪಿ ಆರ್.ಎನ್. ಬಿಂದುಮಣಿ ಸೇರಿದಂತೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು. ಜಿ.ಪಂ. ಸಿಬ್ಬಂದಿ ಹರ್ಷಿತಾ ತಂಡ ನಾಡಗೀತೆ ಹಾಡಿದರು. ಸಹಾಯಕ ಸಾಂಖ್ಯಿಕ ಅಧಿಕಾರಿ ನಂದೀಶ್ ಸ್ವಾಗತಿಸಿ, ಪವನ್ ಕುಮಾರ್ ನಿರೂಪಿಸಿದರು.

# ರೋಟರಿ ಸಂಸ್ಥೆಯಲ್ಲಿ ಉಚಿತ ಕಣ್ಣಿನ ತಪಾಸಣಾ ಶಿಬಿರ

**295ಮಂದಿ ತಪಾಸಣೆ,**

**165 ಮಂದಿ ಗೆ ಶಸ್ತ್ರ ಚಿಕಿತ್ಸೆಗೆ ಆಯ್ಕೆ**

ಚಾಮರಾಜನಗರ: ರೋಟರಿ ಸಂಸ್ಥೆ ವತಿಯಿಂದ ನಗರದಲ್ಲಿ ಉಚಿತ ಕಣ್ಣಿನ ತಪಾಸಣಾ ಶಿಬಿರ ನಡೆಯಿತು.

ನಗರದ ಬಿ.ರಾಚಯ್ಯ ಜೋಡಿರಸ್ತೆಯಲ್ಲಿರುವ ರೋಟರಿ ಭವನದಲ್ಲಿ ರೋಟರಿ ಸಂಸ್ಥೆ, ರಾಷ್ಟ್ರೀಯ ಅಂಧತ್ವ ನಿಯಂತ್ರಣ ಕಾರ್ಯಕ್ರಮ, ಅರವಿಂದ ಕಣ್ಣಿನ ಆಸ್ಪತ್ರೆ ಇವರ ಸಂಯುಕ್ತಾಶ್ರಯದಲ್ಲಿ ನಡೆದ ಉಚಿತ ಕಣ್ಣಿನ ತಪಾಸಣೆ ಶಿಬಿರದಲ್ಲಿ 295 ಮಂದಿ ತಪಾಸಣೆ ಮಾಡಿಸಿಕೊಂಡರು. 165 ಮಂದಿ ಶಸ್ತ್ರಚಿಕಿತ್ಸೆಗೆ ಆಯ್ಕೆಯಾಗಿದ್ದು, ಅವರನ್ನು ಕೊಯಮತ್ತೂರಿನ ಅರವಿಂದ ಕಣ್ಣಿನ ಆಸ್ಪತ್ರೆಗೆ ಕರೆದುಕೊಂಡು ಹೋಗಲು ಶಿಬಿರದಲ್ಲಿ ವ್ಯವಸ್ಥೆ ಮಾಡಲಾಯಿತು.

ರೋಟರಿ ಸಂಸ್ಥಾಪಕ ಸದಸ್ಯ ಸಿ.ವಿ.ಶ್ರೀನಿವಾಸಶೆಟ್ಟಿ ಮಾತನಾಡಿ, ರೋಟರಿ ಸಂಸ್ಥೆಯು ಪ್ರತಿ ತಿಂಗಳು ಮೊದಲನೆಯ ಭಾನುವಾರ ಉಚಿತ ನೇತ್ರ ತಪಾಸಣಾ ಶಿಬಿರವನ್ನು ಅಯೋಜಿಸುತ್ತಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಶಿಬಿರದ ಪ್ರಯೋಜನ ಪಡೆಯುತ್ತಿರುವುದು ತುಂಬಾ ಸಂತಸವಾಗಿದ್ದು,ಮುಂದಿನ ಶಿಬಿರದ ಸದುಪಯೋಗವನ್ನು ಜನತೆ ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು. ಕಣ್ಣಿನ ಆರೋಗ್ಯದ ಕಡೆ ಗಮನಹರಿಸುವುದು ಇಂದಿನ ಡಿಜಿಟಲ್ ಯುಗದಲ್ಲಿ ಅತ್ಯಗತ್ಯವಾಗಿದೆ. ಈ ಶಿಬಿರಕ್ಕೆ ಹೊರ ಜಿಲ್ಲೆಗಳಿಂದ ಜನತೆ ಬರುತ್ತಿದ್ದು, ಶಿಬಿರದ ಪ್ರಯೋಜನ ಪಡೆದುಕೊಳ್ಳುತ್ತಿದ್ದಾರೆ. ಎಂದರು.

ರೋಟರಿ ಸಂಸ್ಥೆ ಅಧ್ಯಕ್ಷ ಕಾಗಲವಾಡಿ ಚಂದ್ರುಮಾತನಾಡಿ, ಈ ಬಾರಿ ಶಿಬಿರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಿ ತಪಾಸಣೆ ಮಾಡಿಸಿಕೊಂಡಿದ್ದು 165 ಮಂದಿ ಶಸ್ತ್ರಚಿಕಿತ್ಸೆಗೆ ಆಯ್ಕೆಕೊಂಡಿದ್ದಾರೆ. ರೋಟರಿ ಸಂಸ್ಥೆಯು ಸೇವೆ ಮಾಡಲು ಸಿದ್ದವಿದ್ದು, ಸಾರ್ವಜನಿಕರು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಮನವಿ ಮಾಡಿದರು. ಶಿಬಿರದಲ್ಲಿ ರೋಟರಿ ಸಂಸ್ಥೆಯ ಸಂಸ್ಥಾಪಕ ಸದಸ್ಯ ಅಶ್ವಥ್ ನಾರಾಯಣ್, ಚಂದ್ರಪ್ರಭಜೈನ್, ನಾಗರಾಜು, ಹರೀಶ್, ಅಂಕಶೆಟ್ಟಿ, ಸಿದ್ದಮಲ್ಲಪ್ಪ, ನೇಮಿರಾಜ್, ಎ.ಶ್ರೀನಿವಾಸನ್, ಎಸ್ ಆರ್ ಎಸ್ ಶ್ರೀನಿವಾಸ್, ಸುರೇಶ್, ಅಬ್ದುಲ್ ಅಜೀಜ್ ದೀನಾ, ಸವಿತಾ, ಪಿಆರ್ ಓ ವಿಜಯಕುಮಾರ್ ಇತರರು ಹಾಜರಿದ್ದರು.



# ಪೌರ ನೌಕರರ ಸಂಘ ಕಚೇರಿ ಉದ್ಘಾಟನೆ



ರಾಮನಗರ : ಕರ್ನಾಟಕ ರಾಜ್ಯ ಪೌರ ನೌಕರರ ಸಂಘದ ಜಿಲ್ಲಾ ಕಚೇರಿಯನ್ನು ನಗರಸಭೆ ಅಧ್ಯಕ್ಷ ಕೆ.ಶೇಷಾದ್ರಿ (ಶಶಿ) ಉದ್ಘಾಟಿಸಿದರು.

ನಗರಸಭೆ ಉಪಾಧ್ಯಕ್ಷೆ ಗಿರಿಜಮ್ಮ, ಸ್ಥಾಯಿ ಸಮಿತಿ ಅಧ್ಯಕ್ಷ ಆರೀಪ್, ಸದಸ್ಯ ಅಜ್ಮದ್, ಪೌರಾಯುಕ್ತ ಡಾ.ಜಯಣ್ಣ, ಎಇಇ ವಿಶ್ವನಾಥ್, ಆರೋಗ್ಯ ನಿರೀಕ್ಷಕ ವಿಜಯ್ ಕುಮಾರ್, ಕರ್ನಾಟಕ ಪೌರ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷ ನಾಗರಾಜು, ಜಿಲ್ಲಾಧ್ಯಕ್ಷ ಅಣ್ಣಾದೊರೈ, ಪ್ರಧಾನ ಕಾರ್ಯದರ್ಶಿ ನಿರ್ಮಲಾ, ಮಾಜಿ ಜಿಲ್ಲಾಧ್ಯಕ್ಷ ವೆಂಕಟೇಶ್, ಶಾಖಾ ಅದ್ಯಕ್ಷ ದೇವೇಂದ್ರ ಸೇರಿದಂತೆ ಸಂಘದ ಪದಾಧಿಕಾರಿಗಳು, ಪೌರ ಕಾರ್ಮಿಕರು ಇದ್ದರು.

# ಜನಸ್ಪಂದನಾದಿಂದ ಪರಿಹಾರಕ್ಕೆ ಸಹಕಾರಿ





ಹಾಸನ: ಜಿಲ್ಲಾಡಳಿತದಿಂದ ಪ್ರತಿ ಮಾಹೆಯ ಮೂರನೇ ಶನಿವಾರ ಹಾಗೂ ತಾಲೂಕು ಮಟ್ಟದಲ್ಲಿ ಪ್ರತಿ ಮಾಹೆಯ ಮೊದಲ ಶನಿವಾರ ಜನಸ್ಪಂದನಾ ಕಾರ್ಯಕ್ರಮ ನಡೆಸಲಾಗುವುದು ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸಿ ಪರಿಹಾರ ಕ್ರಮಗಳನ್ನು ಕೈಗೊಳ್ಳಲು ಸಹಕಾರಿಯಾಗಿದೆ ಎಂದು ಜಿಲ್ಲಾಧಿಕಾರಿ ಲತಾಕುಮಾರಿ ಅವರು ತಿಳಿಸಿದ್ದಾರೆ.

ಅರಕಲಗೂಡಿನಲ್ಲಿ ಜನಸ್ಪಂದನಾ ಕಾರ್ಯಕ್ರಮ ನಡೆಸಿ ನಂತರ ಮಾತನಾಡಿದ ಅವರು ವಿಧಾನಸಭಾ ಕ್ಷೇತ್ರಗಳಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಜನಸ್ಪಂದನಾ ಕಾರ್ಯಕ್ರಮವನ್ನು ನಡೆಸಲಾಗುತ್ತದೆ ಜಿಲ್ಲೆಯಲ್ಲಿ ಈಗಾಗಲೇ ಹಾಸನ, ಚನ್ನರಾಯಪಟ್ಟಣ, ಸಕಲೇಶಪುರ, ಬೇಲೂರಿನಲ್ಲಿ ಜನಸ್ಪಂದನಾ ಕಾರ್ಯಕ್ರಮ ನಡೆದಿದೆ ಎಂದರು. ಈ ಕಾರ್ಯಕ್ರಮ ಜನರ ಸಮಸ್ಯೆಗಳನ್ನು ನಿವಾರಿಸಲು ಸಹಕಾರಿಯಾಗಿದೆ. ಇಂದು 85 ಅರ್ಜಿಗಳು ಬಂದಿವೆ. ಸಾರ್ವಜನಿ ಕರಿಂದ ಅನೇಕ ಸಮಸ್ಯೆಗಳನ್ನು ಕುರಿತು ಅರ್ಜಿಗಳು ಬಂದಿವೆ ರಸ್ತೆ, ಕೆರೆ, ಸ್ಮಶಾನ ಒತ್ತುವರಿ ಕುರಿತಂತೆ ಹಾಗೂ ಕಂದಾಯ ಇಲಾಖೆಗೆ ಸಂಬಂದಿಸಿದ ಅರ್ಜಿಗಳು ಹೆಚ್ಚು ಸ್ವೀಕಾರವಾಗುತ್ತವೆ ಎಂದರು. ಕೆಲವು ಅರ್ಜಿಗಳ ವಿಲೇವಾರಿಗೆ ಸಮಯ ತೆಗೆದುಕೊಳ್ಳುತ್ತದೆ ಎಂದ ಅವರು ಅರ್ಜಿದಾರರಿಗೆ ಗೊಂದಲವಾಗದಂತೆ ಯಾವ ಕಾರಣಕ್ಕೆ ಅರ್ಜಿಯನ್ನು ಪರಿಗಣಿಸಲು ಸಾಧ್ಯವಾಗುತ್ತಿಲ್ಲ ಎಂಬುದನ್ನು ಹಿಂಬರಹದಲ್ಲಿ ಸ್ಪಷ್ಟವಾದ ಕಾರಣವನ್ನು ಕಡ್ಡಾಯವಾಗಿ ತಿಳಿಸಬೇಕು ಎಂದರು.

# ಮೇ7ರಂದು ಡಾ.ಎಲ್. ರೇವಣ್ಣ ಸಿದ್ದಯ್ಯಗೆ ಅಭಿನಂದನೆ

ಮೈಸೂರು: ಜೆಎಸ್ಎಸ್ ಹಿರಿಯ ಪ್ರ.ನಿ. ವಿದ್ಯಾರ್ಥಿಗಳ ಗೃಹ ನಿರ್ಮಾಣ ಸಹಕಾರ ಸಂಘ, ಜೆಎಸ್ಎಸ್ ಹಿರಿಯ ವಿದ್ಯಾರ್ಥಿಗಳ ಸಂಘ, ಮೈಸೂರು– ಚಾಮರಾಜನಗರ ಜಿಲ್ಲಾ ಗುಬ್ಬಿ ತೋಟದಪ್ಪನವರ ವಿದ್ಯಾರ್ಥಿ ನಿಲಯಗಳ ವತಿಯಿಂಧ ಮೇ 7 ರಂದು ಮಧ್ಯಾಹ್ನ 2ಕ್ಕೆ ವರುಣಾದ ಶಿವರಾತ್ರಿ ರಾಜೇಂದ್ರ ಅನುಭವ ಮಂಟಪದ ಗೌರವ ಡಾಕ್ಟರೇಟ್‌ಗೆ ಭಾಜನರಾಗಿರುವ ಡಾ.ಎಲ್.ರೇವಣ್ಣ ಸಿದ್ದಯ್ಯ ಅವರಿಗೆ ಅಭಿನಂದನಾ ಸಮಾರಂಭ ಆಯೋಜಿಸಲಾಗಿದೆ ಎಂದು ಸಹಕಾರ ಸಂಘದ ಅಧ್ಯಕ್ಷ ಎ.ಎಸ್. ಚನ್ನಬಸಪ್ಪ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸಾನ್ನಿಧ್ಯ ವಹಿಸುವರು, ತಾವು ಅಧ್ಯಕ್ಷತೆ ವಹಿಸಲಿದ್ದು, ಎಚ್.ಎಸ್. ಚಂದ್ರಮೌಳಿ ಅಭಿನಂದನಾ ನುಡಿ ಆಡುವರು, ಡಿ.ಪಿ. ಸತೀಶ್, ಜೆ.ಬಿ. ರಂಗಸ್ವಾಮಿ ಅತಿಥಿಗಳಾಗಿರುವರು. ಇನ್ನಿತರ ಪದಾಧಿಕಾರಿಗಳಾದ ಎ.ಎಸ್. ಗುರುಸ್ವಾಮಿ, ಸುಬ್ಬಪ್ಪ, ವಾಟಾಳ್ ಆನಂದ್, ಸಿ. ರಾಜಶೇಖರಮೂರ್ತಿ ಇದ್ದರು.



**ಶಾಸಕ ಇಕ್ಬಾಲ್ ಪ್ರಶ್ನೆ । ಹರೀಸಂದ್ರ ಗ್ರಾಮಪಂಚಾಯ್ತಿ ವ್ಯಾಪ್ತಿಯಲ್ಲಿ ಸಾಗುವಳಿ ಭೂಮಿ ಪರಿಶೀಲನೆ**

# ಹಿಂದಿನ ಶಾಸಕರು ಸಾಗುವಳಿ ಅರ್ಜಿಗಳ ವಿಲೇವಾರಿ ಮಾಡಿಲ್ಲ ಏಕೆ?

ರಾಮನಗರ: ಸಾಗುವಳಿ ಚೀಟಿಗಳಿಗಾಗಿ ಅರ್ಜಿಗಳು ವಿಲೇವಾರಿ ಆಗಿಲ್ಲ. ರೈತರ ಮಕ್ಕಳು, ತೋರಿಕೆಗೆ ಮಣ್ಣಿನ ಮಕ್ಕಳು ಎನಿಸಿಕೊಂಡವರಿಗೆ ರೈತರ ಕಷ್ಟ ಗೊತ್ತಿಲ್ಲ. ನಾನು ರೈತನ ಮಗ. ರೈತರ ಮಕ್ಕಳಿಗೆ ಮಾತ್ರ ರೈತರ ಕಷ್ಟ ಗೊತ್ತು ಎಂದು ಪರೋಕ್ಷವಾಗಿ ಹಿಂದೆ ಶಾಸಕರಾಗಿದ್ದ ಎಚ್.ಡಿ.ಕುಮಾರಸ್ವಾಮಿ, ಅನಿತಾ ಕುಮಾರಸ್ವಾಮಿ ಅವರುಗಳ ವಿರುದ್ದ ಟೀಕಾ ಪ್ರಹಾರ ನಡೆಸಿದ ರಾಮನಗರ ಕ್ಷೇತ್ರದ ಶಾಸಕ ಇಕ್ಬಾಲ್ ಹುಸೇನ್, ತಾವು ಶಾಸಕರಾದ ನಂತರ ಈ ಅರ್ಜಿಗಳಿಗೆ ಜೀವ ನೀಡಿ ಸ್ಥಳ ಪರಿಶೀಲನೆ ಮಾಡುತ್ತಿರುವುದಾಗಿ ತಿಳಿಸಿದರು.

ತಾಲ್ಲೂಕಿನ ಹರೀಸಂದ್ರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಾಳೇಗೌಡನದೊಡ್ಡಿ, ಪಾದರಹಳ್ಳಿ, ಆಲೆ ಮರದದೊಡ್ಡಿ ಹಾಗೂ ಮದರ್‌ಸಾಬರದೊಡ್ಡಿ ಗ್ರಾಮಗಳಲ್ಲಿ ಸಾಗುವಳಿ ಭೂಮಿ ಪರಿಶೀಲಿಸಿದ ಬಳಿಕ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ತಾಲ್ಲೂಕಿನ ಕಸಬಾ–ಕೈಲಾಂಚ ಹೋಬಳಿಯಲ್ಲಿ ನಮೂನೆ 50, 53 ಹಾಗೂ 57ರ ಅರ್ಜಿಗಳು ಸೇರಿ



ಒಟ್ಟು 1800 ಸಾಗುವಳಿ ಅರ್ಜಿಗಳು ಬಾಕಿ ಉಳಿದಿದ್ದು, ರೈತರ ಮಕ್ಕಳೆನಿಸಿಕೊಂಡವರು ಈ ಅರ್ಜಿಗಳನ್ನು ಏಕೆ ವಿಲೇವಾರಿ ಮಾಡಿಲ್ಲ ಎಂದು ಅವರು ಪ್ರಶ್ನಿಸಿದರು.

ಶಾಸಕರಾಗಿದ್ದ ಸಿ.ಎಂ.ಲಿಂಗಪ್ಪ ಅವರ ನಂತರ ಸಾಗುವಳಿ ಸಭೆ ನಡೆಸಿ ಅರ್ಹ ರೈತರಿಗೆ ಸಾಗುವಳಿ ಚೀಟಿ ಕೊಡಲು ಹಿಂದೆ ಕಾರ್ಯನಿರ್ವಹಿಸಿದ ಶಾಸಕರು ವಿಫಲರಾಗಿದ್ದಾರೆ. ತಾವು ಈ ಅರ್ಜಿಗಳಿಗೆ ಜೀವ ಕೊಟ್ಟಿರುವುದಾಗಿ, ಸ್ಥಳ ಪರಿಶೀಲನೆ ನಡೆಸುತ್ತಿರುವುದಾಗಿ ತಿಳಿಸಿದರು. ಹರೀಸಂದ್ರ ಗ್ರಾಮ ಪಂಚಾಯಿತಿಯಲ್ಲಿ ಸಾಕ?ಟ್ಟು ಗೋಮಾಳ ಲಭ್ಯವಿದೆ. ಅರ್ಜಿ ಸಲ್ಲಿಸಿರುವ ರೈತರಿಗೆ ಭೂಮಿ ಮಂಜೂರು ಮಾಡುವ ಸಾಕಷ್ಟು ಅವಕಾಶಗಳಿವೆ ಎಂದರು. ರೈತರು ಭೂಮಿ ಮೇಲೆ ಎ?ಟ್ಟೊಂದು ಪ್ರೀತಿ ಮಮತೆ ಹೊಂದಿದ್ದಾರೆ ಎಂಬುದು ರೈತನ ಮಗನಾಗಿ ನನಗೆ ಗೊತ್ತು. ಭೂಮಿ ಬೆಲೆ ಗಗನಕ್ಕೇರಿದೆ. 25– 30 ವ?ರ್ಗಗಳ ಹಿಂದೆಯೇ ಆ ರೈತರಿಗೆಲ್ಲ ಸಾಗುವಳಿ ಚೀಟಿ ಕೊಡಬಹುದಾಗಿತ್ತು. ಈಗಿನಂತೆ ಆಗ ಕಾನೂನು ಸಡಿಲವಾಗಿರಲಿಲ್ಲ. ಈಗ ರೈತರಿಗೆ ಸಾಗುವಳಿ ಭೂಮಿ ನೀಡಬೇಕಾದರೆ ನಗರಸಭೆ ವ್ಯಾಪ್ತಿಯಿಂದ 5 ಕಿ.ಮೀ, ಬಿಬಿಎಂಪಿ ವ್ಯಾಪ್ತಿಯಿಂದ 18 ಕಿ.ಮೀ ಹಾಗೂ ಪುರಸಭೆಯಿಂದ 3 ಕಿ.ಮೀ. ವ್ಯಾಪ್ತಿಯಲ್ಲಿ ಇರಬಾರದೆಂಬ ನಿಯಮಗಳಿವೆ. ಈ ಎಲ್ಲ ಕಾನೂನುಗಳು ಹಿಂದೆ ಇರಲಿಲ್ಲ. ಕಸಬಾ 1 ಮತ್ತು 2ರ ವೃತ್ತಗಲ್ಲಿ 200 ಮಂದಿ ರೈತರ ಅರ್ಜಿ ವಿಲೇವಾರಿ ಮಾಡುವ ಅವಕಾಶ ಇದೆ ಎಂದು ಇಕ್ಬಾಲ್ ಹುಸೇನ್ ತಿಳಿಸಿದರು. ಈ ವೇಳೆ ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಎ.ಬಿ.ಚೇತನ್‌ಕುಮಾರ್, ಬಗರ್ ಹುಕುಂ ಸಾಗುವಳಿ ಸಮಿತಿ ಸದಸ್ಯರಾದ ಕೆ.ರವಿ, ತಿಮ್ಮಯ್ಯ, ಅಮೃತಾ, ತಹಸೀಲ್ದಾರ್ ತೇಜಸ್ವಿನಿ, ರಾಜಸ್ವ ನಿರೀಕ್ಷಕ ನಾಗರಾಜು, ಕಂದಾಯ ಅಧಿಕಾರಿ ಮುಬಾರಕ್, ಮುಖಂಡರಾದ ಶೇಖರ್‌ಮಾರೇಗೌಡ, ವೀರಭದ್ರಸ್ವಾಮಿ, ಪುಟ್ಟೇಗೌಡ, ಮಂಚೇಗೌಡ, ಮಹದೇವು, ಸತೀಶ್, ಚಂದ್ರಣ್ಣ, ರಾಮು, ಅರುಣ್, ಶಿವಣ್ಣ, ವಸಂತ ಮತ್ತಿತರರು ಹಾಜರಿದ್ದರು.

# ನಿಗಮದ ಆದಾಯ ಹೆಚ್ಚಳಕ್ಕೆ ಒತ್ತು ನೀಡಿ: ಗೌರವ್ ಗುಪ್ತ



ಮೈಸೂರು: ವಿದ್ಯುತ್ ವಿತರಣಾ ವ್ಯವಸ್ಥೆ ಬಲಪಡಿಸುವುದರ ಜತೆಗೆ ಆದಾಯ ಸಂಗ್ರಹವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗುವಂತೆ ಇಂಧನ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ (ಸೆಸ್ಕ್) ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಹೊರವಲಯದ ಕಡಕೋಳದಲ್ಲಿರುವ ಕೆಇಬಿ ಇಂಜಿನಿಯರ್‌ಗಳ ಸಂಘದ ಸಭಾಂಗಣದಲ್ಲಿ ಸೋಮವಾರ ನಡೆದನ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದರು. "ವಿದ್ಯುತ್ ವಿತರಣೆಯಲ್ಲಿ ಏರಿಕೆ ಕಂಡುಬಂದರೆ ಆದಾಯವೂ ಹೆಚ್ಚಾಗಬೇಕಿದೆ. ಹೀಗಾಗಿ ಸರ್ಕಾರದ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುವುದು, ಗ್ರಾಹಕರಿಗೆ ಅಡಚಣೆರಹಿತ ವಿದ್ಯುತ ಪೂರೈಕೆ ಮಾಡುವುದರ ಜತೆಗೆ, ಕಂದಾಯ ಸಂಗ್ರಹದ ಮೇಲೂ ಹೆಚ್ಚಿನ ಗಮನಹರಿಸಬೇಕಿದೆ. ಗಂಗಾ ಕಲ್ಯಾಣ ಯೋಜನೆ ಅನುಷ್ಠಾನದಲ್ಲಿ ವಿಳಂಬ ಆಗದಂತೆ ನೋಡಿಕೊಳ್ಳಬೇಕು. ಕುಡಿಯುವ ನೀರಿನ ಪೂರೈಕೆಗೂ ಸಮಸ್ಯೆ ಆಗದಂತೆ ಎಚ್ಚರವಹಿಸಬೇಕಿದೆ ಎಂದ ಅವರು, ವಿಭಾಗ ಹಾಗೂ ಉಪ ವಿಭಾಗಕ್ಕೆ ಭೇಟಿ ನೀಡಿ ನೈಜ ಪರಿಸ್ಥಿತಿ ಅರಿತುಕೊಳ್ಳಿ ಎಂದು ಸಲಹೆ ನೀಡಿದರು.

ಇದಕ್ಕೂ ಮುನ್ನ ಮಾತನಾಡಿದ ಸೆಸ್ಕ್ ವ್ಯವಸ್ಥಾಪಕ ನಿರ್ದೇಶಕರಾದ ಎಂ.ಎಸ್. ಅರ್ಚನಾ ಅವರು, "ಕುಸುಮ್-ಬಿ ಯೋಜನೆ ನಿಧಾನ ಗತಿಯಲ್ಲಿ ಪ್ರಗತಿ ಕಾಣುತ್ತಿದೆ. ಕುಸುಮ್-ಸಿ ಯೋಜನೆಯಲ್ಲಿ ಕೆಲವು ಕಡೆಗಳಲ್ಲಿ ಕೃಷಿ ಇಲಾಖೆಯ ಭೂಮಿ ಗುರುತಿಸಲಾಗಿದ್ದು, ಕೆಲವು ರೈತರು ನಿಗದಿಗಿಂತಲೂ ಹೆಚ್ಚಿನ ಲೀಸ್(ಭೋಗ್ಯ) ಮೊತ್ತ ಕೇಳುತ್ತಿರುವುದರಿಂದ ಪ್ರಗತಿ ನಿಧಾನವಾಗಿದೆ ಎಂದರು.

**400 ಕೆವಿ ಉಪ ಕೇಂದ್ರ ಪರಿಶೀಲನೆ:** ಇದಕ್ಕೂ ಮುನ್ನ ಕಡಕೋಳದಲ್ಲಿ ಕೆಪಿಟಿಸಿಎಲ್ ವತಿಯಿಂದ ನಿರ್ಮಿಸುತ್ತಿರುವ 400 ಕೆವಿ ಉಪ ಕೇಂದ್ರಕ್ಕೆ ಭೇಟಿ ನೀಡಿದ ಗೌರವ್ ಗುಪ್ತ ಅವರು, ಕಾಮಗಾರಿಯ ಪ್ರಗತಿ ಪರಿಶೀಲನೆ ನಡೆಸಿದರು. ಬಳಿಕ ಕೆಪಿಟಿಸಿಎಲ್ ಯೋಜನೆಯ ಕಾಮಗಾರಿಗಳ ಪ್ರಗತಿ ಕುರಿತು ಸಭೆ ನಡೆಸಿದ ಅವರು, ಕಡಕೋಳದಲ್ಲಿ ನಿರ್ಮಿಸುತ್ತಿರುವ 400 ಕೆವಿ ಉಪ ಕೇಂದ್ರದ ಕಾಮಗಾರಿ ನಿಗದಿತ ವೇಳೆ ಪೂರ್ಣಗೊಳ್ಳಬೇಕಿದ್ದು, ಈ ನಿಟ್ಟಿನಲ್ಲಿ ಅಧಿಕಾರಿಗಳು ಹಾಗೂ ಟೆಂಡರ್ ಪಡೆದಿರುವ ಏಜೆನ್ಸಿ ಅವರು ಹೆಚ್ಚಿನ ಕ್ರಮವವಹಿಸಬೇಕಿದೆ ಎಂದರು.

ಇದೇ ವೇಳೆ ಕೆಪಿಟಿಸಿಎಲ್ ಯೋಜನೆಗಳ ಅನುಷ್ಠಾನಕ್ಕೆ 18 ಕಡೆಗಳಲ್ಲಿ ಅಗತ್ಯವಿದ್ದ ಸರ್ಕಾರಿ, ಖಾಸಗಿ ಭೂಮಿಯನ್ನು ಕೆಪಿಟಿಸಿಎಲ್‌ಗೆ ಹಸ್ತಾಂತರಿಸುವಲ್ಲಿ ಜಿಲ್ಲಾಧಿಕಾರಿ ಲಕ್ಷ್ಮೀಕಾಂತ ರೆಡ್ಡಿ ಕಾರ್ಯವನ್ನು ಶ್ಲಾಘಿಸಿದರು. 400 ಕೆವಿ ಉಪ ಕೇಂದ್ರ ಹಾಗೂ ಸಂಬಂಧಿಸಿದ ಪ್ರಸರಣ ಮಾರ್ಗಗಳ ನಿರ್ಮಾಣಕ್ಕೆ ಯಾವುದೇ ಅಡಚಣೆಯಾದರೆ ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆಯಿಂದ ಸಹಕಾರ ಪಡೆಯುವಂತೆ ಕೆಪಿಟಿಸಿಎಲ್ ಅಧಿಕಾರಿಗಳಿಗೆ ಸೂಚನೆ ನೀಡಿದರು. ಸಭೆಯಲ್ಲಿ ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ, ಸೆಸ್ಕ್ ತಾಂತ್ರಿಕ ನಿರ್ದೇಶಕಿ ಶರಣಮ್ಮ ಜಂಗಿನ, ಸೆಸ್ಕ್ ಮುಖ್ಯ ಇಂಜಿನಿಯರ್ ಎಲ್.ಲೋಕೇಶ್, ಕೆಪಿಟಿಸಿಎಲ್ ನಿರ್ದೇಶಕರ ಗಿರಿಧರ್ ಕುಲಕರ್ಣಿ, ಇಂಜಿನಿಯರ್ ರಮೇಶ್ ಇದ್ದರು.

# ನಾಳೆ ಯಶಸ್ಸಿನ ಸಂಭ್ರಮ

ಹಾಸನ; ಜಿಲ್ಲೆಯಲ್ಲಿ 2026 ರಲ್ಲಿ ನಡೆದ ಎಸ್ ಎಸ್ ಎಲ್ ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಗೈದ ಸರ್ಕಾರಿ, ಅನುದಾನಿತ ಶಾಲೆಗಳ ವಿದ್ಯಾರ್ಥಿಗಳು ಹಾಗೂ ನಿರಂತರವಾಗಿ ಕಳೆದ ಮೂರು ವರ್ಷಗಳಿಂದ ಪರೀಕ್ಷೆಯಲ್ಲಿ ಶೇಕಡ ನೂರಷ್ಟು ಫಲಿತಾಂಶ ಪಡೆದಿರುವ ಶಾಲೆಗಳಿಗೆ ಅಭಿನಂದಿಸಲು ಅಗತ್ಯ ಸಿದ್ಧತೆಗೆ ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ಲತಾ ಕುಮಾರಿ ಅಧಿಕಾರಿಗಳಿಗೆ ತಿಳಿಸಿದ್ದಾರೆ.



ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಕಾರ್ಯಕ್ರಮ ಕುರಿತು ಪೂರ್ವಭಾವಿ ಸಭೆ ನಡೆಸಿ ಮಾತನಾಡಿದ ಅವರು ಕಂದಾಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೃ? ಭೈರೇಗೌಡ ಅವರ ನೇತೃತ್ವದಲ್ಲಿ ಎಲ್ಲಾ ಜನಪ್ರತಿನಿಧಿಗಳ ಸಹಭಾಗಿತ್ವದಲ್ಲಿ ಮೇ.6 ರಂದು ಹಾಸನಾಂಬ ಕಲಾಭವನದಲ್ಲಿ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಹಾಗೂ ಅರ್ಥಪೂರ್ಣವಾಗಿ ಮೂಡಿಬರಲು ಕ್ರಮವಹಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಪ್ರತಿ ತಾಲ್ಲೂಕಿನಿಂದ ಸರ್ಕಾರಿ ಶಾಲೆಯ ಮೂರು ವಿದ್ಯಾರ್ಥಿಗಳು ಹಾಗೂ ಅನುದಾನಿತ ಶಾಲೆಯ ಇಬ್ಬರು ವಿದ್ಯಾರ್ಥಿಗಳು ಸೇರಿದಂತೆ ಒಟ್ಟು ಐದು ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವಂತೆ ತಿಳಿಸಿದರಲ್ಲದೆ ಆರ್.ಟಿ.ಇ ಮೂಲಕ ಖಾಸಗಿ ಶಾಲೆಗಳಲ್ಲಿ ಪ್ರವೇಶ ಪಡೆದು ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಗೈದ ಪ್ರತಿ ತಾಲ್ಲೂಕಿಗೆ ಒಬ್ಬರಂತೆ 8 ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲು ಸೂಚಿಸಿದರು. ಬಿ.ಸಿ.ಎಂ, ಸಮಾಜ ಕಲ್ಯಾಣ ಇಲಾಖೆ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಸತಿ ಶಾಲೆಗಳ ವಿದ್ಯಾರ್ಥಿಗಳಲ್ಲಿ ತಲಾ ಒಬ್ಬರನ್ನು ಆಯ್ಕೆ ಮಾಡುವಂತೆ ತಿಳಿಸಿದರಲ್ಲದೆ, ಬಾಲಕರ ಮತ್ತು ಬಾಲಕಿಯರ ಬಾಲಮಂದಿರದಲ್ಲಿ ಉತ್ತಮ ಸಾಧನೆಗೈದ ತಲಾ ಒಬ್ಬರನ್ನು ಆಯ್ಕೆಮಾಡುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಅಪರ ಜಿಲ್ಲಾಧಿಕಾರಿ ಜಗದೀಶ್ ಗಂಗಣ್ಣನವರ್, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಬಲರಾಂ ಹಾಗೂ ವಿವಿಧ ಅಧಿಕಾರಿಗಳು ಹಾಜರಿದ್ದರು.

## ನಕಲಿ ದಾಖಲೆ ನೀಡಿ ಫೆಡರೇಷನ್‌ಗೆ ಆಯ್ಕೆ: ಎ.ಜಿ.ಸ್ವಾಮಿ ಆರೋಪ



ಮೈಸೂರು: ಕೊಡಗು ಜಿಲ್ಲೆಯ ಕುಶಾಲನಗರ ತಾಲ್ಲೂಕಿನ ಎಸ್.ಎನ್. ರಾಜರಾವ್ ಅವರ ಮಕ್ಕಳು ನಕಲಿ ಹಾಗೂ ಫೋರ್ಜರಿ ದಾಖಲೆಗಳ ಆಧಾರದ ಮೇಲೆ ಎಸ್‌ಟಿ ಪ್ರಮಾಣಪತ್ರ ಪಡೆದಿರುವುದು ತನಿಖೆ ವೇಳೆ ದೃಢಪಟ್ಟಿದೆ. ಜೊತೆಗೆ ಈ ಕುರಿತ ವಿಚಾರಣಾ ಪ್ರಕ್ರಿಯೆ ನ್ಯಾಯಾಲದಲ್ಲಿದೆ. ಹೀಗಿದ್ದರೂ ಸಹಾ ಈ ಕುಟುಂಬಕ್ಕೆ ಸೇರಿದವರಾದ ಎಸ್.ಆರ್.ಅರುಣ್ ರಾವ್ ಕಾನೂನು ಬಾಹಿರವಾಗಿ ಲ್ಯಾಂಪ್ ಫೆಡರೇಷನ್‌ಗೆ ಇದೇ ಪ್ರಮಾಣ ಪತ್ರ ಸಲ್ಲಿಸಿ ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆಂದು ಅಖಿಲ ಭಾರತ ಆದಿವಾಸಿ ಹಿತರಕ್ಷಣಾ ಸಮಿತಿ ರಾಜ್ಯಾಧ್ಯಕ್ಷ ಎ.ಜಿ.ಸ್ವಾಮಿ ಆರೋಪಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಕೊಡಗು ಜಿಲ್ಲಾಧಿಕಾರಿ ಸಹಾ ಇವರ ಫೋರ್ಜರಿ ಹಾಗೂ ನಕಲಿ ಆಗಿರುವ ಎಸ್‌ಟಿ ಪ್ರಮಾಣ ಪತ್ರ ರದ್ದು ಪಡಿಸುವಂತೆ ಆದೇಶಿಸಿದ್ದಾರೆ. ಆದರೆ, ತಹಶೀಲ್ದಾರ್ ಇದನ್ನು ಪಾಲಿಸಿಲ್ಲ. ಅರುಣ್ ರಾವ್ ಮರಾಠಿ ಸಮುದಾಯಕ್ಕೆ ಸೇರಿದ್ದರೂ ಸಹಾ ಎಸ್‌ಟಿಯ ಮರಾಠ್ ಎಂಬ ಜಾತಿಗೆ ಸೇರಿದವರಾಗಿದ್ದೇವೆಂದು ಹೇಳಿಕೊಂಡು ಜಾತಿ ಪ್ರಮಾಣಪತ್ರ ಪಡೆದಿದ್ದಾರೆ. ಈ ಕುರಿತ ವಿಚಾರಣೆ ನ್ಯಾಯಾಲಯದಲ್ಲಿ ನಡೆಯುತ್ತಿದೆ. ಆದರೂ ಸಹಾ ಇವರು ಲ್ಯಾಂಪ್ ಮಹಾ ಮಂಡಳದ ಅಧ್ಯಕ್ಷ ಸ್ಥಾನದ ಚುನಾವಣೆಯಲ್ಲಿ ಸ್ಪರ್ಧಿಸಿ ಆಯ್ಕೆಯಾಗಿದ್ದಾರೆ. ಹೀಗಾಗಿ ಈ ಆಯ್ಕೆ ಪ್ರಕ್ರಿಯೆ ರದ್ದುಗೊಳಿಸಬೇಕು. ನಕಲಿ ಜಾತಿ ಪ್ರಮಾಣಪತ್ರ ನೀಡಿದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಬೇಕು. ಪ್ರಮಾಣ ಪತ್ರ ಪಡೆದವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಿ, ಇಲ್ಲಿಯ ತನಕ ಪಡೆದ ಎಲ್ಲಾ ಸವಲತ್ತುಗಳಿಗೆ ಇವರುಗಳಿಂದ ಬಡ್ಡಿ ಸಮೇತ ವಸೂಲಿ ಮಾಡಬೇಕು. ಚುನಾವಣೆಗಳಲ್ಲಿ ನಕಲಿ ಪ್ರಮಾಣಪತ್ರವನ್ನು ಪಡೆದ ಎಲ್ಲಾ ಚುನಾವಣೆಗಳಿಂದ ಸಹಕಾರ ಸಂಘ ಸಂಸ್ಥೆಗಳಿಂದ ಹಾಗೂ ಇತರ ಯಾವುದೇ ಇಲಾಖೆಗಳಲ್ಲಿ ಮೀಸಲಾತಿ ಪಡೆದು ಸದಸ್ಯತ್ವವನ್ನು ಪಡೆದಿದ್ದರೆ ಕೂಡಲೇ ಇವರ ಸದಸ್ಯತ್ವವನ್ನು ರದ್ದು ಮಾಡಲು ಆದೇಶಿಸಬೇಕು. ನಿಜವಾದ ಎಸ್ ಟಿ ಸಮುದಾಯಕ್ಕೆ ಮೀಸಲಾತಿ ಹಾಗೂ ಸೌಲಭ್ಯವನ್ನು ಮರಳಿ ನೀಡಬೇಕು. ಇಲ್ಲದಿದ್ದಲ್ಲಿ ರಾಜ್ಯಾದ್ಯಂತ ಎಸ್‌ಟಿ ಸಮುದಾಯದವರು ಪ್ರತಿಭಟಿಸಬೇಕಾಗುತ್ತದೆ ಎಂದು ಎಚ್ಚರಿಸಿದರು. ಇನ್ನಿತರ ಪದಾಧಿಕಾರಿಗಳಾದ ರಾಜು, ಆರ್.ಕೆ.ಚಂದ್ರು ಹಾಜರಿದ್ದರು.

## ಸಿಲಿಂಡರ್ ಬೆಲೆ ಏರಿಕೆ ಖಂಡಿಸಿ ಕರ್ನಾಟಕ ಸೇನಾ ಪಡೆ ಪ್ರತಿಭಟನೆ

ಚಾಮರಾಜನಗರ: ವಾಣಿಜ್ಯ ಗ್ಯಾಸ್ ಸಿಲಿಂಡರ್ ಬೆಲೆ ಏರಿಕೆ ಖಂಡಿಸಿ ಕರ್ನಾಟಕ ಸೇನಾಪಡೆ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ನಗರದ ಭುವನೇಶ್ವರಿ ವೃತ್ತದಲ್ಲಿ ಕರ್ನಾಟಕ ಸೇನಾಪಡೆ ಅಧ್ಯಕ್ಷ ಚಾ.ರಂ.ಶ್ರೀನಿವಾಸಗೌಡ ಅವರ ನೇತೃತ್ವದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು ರಾಷ್ಟ್ರೀಯ ಹೆದ್ದಾರಿಯಲ್ಲಿ ಖಾಲಿ ಸಿಲಿಂಡರ್ ಪ್ರದರ್ಶಿಸಿ ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಅಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆ ನೇತೃತ್ವ ವಹಿಸಿದ್ದ ಶ್ರೀನಿವಾಸಗೌಡ ಮಾತನಾಡಿ, ಕೇಂದ್ರ ಸರ್ಕಾರ ವಾಣಿಜ್ಯ ಗ್ಯಾಸ್ ದರವನ್ನು 993 ರೂ. ಹೆಚ್ಚಳ ಮಾಡಿದ್ದು, ಪದೇಪದೇ ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡುತ್ತಿರುವುದು ಅತ್ಯಂತ ಖಂಡನೀಯವಾದದ್ದು ಕೂಡಲೇ ದರ ಹಿಂಪಡೆಯಬೇಕು ಎಂದು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಶಾ.ಮುರಳಿ, ಕಂಡಕ್ಟರ್ ಚಾ.ಸಿ.ಸೋಮನಾಯಕ, ಪಣ್ಯದಹುಂಡಿ ರಾಜು, ಮಹೇಶ್ ಗೌಡ, ಚಾ.ವೆಂ.ರಾಜ್ ಗೋಪಾಲ್, ಆಟೋ ಲಿಂಗರಾಜು, ಅಮಚವಾಡಿ ರಾಜು, ರಾಚಪ್ಪ, ಮುತ್ತಿಗೆ ಗೋವಿಂದರಾಜು, ಹೊಮ್ಮ ಲೋಕೇಶ್, ಮಂಗಲ ಹೊಸೂರು ಶಿವಣ್ಣ, ನಂಜುಂಡಿ, ನಾಗರಾಜಶೆಟ್ಟಿ, ನಂಜುಂಡಶೆಟ್ಟಿ, ಆಟೋ ಸುರೇಶ್, ಚಂದ್ರು ಇದ್ದರು.



# ಎಐ-ಸೆಂಟರ್ ಆಫ್ ಎಕ್ಸಲೆನ್ಸ್ ಉದ್ಘಾಟನೆ

## ರಾಮನಗರ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಕೇಂದ್ರದ ಉದ್ಘಾಟನೆ

ರಾಮನಗರ: ಕೇವಲ ಸಿದ್ಧಾಂತ ಜ್ಞಾನಕ್ಕಿಂತ ಪ್ರಾಯೋಗಿಕ ಮತ್ತು ಅನುಭವಾತ್ಮಕ ಕಲಿಕೆಗೆ ಹೆಚ್ಚಿನ ಮಹತ್ವ ಇದೆ. ಈ ನಿಟ್ಟಿನಲ್ಲಿ ಸರ್ಕಾರ ಹೆಚ್ಚು ಕಾರ್ಯಕ್ರಮಗಳನ್ನು ರೂಪಿಸುತ್ತಿದೆ ಎಂದು ಉನ್ನತ ಶಿಕ್ಷಣ ಸಚಿವ ಡಾ.ಸುಧಾಕರ್ ತಿಳಿಸಿದರು.

ನಗರದ ಹೊರವಲಯದಲ್ಲಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಮೈಕ್ರೋಸಾಫ್ಟ್ ಮತ್ತು ಸ್ಯಾಪ್ ಸಂಸ್ಥೆಗಳು ಸ್ಥಾಪಿಸಿರುವ ಎಐ-ಸೆಂಟರ್ ಆಫ್ ಎಕ್ಸಲೆನ್ಸ್ ಮತ್ತು ಸೈಮನ್ಸ್ ಕಂಪನಿಯವರು ಸ್ಥಾಪಿಸಿರುವ ಇನ್ನೋವೇಷನ್ ಹಬ್‌ಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು. ಬದಲಾದ ಶೈಕ್ಷಣಿಕ ಕ್ಷೇತ್ರದಲ್ಲಿ ತಕ್ಕಂತೆ ಸರ್ಕಾರ ಕೂಡ ಅನೇಕ ಕಾರ್ಯಕ್ರಮಗಳನ್ನು ರೂಪಿಸುತ್ತಿದೆ ಎಂದರು.

**ಇಂಗ್ಲೀಷ್ ಭಾಷೆಯಲ್ಲಿ ದಕ್ಷತೆ ಬೇಕು**

ತಾವು ಕಾಲೇಜಿಗೆ ಬಂದಾಗ ಕೆಲವರು ಉತ್ತಮವಾಗಿ ಇಂಗ್ಲೀಷಿನಲ್ಲಿ ಪ್ರತಿಕ್ರಿಯಿಸಿದರು. ಆದರೆ ಕೆಲವರು ಮಾತನಾಡಲು ಸ್ವಲ್ಪ ಹಿಂಜರಿಯುತ್ತಿದ್ದರು. ಗ್ರಾಮೀಣ ಹಿನ್ನಲೆಯಿಂದ ಬಂದಿದ್ದೇವೆ ಎಂಬ ಭಾವನೆಯೂ ಬೇಡ. ಶ್ರಮ ಮತ್ತು ಪ್ರಯತ್ನದಿಂದ ಯಾವುದನ್ನಾದರೂ ಕಲಿಯಬಹುದು. ಆದ್ದರಿಂದ ಆತ್ಮವಿಶ್ವಾಸವನ್ನು ಹೊಂದಿರಿ. ನಿಮ್ಮ ಮೇಲೆ ನಂಬಿಕೆ ಇಡಿ ಎಂದು ಪ್ರೋತ್ಸಾಹಿಸಿದರು. ಇಂಗ್ಲಿ?ನಲ್ಲಿ ಸರಾಗವಾಗಿ ಮಾತನಾಡುವ ಸಾಮರ್ಥ್ಯ ಇಲ್ಲದಿದ್ದರೆ, ನೀವು ಪಡೆದ ಜ್ಞಾನದಿಂದ ಉದ್ಯೋಗ ಮಾರುಕಟ್ಟೆಯಲ್ಲಿ ಯಶಸ್ವಿಯಾಗಲು ಸಾಧ್ಯವಿಲ್ಲ. ಆದ್ದರಿಂದ ಇಂಗ್ಲಿ? ದಕ್ಷತೆ ಬಹಳ ಮುಖ್ಯವಾಗಿದೆ ಎಂಬುದನ್ನು ಅರಿಯಬೇಕು ಎಂದರು.

ಸರಿಯಾದ ಪ್ರಶ್ನೆಗಳನ್ನು ಕೇಳಲು ಸಾಧ್ಯವಾಗದಿದ್ದರೂ ಚಿಂತಿಸಬೇಡಿ, ಸಕ್ರಿಯವಾಗಿರಿ, ನಿಮ್ಮ ಮೇಲೆ ನೀವು ನಂಬಿಕೆ ಇಡಿ, ಸರ್ಕಾರಿ ಕೋಟದಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಓದುತ್ತಿರುವ ಬಗ್ಗೆ ಹೀನಭಾವನೆ ಬೇಡ. ಉತ್ತಮ ಅಂಕಗಳನ್ನು ಗಳಿಸಿದ್ದರಿಂದಲೇ ಇಲ್ಲಿಗೆ ಆಯ್ಕೆಯಾಗಿದ್ದೀರಿ, ನಿಮ್ಮಲ್ಲಿ ಪ್ರತಿಭೆ ಇದೆ ಅದನ್ನು ಬಳಸಿಕೊಳ್ಳಿ ಎಂದು ಅವರು ಕರೆ ನೀಡಿದರು. ತಮ್ಮ ಇಲಾಖೆ ಬ್ರಿಟೀಷ್ ಕೌನ್ಸಿಲ್ ಮತ್ತು ಮೈಕ್ರೋಸಾಫ್ಟ್ ಸಂಸ್ಥೆಗಳ ಮೂಲಕ ಯುವ ಸಮುದಾಯದಲ್ಲಿ ಆಂಗ್ಲ ಭಾಷೆಯಲ್ಲಿ ಕೌಶಲಗಳನ್ನು ರೂಢಿಸಲು ಕಾರ್ಯಕ್ರಮವನ್ನು ಆಯೋಜಿಸಿದ್ದೆವು. ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು ಹಾಗೂ ಪದವಿ ಕಾಲೇಜುಗಳನ್ನೂ ಒಳಗೊಂಡಂತೆ ಆಂಗ್ಲ ಭಾಷೆಯಲ್ಲಿ ಕೌಶಲ ರೂಢಿಸುವ ಕಾರ್ಯಕ್ರಮವನ್ನು ವಿಸ್ತರಿಸಲು ಉದ್ದೇಶಿಸಿದ್ದೇವೆ ಎಂದರು. ವಿದ್ಯಾರ್ಥಿಗಳು ಈ ಕಾರ್ಯಕ್ರಮವನ್ನು ಅನುಸರಿಸಿ, ತರಬೇತಿಯನ್ನು ಪಡೆದುಕೊಳ್ಳುವ ಮೂಲಕ ತಮ್ಮ ಆತ್ಮವಿಶ್ವಾಸವನ್ನು ಹೆಚ್ಚಿಸಿಕೊಳ್ಳಬೇಕು. ಹಂತ ಹಂತವಾಗಿ ರಾಮನಗರದ ಸರ್ಕಾರಿ ಕಾಲೇಜಿಗೂ ಈ ಕಾರ್ಯಕ್ರಮ ವಿಸ್ತರಣೆಯಾಗುವ ವಿಶ್ವಾಸವಿದೆ ಎಂದರು.

ವೇದಿಕೆಯಲ್ಲಿ ರಾಮನಗರ ಶಾಸಕ ಇಕ್ಬಾಲ್ ಹುಸೇನ್, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಆಯುಕ್ತರಾದ ಕುಮಾರಿ ಮಂಜುಶ್ರೀ, ತಾಂತ್ರಿಕ ಶಿಕ್ಷಣದ ಹೆಚ್ಚುವರಿ ನಿರ್ದೇಶಕರಾದ ನಾಗಭೂಷಣ್, ಪ್ರಾಂಶುಪಾಲ ಜಿ.ಪುಂಡರೀಕ, ಮೈಕ್ರಸಾಫ್ಟ್‌ನ ಸಿಎಸ್‌ಆರ್ ವಿಭಾಗದ ವ್ಯವಸ್ಥಾಪಕ ಕಿಶೋರ್ ಕುಮಾರ್, ಸ್ಯಾಪ್‌ನ ಪ್ರಾಡಕ್ಟ್ ಸಪೋರ್ಟ್ ವಿಭಾಗದ ವಾಸಿಂ ಉಲ್ಲಾ ಖಾನ್, ಎಡುನೆಟ್ ಉಪಾಧ್ಯಕ್ಷ ವೈಭವ್ ವತ್ಸಲ್, ಸೈಮೆನ್ಸ್ ಕಂಪನಿಯ ರಿಸರ್ಚ್ ಆಂಡ್ ಡೆವಲಪ್‌ಮೆಂಟ್ ಟೆಕ್ನಾಲಜಿಯ ಉಪಾಧ್ಯಕ್ಷರಾದ ಸುಜಾತ ಮುಕುಂದನ್, ಸ್ಮೈಲ್ ಫೌಂಡೇಷನ್‌ನ ಪ್ರಮುಖರಾದ ಸೀಮಂತ್ ಕುಮಾರ್, ರೇಷ್ಮ ಗುಪ್ತ, ಟೊಯೋಟಾ ಸಂಸ್ಥೆಯ ಉಪಾಧ್ಯಕ್ಷ ರಮೇಶ್ ರಾವ್, ಜನರಲ್ ಮೇನೇಜರ್ ಕಿರಣ್ ಮುಂತಾದವರು ಉಪಸ್ಥಿತರಿದ್ದರು.



### ಬೇಡಿಕೆ ನಮ್ಮ ಕಾಲೇಜುಗಳಿಗೂ ಬರಲಿ

ಸರ್ಕಾರಿ ಪದವಿ ಕಾಲೇಜುಗಳನ್ನು ಮತ್ತು ಇಂಜನಿಯರಿಂಗ್ ಕಾಲೇಜುಗಳಲ್ಲಿ ಕೈಗಾರಿಕಾ ಸಂಸ್ಥೆಗಳು ಶ್ರೇ?ತೆಯ ಕೇಂದ್ರಗಳನ್ನು ಸ್ಥಾಪಿಸಲು ಮುಂದಾಗಿದ್ದಾರೆ. ಇದು ಗ್ರಾಮೀಣ ಹಿನ್ನೆಲೆಯ ವಿದ್ಯಾರ್ಥಿಗಳಿಗೆ ಬಹಳ ಉಪಯೋಗವಾಗುತ್ತದೆ. ಈ ಮುಂದಾಳತ್ವವು ಅವರಿಗೆ ಮುಂದಿನ ಹಂತಕ್ಕೆ ಸಾಗಲು ಅಗತ್ಯವಾದ ಕೌಶಲ್ಯಗಳನ್ನು ನೀಡುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ. ನಾವು ಎಲ್ಲರೂ ನಿರೀಕ್ಷಿಸುವುದು ಇದೇ, ಮತ್ತು ಮುಂದಿನ ದಿನಗಳಲ್ಲಿ ನಮ್ಮ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು ವೈದ್ಯಕೀಯ ಕಾಲೇಜುಗಳ?ು ಬೇಡಿಕೆಯಲ್ಲಿರಲಿ ಎಂದು ಆಶಯ ವ್ಯಕ್ತಪಡಿಸಿದರು.

### ಮಹಿಳಾ ವಿದ್ಯಾರ್ಥಿಗಳಿಗಾಗಿ ಯೋಜನೆ

ಕೃತಕ ಬುದ್ಧಿಮತ್ತೆ ಕ್ಷೇತ್ರದ ಮೂಲಕ ಮಹಿಳೆಯರು ಉದ್ಯೋಗಾವಕಾಶಗಳನ್ನು ಪಡೆಯುವ ಸಲುವಾಗಿ ಮಹಿಳೆಯರಿಗಾಗಿ ಕೃತಕ ಬುದ್ಧಿಮತ್ತೆ ವೃತ್ತಿ ಕೇಂದ್ರಗಳನ್ನು ಮೈಕ್ರೋಸಾಫ್ಟ್ ಮತ್ತು ಸ್ಯಾಪ್ ಸಂಸ್ಥೆಗಳ ಮುಂದಾಳತ್ವದಲ್ಲಿ ಸ್ಥಾಪಿಸುವ ಉದ್ದೇಶಗಳಿವೆ. ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಈ ಕೇಂದ್ರ ಸ್ಥಾಪನೆಯಾಗಲಿದೆ ಎಂದರು.

ಸೈಮನ್ಸ್ ಮತ್ತು ಸ್ಮೈಲ್ ಫೌಂಡೇಷನ್ ಸಂಸ್ಥೆಗಳನ್ನು ಶ್ಲಾಘಿಸಿದ ಸಚಿವರು, ಈ ಸಂಸ್ಥೆಗಳು "ಟೆಕ್ ಫಾರ್ ಸೊಸೈಟಿ" ಎಂಬ ಕಾರ್ಯಕ್ರಮವನ್ನು ಜಾರಿಗೆ ತರುತ್ತಿವೆ. ಇದು ಇಂಜಿನಿಯರಿಂಗ್ ಶಿಕ್ಷಣದಲ್ಲಿ ಹೊಸ ಅವಿಷ್ಕಾರವನ್ನು ನಿರ್ಮಿಸಲಿದೆ ಎಂದರು.

### ಸಿವಿಲ್, ಮ್ಯಕಾನಿಕಲ್ ಬಗ್ಗೆ ಸಚಿವರ ಒತ್ತು

ಇಂದು ಕೆಲವು ಇಂಜಿನಿಯರಿಂಗ್ ಕಾಲೇಜುಗಳ ಆಡಳಿತ ಮಂಡಳಿಗಳು ಕಂಪ್ಯೂಟರ್ ಸೈನ್ಸ್ ವಿಭಾಗದಲ್ಲಿ ಸೀಟುಗಳನ್ನು ಹೆಚ್ಚಿಸಲು ಪ್ರಸ್ತಾಪಿಸಿವೆ. ಆಟೋಮೊಬೈಲ್, ಎಲೆಕ್ಟ್ರಿಕಲ್ ವಿಭಾಗದ ಸೀಟುಗಳನ್ನು ಕಡಿಮೆ ಮಾಡಲು ಸಲಹೆ ನೀಡಿವೆ. ಆದರೆ ಸಿವಿಲ್ ಇಂಜಿನಿಯರಿಂಗ್ ಎಂದಿಗೂ ನಾಶವಾಗುವುದಿಲ್ಲ. ಸಿವಿಲ್ ಇಂಜಿನಿಯರಿಂಗ್ ಇಲ್ಲದೆ ನಾವು ಈ ಕಟ್ಟಡದಲ್ಲೇ ಕುಳಿತುಕೊಳ್ಳಲು ಸಾಧ್ಯವಿಲ್ಲ. ಕಟ್ಟಡಗಳು ಮತ್ತು ತಂತ್ರಜ್ಞಾನ ಅಭಿವೃದ್ಧಿ ಎಲ್ಲವೂ ಸಿವಿಲ್ ಇಂಜಿನಿಯರಿಂಗ್ ನಿಂದಲೇ ಸಾಧ್ಯವಾಗಿದೆ ಎಂದು ಸಿವಿಲ್ ಇಂಜನಿಯರಿಂಗ್‌ನ ಅವಶ್ಯಕತೆಯನ್ನು ವಿವರಿಸಿದರು. ಮೆಕ್ಯಾನಿಕಲ್ ಇಂಜಿನಿಯರಿಂಗ್ ಬಗ್ಗೆ ಹೇಳುವುದಾದರೆ, ಇದು ಎಲ್ಲಾ ಕ್ಷೇತ್ರಗಳಿಗೂ ಮೂಲವಾಗಿದೆ. ಏರೋಸ್ಪೇಸ್ ಅಥವಾ ಇತರೆ ತಂತ್ರಜ್ಞಾನಗಳಲ್ಲಿ ಯಾವುದಾದರೂ ಭಾಗ ತಯಾರಿಸಲು ಮೆಕ್ಯಾನಿಕಲ್ ಜ್ಞಾನ ಅಗತ್ಯವಿದೆ. ನಾವು ಈ ತಂತ್ರಜ್ಞಾನಗಳನ್ನು ಪಠ್ಯಕ್ರಮಕ್ಕೆ ತರಬೇಕು ಮತ್ತು ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಅನುಭವ ನೀಡಬೇಕು. ಅವರು ಸಾಧನಗಳನ್ನು ಬಳಸುವ ಮೂಲಕ ಸಮಾಜದ ಸವಾಲುಗಳನ್ನು ಎದುರಿಸಲು ಸಿದ್ಧರಾಗಬೇಕು ಎಂದರು.ರೋಟರಿ ಇಂಟರ್‌ನ್ಯಾಷನಲ್ ಸಂಸ್ಥೆ ರಾಜ್ಯದ ವಿವಿಧ ಕಾಲೇಜುಗಳಿಗೆ 5000 ಕಂಪ್ಯೂಟರ್‌ಗಳನ್ನು ಕೊಡುಗೆ ನೀಡಿದೆ ಎಂದು ಸಚಿವರು ಮೆಚ್ಚುಗೆ ವ್ಯಕ್ತಪಡಿಸಿದರು.

## ಮಾನಸಿಕ ಖಿನ್ನತೆ: ದೇವರಾಜ ಠಾಣೆ ಮುಖ್ಯಪೇದೆ ಆತ್ಮಹತ್ಯೆ

ಮೈಸೂರು: ಮಾನಸಿಕ ಖಿನ್ನತೆ ಹಿನ್ನಲೆ ದೇವರಾಜ ಪೊಲೀಸ್ ಠಾಣೆ ಮುಖ್ಯಪೇದೆ ನೇಣು ಬಿಗಿದು ಆತ್ಮಹತ್ಯೆಗೆ ಶರಣಾದ ಘಟನೆ ಮೈಸೂರಿನ ಪೊಲೀಸ್ ಲೇಔಟ್ ನಲ್ಲಿ ನಡೆದಿದೆ.



ಶ್ಯಾಂಪ್ರಸಾದ್ (46) ಮೃತ ದುರ್ದೈವಿ. ಪೊಲೀಸ್ ಲೇಔಟ್ ನಲ್ಲಿ ಸ್ವಂತ ಮನೆ ಹೊಂದಿರುವ ಶ್ಯಾಂಪ್ರಸಾದ್ ದೇವರಾಜ ಪೊಲೀಸ್ ಠಾಣೆಯಲ್ಲಿ ಕಳೆದ 5 ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿದ್ದರು. ಮನೆಯಲ್ಲಿ ಯಾರೂ ಇಲ್ಲದ ವೇಳೆ ನೇಣಿಗೆ ಶರಣಾಗಿದ್ದಾರೆ. ಬೆಳಿಗ್ಗೆ ಶುಭೋದಯ ಕೆಲಸಕ್ಕೆ ಶ್ಯಾಂಪ್ರಸಾದ್ ರನ್ನ ನಿಯೋಜಿಸಲಾಗಿತ್ತು. ಕರ್ತವ್ಯಕ್ಕೆ ಹಾಜರಾಗದ ಹಿನ್ನಲೆ ಪರಿಶೀಲನೆ ನಡೆಸಿದಾಗ ಆತ್ಮಹತ್ಯೆಗೆ ಶರಣಾಗಿರುವ ಮಾಹಿತಿ ತಿಳಿದು ಬಂದಿದೆ. ನಜರಬಾದ್ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಮುಂದಿನ ಕ್ರಮ ಕೈಗೊಂಡಿದ್ದಾರೆ.

## ಬುದ್ಧನ ಬೋಧನೆಗಳು ವಿಶ್ವಕ್ಕೆ ಬೆಳಕು:ಆರ್.ಐಶ್ವರ್ಯ

ಮೈಸೂರು: ಭಗವಾನ್ ಬುದ್ಧನ ತತ್ವಗಳು ಮತ್ತು ಬೋಧನೆಗಳು ಕೇವಲ ಒಂದು ದಿನಕ್ಕೆ ಸೀಮಿತವಾಗದೆ, ಜೀವನದ ಪ್ರತಿ ಹಂತದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಆರ್.ಐಶ್ವರ್ಯ ಹೇಳಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮೈಸೂರು ಮಹಾನಗರ ಪಾಲಿಕೆ ಹಾಗೂ ಭಗವಾನ ಬುದ್ಧ ಜಯಂತೋತ್ಸವ ಸಮಿತಿ ವತಿಯಿಂದ ಕರ್ನಾಟಕ ಕಲಾಮಂದಿರದಲ್ಲಿ ಭಗವಾನ ಬುದ್ಧ ಜಯಂತಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು. ಬುದ್ಧನು ಇಡೀ ಜಗತ್ತಿಗೆ ಶಾಂತಿ ಮತ್ತು ಜ್ಞಾನದ ಬೆಳಕನ್ನು ನೀಡಿದ ಮಹಾಪುರುಷ. ಅವರ ದಮ್ಮದ ಹಾದಿಯಲ್ಲಿ ನಡೆದರೆ ಮಾತ್ರ ಸಮ ಸಮಾಜದ ನಿರ್ಮಾಣ ಸಾಧ್ಯ. ಅಜ್ಞಾನದಿಂದ ಜ್ಞಾನದತ್ತ, ಅಸತೋಮಾ ಸದ್ಗಮಯ, ತಮಸೋಮಾ ಜ್ಯೋತಿರ್ಗಮಯ" ಎಂಬ ಮಂತ್ರದಂತೆ, ಮನುಷ್ಯನ ಅಜ್ಞಾನದ ಕತ್ತಲೆಯನ್ನು ಹೋಗಲಾಡಿಸಿ ಸುಜ್ಞಾನದ ಹಾದಿಯಲ್ಲಿ ನಡೆಸುವ ಶಕ್ತಿ ಬುದ್ಧನ ಬೋಧನೆಗಳಿಗಿದೆ ಎಂದು ತಿಳಿಸಿದರು.



ವಿಶ್ವಮೈತ್ರಿ ಬುದ್ಧ ವಿಹಾರ ಪೂಜ್ಯ ಡಾ. ಕಲ್ಯಾಣಸಿರಿ ಭಂತೇಜಿ ಮಾತನಾಡಿ ಪ್ರತಿಯೊಬ್ಬ ವ್ಯಕ್ತಿಯು ತನ್ನ ಒಳಗಿನ ಕೋಪ, ಅಸೂಯೆ ಮತ್ತು ದ್ವೇಷವನ್ನು ತ್ಯಜಿಸಿದಾಗ ಮಾತ್ರ ಸಮಾಜದಲ್ಲಿ ಶಾಂತಿ ನೆಲೆಸಲು ಸಾಧ್ಯ. ಬುದ್ಧನು ತೋರಿದ ಅಹಿಂಸೆಯ ಮಾರ್ಗವು ಇಂದಿನ ಅಶಾಂತಿಯುತ ಜಗತ್ತಿಗೆ ಅತಿ ಅವಶ್ಯಕವಾಗಿದೆ ಎಂದು ಹೇಳಿದರು.

ಪ್ರಜಾ ಪರಿವರ್ತನ ವೇದಿಕೆ ಬಿ. ಗೋಪಾಲ್ ಮಾತನಾಡಿದರು. ಕಾರ್ಯಕ್ರಮದಲ್ಲಿ ಮಹಾಬೋಧಿ ಶಾಖೆ ಪೂಜ್ಯ ಸೋಭಾನ ಭಂತೇಜಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನಸ್ವಾಮಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಎಂ.ಡಿ.ಸುದರ್ಶನ್, ಮಾಜಿ ಮೇಯರ್ ಪುರುಷೋತ್ತಮ್, ಮುಖಂಡರಾದ ಸೋಮಯ್ಯ ಮಳಿಯೂರು ಇತರರು ಉಪಸ್ಥಿತರಿದ್ದರು

## ಅನ್ಯ ವಿಷಯಗಳಿಗೆ ಆಸ್ಪದ ಕೊಡದೆ ವಿದ್ಯಾಭ್ಯಾಸ ಮಾಡಿ

ಮೈಸೂರು: ಉತ್ತಮ ಭವಿಷ್ಯ ಕಟ್ಟಿಕೊಳ್ಳುವುದನ್ನು ಗುರಿಯಾಗಿಸಿಕೊಂಡು ಅನ್ಯ ವಿಷಯಗಳಿಗೆ ಆಸ್ಪದ ಕೊಡದೆ ವಿದ್ಯಾಭ್ಯಾಸ ಮಾಡುವಂತೆ ಮಂಡ್ಯ ಡಯಟ್‌ನ ವಿಶ್ರಾಂತ ಪ್ರಾಚಾರ್ಯ ಪುರುಷೋತ್ತಮ್ ಸಲಹೆ ನೀಡಿದರು.



ನಗರದ ರಾಮಾನುಜ ರಸ್ತೆಯಲ್ಲಿರುವ ಶ್ರೀ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಸೋಮವಾರ ಹಿರಣ್ಮಯಿ ಪ್ರತಿಷ್ಠಾನ ಹಾಗೂ ಕಾವೇರಿ ಬಳಗ ಆಯೋಜಿಸಿದ್ದ ಎಸ್ಸೆಸ್ಸೆಲ್ಸಿ ಹಾಗೂ ಪಿಯುಸಿಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ಪ್ರತಿಭಾ ಪುರಸ್ಕಾರ ಪ್ರದಾನ ಮಾಡಿ ಮಾತನಾಡಿದರು. ಹಿರಣ್ಮಯಿ ಪ್ರತಿಷ್ಠಾನ ಹಾಗೂ ಕಾವೇರಿ ಬಳಗ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಲು ಇಂತಹ ಕಾರ್ಯಕ್ರಮ ಹಮ್ಮಿಕೊಂಡಿರುವುದು ಶ್ಲಾಘನೀಯ. ವಿದ್ಯಾರ್ಥಿಗಳಿಗೆ ಬೆನ್ನು ತಟ್ಟಿ ಪ್ರೋತ್ಸಾಹಿಸಿದರೆ ಅವರು ಮುಂದಿನ ಓದಿಗೆ ಪ್ರೇರಣೆಯಾಗಲಿದೆ ಎಂದರು.

ಸಮಾಜ ಸೇವಕ ರಘುರಾಮ ವಾಜಪೇಯಿ ಮಾತನಾಡಿ, ವಿದ್ಯಾರ್ಥಿಗಳು ಮಾದಕ ವಸ್ತುಗಳ ಚಟಗಳಂತಹ ದುಶ್ಚಟಗಳಿಂದ ದೂರವಿದ್ದು, ವ್ಯಾಸಂಗದತ್ತ ಚಿತ್ತ ಹರಿಸುವಂತೆ ಸಲಹೆ ನೀಡಿದರಲ್ಲದೆ, ಮೊಬೈಲ್ ವ್ಯಾಮೋಹದಿಂದಲೂ ದೂರವಾಗಿ ಓದಿನತ್ತ ಮುನ್ನಡೆಯುವಂತೆ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಶ್ರೀ ಶಿರಡಿ ಸಾಯಿಬಾಬಾ ಮಂದಿರದ ಉಪಾಸಕರಾದ ಗೋಪಾಲ ಸ್ವಾಮಿ ದಂಪತಿಯನ್ನು ಸನ್ಮಾನಿಸಲಾಯಿತು. ಹಿರಣ್ಮಯಿ ಪ್ರತಿಷ್ಠಾನದ ಅಧ್ಯಕ್ಷ ಎ.ಸಂಗಪ್ಪ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಪತ್ರಕರ್ತ ದೊಡ್ಡನಹುಂಡಿ ರಾಜಣ್ಣ ಮಾತನಾಡಿದರು. ಎಸ್ಸೆಸ್ಸೆಲ್ಸಿ ಹಾಗೂ ಪಿಯುಸಿಯಲ್ಲಿ ಹೆಚ್ಚು ಅಂಕ ಗಳಿಸಿದ 24 ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ಪದಕ,ಸ್ಮರಣಿಕೆ, ನೆನಪಿನ ಕಾಣಿಕೆ ನೀಡಿ ಸನ್ಮಾನಿಸಲಾಯಿತು. ಕಾವೇರಿ ಬಳಗದ ಅಧ್ಯಕ್ಷೆ ಕಾವೇರಿಯಮ್ಮ,ಒರಿಗಾಮಿ ಕಲಾವಿದ ಎಚ್.ಮುರಳೀಧರ್, ಶಿಕ್ಷಕ ನಾರಾಯಣ ರಾವ್, ಶ್ರೀ ಕಂಠಮೂರ್ತಿ, ಮನೋಹರ್ ಮತ್ತಿತರರಿದ್ದರು.

**ಸರ್ಕಾರಿ ವಿಭಾಗೀಯ ಮುದ್ರಣಾಲಯದಲ್ಲಿ ಆಯೋಜನೆ**

## ಡಾ.ಬಿ.ಆರ್.ಅಂಬೇಡ್ಕರ್ ಜನ್ಮದಿನಾಚರಣೆ

ಮೈಸೂರು: ಸರಸ್ವತಿಪುರಂನಲ್ಲಿರುವ ಸರ್ಕಾರಿ ವಿಭಾಗೀಯ ಮುದ್ರಣಾಲಯದಲ್ಲಿ ಸೋಮವಾರ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜನ್ಮದಿನಾಚರಣೆಯನ್ನು ಆಚರಿಸಲಾಯಿತು.



ಅಂಬೇಡ್ಕರ್ ಪುತ್ಥಳಿಗೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ಕೆಪಿಸಿಸಿ ಸಂಯೋಜಕ, ಸಂವಿಧಾನ ಸಂರಕ್ಷಣಾ ಹೋರಾಟ ಸಮಿತಿ ರಾಜ್ಯಾಧ್ಯಕ್ಷ ಎನ್. ಭಾಸ್ಕರ್, ಅಂಬೇಡ್ಕರ್ ಅವರ ಬರೆದ ಸಂವಿಧಾನವನ್ನು ನಾಶಪಡಿಸಲು ಮನುವಾದಿ, ಕೋಮುವಾದಿಗಳು ಮುಂದಾಗಿದ್ದು, ಸಂವಿಧಾನ ರಕ್ಷಣೆಗೆ ಎಲ್ಲರೂ ಪಣತೊಡಬೇಕಿದೆ. ಭಾರತ ಒಂದು ರಾಷ್ಟ್ರವಾಗಿ ಉಳಿಯಬೇಕಾದರೆ ಸಂವಿಧಾನವನ್ನು ಉಳಿಸಬೇಕಿದೆ. ಸ್ವಾತಂತ್ರ?ಯ ಪೂರ್ವದಲ್ಲಿ ಕ್ವಿಟ್ ಇಂಡಿಯಾ ಚಳವಳಿ ಆರಂಭಕ್ಕೂ ತಿಂಗಳ ಮೊದಲು ವೈಸರಾಯ್ ಅವರು ರಚಿಸಿದ ಕಾರ್ಮಿಕ ಮಂಡಳಿಯಲ್ಲಿ ಅಂಬೇಡ್ಕರ್ ಸದಸ್ಯರಾಗಿ ನೇಮಕಗೊಳ್ಳುತ್ತಾರೆ. ಕಾರ್ಮಿಕ ವರ್ಗಗಳ ಕಲ್ಯಾಣಕ್ಕೆ ಹಲವು ಮಾರ್ಗಸೂಚಿಗಳನ್ನು ಪರಿಚಯಿಸುತ್ತಾರೆ. ಅಂಬೇಡ್ಕರ್ ಅವರು ಕಾರ್ಮಿಕರ ಹಕ್ಕು ಮತ್ತು ಕಲ್ಯಾಣಕ್ಕಾಗಿ ಶ್ರಮಿಸಿದ ಮಹಾನ್ ನಾಯಕ ಎಂದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ. ವಿಜಯ್ ಕುಮಾರ್ ಮಾತನಾಡಿ, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತಿಯನ್ನು ಎಸ್ಸಿ, ಎಸ್ಟಿ ಜನರು ಆಚರಿಸಬೇಕು. ಉಳಿದವರು ಆಚರಿಸಬಾರದು ಎಂಬುದು ದೇಶದ್ರೋಹದ ಕೆಲಸ. ಅಂಬೇಡ್ಕರ್ ಜಯಂತಿಯನ್ನು ಎಲ್ಲ ಜಾತಿಯ ಜನರು ಸೇರಿ ಆಚರಿಸಬೇಕು ಎಂದು ತಿಳಿಸಿದರು.

ಅಪರ ಜಿಲ್ಲಾ ಸರ್ಕಾರಿ ವಕೀಲ ತಿಮ್ಮಯ್ಯ, ವಕೀಲ ಕಾಂತರಾಜ್, ಸರ್ಕಾರಿ ವಿಭಾಗೀಯ ಮುದ್ರಣಾಲಯದ ಉಪ ನಿರ್ದೇಶಕಿ ಜ್ಯೋತಿ ಮಾತನಾಡಿದರು. ಸರ್ಕಾರಿ ವಿಭಾಗೀಯ ಮುದ್ರಣಾಲಯದ ಅಧೀಕ್ಷಕಿ ಶೈಲಜಾ, ಕರ್ನಾಟಕ ಭೀಮಸೇನೆ ಅಧ್ಯಕ್ಷ ಮಂಜುನಾಥ್, ಮುಖಂಡರಾದ ಶಿವಪ್ರಸಾದ್, ಜಿ.ಮಹಾದೇವ್, ಹೆಡತಲೆ ಮಂಜುನಾಥ್, ಸರ್ಕಾರಿ ಎಸ್ಸಿ, ಎಸ್ಟಿ ನೌಕರರ ಜಿಲ್ಲಾ ಸಂಘದ ಖಜಾಂಚಿ ಮಹದೇವಸ್ವಾಮಿ, ಸರ್ಕಾರಿ ವಿಭಾಗೀಯ ಮುದ್ರಣಾಲಯದ ಎಸ್ಸಿ, ಎಸ್ಟಿ ನೌಕರರ ಸಂಘದ ಕಾರ್ಯದರ್ಶಿ ಜೆ.ಪ್ರಭು ಇದ್ದರು.

# ಮೇ 8ರಿಂದ ಚರಕದ ಕೈಮಗ್ಗ ಉತ್ಪನ್ನಗಳ ಪ್ರದರ್ಶನ, ಮಾರಾಟ

**ಮೈಸೂರು:** ಇಲ್ಲಿನ ವಿಜಯನಗರದ ಕನ್ನಡ ಸಾಹಿತ್ಯ ಪರಿಷತ್ ರಸ್ತೆಯಲ್ಲಿನ ಜಗನ್ನಾಥ್ ಸೆಂಟರ್ ಫಾರ್ ಆರ್ಟ್9 ಅಂಡ್ ಕಲ್ಚರ್ ಸಂಸ್ಥೆಯಲ್ಲಿ ಮೇ 8ರಿಂದ 10ರ ವರೆಗೆ ಸಾಗರ ಸಮೀಪದ ಹೆಗ್ಗೋಡು-ಭೀಮನಕೋಣೆಯ ಚರಕ ಮಹಿಳಾ ವಿವಿಧೋದ್ದೇಶ ಕೈಗಾರಿಕಾ ಸಹಕಾರ ಸಂಘವು ನೈಸರ್ಗಿಕ ಬಣ್ಣದ ಅಪ್ಪಟ ಹತ್ತಿ ಕೈಮಗ್ಗ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟ ಮೇಳ ಜೊತೆಗೆ ಕೊಡು- ಕೊಳ್ಳುವವರ ಸಮಾವೇಶ ಆಯೋಜಿಸಿದೆ.

ಮೇ 8ರಂದು ಮಧ್ಯಾಹ್ನ 12 ಗಂಟೆಗೆ ಮೇಳಕ್ಕೆ ಸುತ್ತೂರು ಶ್ರೀವೀರ ಸಿಂಹಾಸನ ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಚಾಲನೆ ನೀಡುವರು. ಅತಿಥಿಗಳಾಗಿ ಮೈಸೂರು ಬುಕ್ ಕ್ಲಬ್ ಚಾರಿಟೇಬಲ್ ಟ್ರಸ್ಟ್ ಸಂಸ್ಥಾಪಕಿ ಶುಭಾ ಸಂಜಯ್ ಅರಸ್ ಭಾಗವಹಿಸುವರು. ಚರಕದ ಸಂಸ್ಥಾಪಕರಾದ ರಂಗಕರ್ಮಿ ಪ್ರಸನ್ನ ಉಪಸ್ಥಿತರಿರುವರು.

ಸಮಾರಂಭದಲ್ಲಿ ಮಠಾಧೀಶರು ತೊಡುವ ಕಷಾಯವಸ್ತ್ರ ಬಿಡುಗಡೆ, ಬೇವು ಮತ್ತು ಅರಿಸಿನ ಬಣ್ಣದಲ್ಲಿನ ಸಿದ್ಧ ಉಡುಪುಗಳು ಅನಾವರಣಗೊಳ್ಳಲಿವೆ.

ಮೇಳದಲ್ಲಿ ಚರಕದ ನೈಸರ್ಗಿಕ ಬಣ್ಣದ ಕೈಮಗ್ಗದ ಬಟ್ಟೆಗಳು, ಸಿದ್ಧ ಉಡುಪುಗಳು ಇರಲಿವೆ. ಉತ್ತರ ಕರ್ನಾಟಕದ ಕೈಮಗ್ಗದ ಸೀರೆಗಳು, ನೈಸರ್ಗಿಕ ಬಣ್ಣದ ಬೆಡ್ ಸ್ಪ್ರೆಡ್ ದೊರೆಯಲಿವೆ. ಜಮ್ದಾನಿ ಸೀರೆ, ಕುರ್ತಾ, ಶರ್ಟ್9 ಹಾಗೂ ಗೃಹಾಲಂಕಾರ ಉಡುಪುಗಳು ಸಿಗಲಿವೆ.

ಮೇಳವು ಮೂರು ದಿನಗಳವರೆಗೆ ಬೆಳಿಗ್ಗೆ 10.30ರಿಂದ ರಾತ್ರಿ 7.30ರ ವರೆಗೆ ನಡೆಯಲಿದೆ. ಈ ಮೇಳವನ್ನು ರಾಜ್ಯ ಕೈಮಗ್ಗ ಮತ್ತು ಜವಳಿ ಇಲಾಖೆಯ ಪವಿತ್ರವಸ್ತ್ರ ಯೋಜನೆಯಡಿ ಆಯೋಜಿಸಲಾಗಿದೆ. ಮಾಹಿತಿಗೆ 63638 85215/74111 20862 ಸಂಪರ್ಕಿಸಬಹುದು.

## ಕೈಮಗ್ಗ ನೇಕಾರರ ನೋಂದಣಿ ಕಡ್ಡಾಯ

**ತುಮಕೂರು:** ನೇಕಾರರ ಸಮ್ಮಾನ್ ಯೋಜನೆಯಡಿ ಆರ್ಥಿಕ ಸೌಲಭ್ಯ ಪಡೆಯುವ ಎಲ್ಲಾ ಅರ್ಹ ಕೈಮಗ್ಗ ನೇಕಾರರು PMJJBY/ PMSBY ಗಳಡಿ ಕಡ್ಡಾಯವಾಗಿ ನೋಂದಾಯಿಸಿಕೊಳ್ಳಬೇಕೆಂದು ಕೈಮಗ್ಗ ಮತ್ತು ಜವಳಿ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ. ನೋಂದಾಯಿಸಿದ ನಂತರ ಕೈಮಗ್ಗ ಮತ್ತು ಜವಳಿ ಇಲಾಖೆಗೆ ದಾಖಲಾತಿಯನ್ನು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರ ಕಚೇರಿ, ಕೈಮಗ್ಗ ಮತ್ತು ಜವಳಿ ಇಲಾಖೆ, 5ನೇ ಕ್ರಾಸ್, ಸಿದ್ದಗಂಗಾ ಬಡಾವಣೆ, ತುಮಕೂರು, ದೂ.ವಾ.ಸಂ. 0816-2275370, ಮೊ.ಸಂ.7022193202ನ್ನು ಸಂಪರ್ಕಿಸಬೇಕೆಂದು ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

# 2028ರಲ್ಲೂ ರಾಜ್ಯದಲ್ಲಿ ಕಾಂಗ್ರೆಸ್‌ಗೆ ಮತದಾರರ ಆಶೀರ್ವಾದ ಗ್ಯಾರಂಟಿ: ಡಿಕೆಶಿ



**ಬೆಂಗಳೂರು/ಕನಕಪುರ:** ಕರ್ನಾಟಕದ ಎರಡು ಕ್ಷೇತ್ರಗಳ ಉಪಚುನಾವಣೆಯಲ್ಲಿ ಜನ ನಮ್ಮ ಮೇಲೆ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ನಮ್ಮ ಸರ್ಕಾರ ಗ್ಯಾರಂಟಿ ಯೋಜನೆಗಳ ಜತೆಗೆ ದಕ್ಷ ಆಡಳಿತ ನೀಡುತ್ತಿರುವುದನ್ನು ಗಮನಿಸಿದ್ದಾರೆ. 2028ರಲ್ಲಿ ಮತ್ತೆ ಅಧಿಕಾರಕ್ಕೆ ಬರಲು ಬೆಂಬಲ ನೀಡುವ ಸಂದೇಶ ನೀಡಿದ್ದಾರೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಬಣ್ಣಿಸಿದರು.

ಕೆಪಿಸಿಸಿ ಕಚೇರಿಯಲ್ಲಿ ಹಾಗೂ ಕನಕಪುರದಲ್ಲಿ ಚುನಾವಣಾ ಫಲಿತಾಂಶ ವಿಚಾರವಾಗಿ ಮಾಧ್ಯಮಗಳಿಗೆ ಶಿವಕುಮಾರ್ ಅವರು ಸೋಮವಾರ ಪ್ರತಿಕ್ರಿಯೆ ನೀಡಿದರು.

ಕರ್ನಾಟಕ ರಾಜ್ಯದಲ್ಲಿ ನಮ್ಮ ಇಬ್ಬರು ನಾಯಕರ ನಿಧನದಿಂದ ಎರಡು ವಿಧಾನಸಭಾ ಕ್ಷೇತ್ರಗಳು ತೆರವಾಗಿದ್ದವು. ಈ ಎರಡು ಕ್ಷೇತ್ರಗಳ ಜನತೆಗೆ ನಾನು ಕೃತಜ್ಞತೆ ಸಲ್ಲಿಸುತ್ತೇನೆ. ನಮ್ಮ ಪಕ್ಷದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಪ್ರತಿ ಹಳ್ಳಿಗೆ ಭೇಟಿ ನೀಡಿ ಹಗಲಿರುಳು ಶ್ರಮಿಸಿದ್ದಾರೆ. ಅವರಿಗೂ ನಾನು ಪಕ್ಷ ಹಾಗೂ ಸರ್ಕಾರದ ಪರವಾಗಿ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು.

ನಮ್ಮ ಗ್ಯಾರಂಟಿ ಯೋಜನೆಗಳನ್ನು ರಾಜ್ಯದ ಜನ ಬಹಳ ಸಂತೋಷದಿಂದ ತಮ್ಮ ಮನೆಗೆ ಬರ ಮಾಡಿಕೊಂಡಿದ್ದಾರೆ. ಗೃಹಲಕ್ಷ್ಮಿ, ಗೃಹಜ್ಯೋತಿ, ಅನ್ನಭಾಗ್ಯ, ಶಕ್ತಿ, ಯುವನಿಧಿ ಯೋಜನೆಗಳಿಂದ ಪ್ರಯೋಜನ ಪಡೆದಿರುವ ಜನ ಚುನಾವಣೆ ಪ್ರಚಾರದ ವೇಳೆ ನಮ್ಮ ಕಾರ್ಯಕರ್ತರನ್ನು ಗೌರವದಿಂದ ನೋಡುತ್ತಿದ್ದಾರೆ. ಈ ಗ್ಯಾರಂಟಿ ಸರ್ಕಾರದ ಕೈ ಬಿಡುವುದಿಲ್ಲ, ಮತ್ತಷ್ಟು ಶಕ್ತಿ ತುಂಬುತ್ತೇವೆ. 2028ಕ್ಕೂ ನಿಮಗೆ ಬೆಂಬಲ ನೀಡುತ್ತೇವೆ ಎಂಬ ಸಂದೇಶ ನೀಡಿದ್ದಾರೆ ಎಂದು ತಿಳಿಸಿದರು.

ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ನಾವು ಹೆಚ್ಚಿನ ಅಂತರ ನಿರೀಕ್ಷೆ ಮಾಡಿದ್ದೆವು. ಆದರೂ ಗೆಲ್ಲುತ್ತೇವೆ ಎಂದು ಸಿಎಂ ಹೇಳಿದ್ದಾರೆ. ಕೆಲವು ಕಡೆ ತಾಂತ್ರಿಕ ಸಮಸ್ಯೆಯಿಂದ ಇವಿ ಪ್ಯಾಟ್ ತೆರೆಯುವುದು ಬಾಕಿ ಇದೆ ಎಂದು ನಮಗೆ ಮಾಹಿತಿ ಬಂದಿದೆ. ಇದರಲ್ಲಿ ಸುಮಾರು 1500 ಮತ ಎಣಿಕೆ ಬಾಕಿ ಇದ್ದು, ಪ್ರಸ್ತುತ 4900 ಮತಗಳ ಮುನ್ನಡೆ ಇದ್ದು ನಮ್ಮ ಅಭ್ಯರ್ಥಿ ಗೆಲ್ಲುವುದು ಬಹುತೇಕ ನಿಶ್ಚಿತವಾಗಿದೆ. ಅಧಿಕೃತ ಘೋಷಣೆ ಬಾಕಿ ಇದೆ. ಎಸ್ ಡಿಪಿಐ ಅಭ್ಯರ್ಥಿಗೆ ಸುಮಾರು 19 ಸಾವಿರ ಮತಗಳು ಸಿಕ್ಕಿವೆ. ರಾಜಕಾರಣ ಹಾಗೂ ಚುನಾವಣೆಯಲ್ಲಿ 49 ಶೂನ್ಯಕ್ಕೆ ಸಮ, 51 ನೂರಕ್ಕೆ ಸಮನಾಗುತ್ತದೆ ಎಂದು ತಿಳಿಸಿದರು.

ಬಾಗಲಕೋಟೆಯಲ್ಲಿ ನಾವು ಕಳೆದ ಚುನಾವಣೆಯಲ್ಲಿ ಕಡಿಮೆ ಮತಗಳ ಅಂತರದಲ್ಲಿ ಗೆದ್ದಿದ್ದೆವು. ಈ ಉಪಚುನಾವಣೆಯಲ್ಲಿ 22,332 ಮತಗಳ ಅಂತರದಲ್ಲಿ ನಮ್ಮ ಅಭ್ಯರ್ಥಿ ಗೆದ್ದಿದ್ದಾರೆ. ಗ್ರಾಮೀಣ ಭಾಗದಲ್ಲಿ ಮತಯಾಚಿಸುವಾಗ ಪ್ರತಿ ಕುಟುಂಬದವರು ನಮ್ಮ ಕಾರ್ಯಕರ್ತರನ್ನು ಗೌರವಯುತದಿಂದ ಕಂಡು ಸರ್ಕಾರದ ಗ್ಯಾರಂಟಿ ಯೋಜನೆಗಳು ನಮ್ಮ ಬದುಕಿನಲ್ಲಿ ಬದಲಾವಣೆ ತಂದಿವೆ. ಹೀಗಾಗಿ ನಮ್ಮ ಬೆಂಬಲ ಕಾಂಗ್ರೆಸ್ ಪಕ್ಷಕ್ಕೆ ಎಂದು ಭರವಸೆ ನೀಡಿದ್ದರು. ಹೀಗಾಗಿ ಉಪಚುನಾವಣೆಯಲ್ಲಿ ಗೆಲ್ಲುವ ಆತ್ಮವಿಶ್ವಾಸ ಮೂಡಿತ್ತು ಎಂದು ತಿಳಿಸಿದರು.

ಪಕ್ಷದ ಕಾರ್ಯಕರ್ತರು, ಮುಖಂಡರು, ಮತದಾರರಿಗೆ ಧನ್ಯವಾದಗಳು

ನಾವು ಎರಡು ಕ್ಷೇತ್ರಗಳ ಉಪಚುನಾವಣೆ ಗೆದ್ದಿದ್ದೇವೆ. ವಿರೋಧ ಪಕ್ಷಗಳು ಎಷ್ಟೇ ಟೀಕೆ ಮಾಡಿದರೂ ಜನ ನಮ್ಮ ಕೈಬಿಡಲಿಲ್ಲ. ನಮ್ಮ ಆತ್ಮವಿಶ್ವಾಸ ಹೆಚ್ಚಿಸಿದ್ದಾರೆ. ಅವರಿಗೆ ಮಾಡುತ್ತಿರುವ ಸೇವೆಯನ್ನು ಮುಂದುವರಿಸುವ ಸಂದೇಶ ನೀಡಿದ್ದಾರೆ. ಸಿಎ ಸಿದ್ದರಾಮಯ್ಯ, ಸಂಪುಟ ಸಹೋದ್ಯೋಗಿಗಳು, ಶಾಸಕರು, ಪಕ್ಷದ ಪದಾಧಿಕಾರಿಗಳು, ಜಿಲ್ಲಾಧ್ಯಕ್ಷರು, ಬ್ಲಾಕ್ ಅಧ್ಯಕ್ಷರುಗಳು ಹಗಲಿರುಳು ದುಡಿದಿದ್ದಾರೆ. ನಮ್ಮ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಬಗ್ಗೆ ಮಾಹಿತಿ ಪಡೆಯಲಾಗಿದೆ. ಎಲ್ಲಾ ವರ್ಗ ಹಾಗೂ ಎಲ್ಲಾ ಸಮಾಜದ ಜನ ನಮಗೆ ಬೆಂಬಲ ನೀಡಿದ್ದಾರೆ. ದಾವಣಗೆರೆಯಲ್ಲಿ 20% ಮತ ಕಡಿಮೆಯಾಗಿದ್ದರೂ ಎಲ್ಲಾ ವರ್ಗದ ಜನ ನಮಗೆ ಶಕ್ತಿ ತುಂಬಿದ್ದಾರೆ. ಮುಖ್ಯಮಂತ್ರಿಗಳ ನಾಯಕತ್ವ, ಕಾಂಗ್ರೆಸ್ ಪಕ್ಷದ ಮುಖಂಡತ್ವಕ್ಕೆ ಬೆಂಬಲ ವ್ಯಕ್ತಪಡಿಸಿರುವ ಎಲ್ಲರಿಗೂ ಕೃತಜ್ಞತೆ ಅರ್ಪಿಸುತ್ತೇನೆ ಎಂದು ತಿಳಿಸಿದರು.

ಪಕ್ಷದ ಕೆಲವು ನಾಯಕರು ಬೇರೆ ಅಭ್ಯರ್ಥಿಗೆ ಬೆಂಬಲ ನೀಡಿದ್ದಾರೆ ಎಂದು ಹೇಳಿಕೆ ನೀಡಲಾಗುತ್ತಿತ್ತು. ಈ ಮಧ್ಯೆ ನಿಮ್ಮ ಅಭ್ಯರ್ಥಿ ಗೆದ್ದಿರುವುದು ಹೇಗೆ ಎಂದು ಕೇಳಿದಾಗ, ಚುನಾವಣೆಯಲ್ಲಿ ಎಲ್ಲರೂ ಒಗ್ಗಟ್ಟಿನಿಂದ ಕೆಲಸ ಮಾಡಿದ್ದಾರೆ. ಈ ಚುನಾವಣೆಯಲ್ಲಿ ನಮ್ಮ ಅಭ್ಯರ್ಥಿ ಗೆದ್ದಿದ್ದಾರೆ. ಇದರ ಹೊರತಾಗಿ ಬೇರೆ ವಿಚಾರವನ್ನು ಮಾಧ್ಯಮಗಳ ಮುಂದೆ ಚರ್ಚೆ ಮಾಡುವುದಿಲ್ಲ. ಇತರ ವಿಚಾರವಾಗಿ ತಿದ್ದುವುದು, ಮಾರ್ಗದರ್ಶನ ನೀಡುವ ಕೆಲಸವನ್ನು ಪಕ್ಷದ ವ್ಯಾಪ್ತಿಯಲ್ಲಿ ಮಾಡುತ್ತೇವೆ ಎಂದರು.

ದಾವಣಗೆರೆ ಫಲಿತಾಂಶದಲ್ಲಿ ಒಳ ಏಟು ಬಿದ್ದಿದೆ ಎಂದು ಅನಿಸುತ್ತದೆಯೇ ಎಂದು ಕೇಳಿದಾಗ, 1995ರಿಂದ ಶಾಮನೂರು ಶಿವಶಂಕರಪ್ಪ ಅವರು ಆ ಕ್ಷೇತ್ರ ಉಳಿಸಿಕೊಂಡು ಬಂದಿದ್ದರು. ಅಲ್ಪಸಂಖ್ಯಾತ ನಾಯಕರು ನಮಗೆ ಸಹಕಾರ ನೀಡುತ್ತಾ ಬಂದಿದ್ದಾರೆ. ಅವರಿಗೆ ಸ್ಥಾನಮಾನ ನೀಡಲು ಮೂರು ಬಾರಿ ವಿಧಾನ ಪರಿಷತ್ ಸ್ಥಾನ ನೀಡಿ ಗೌರವ ನೀಡಿದ್ದೇವೆ. ವ್ಯಕ್ತಿಗಳಲ್ಲಿ ಅಭಿಪ್ರಾಯ ಬೇರೆ ಇದ್ದರೂ ಪಕ್ಷದಲ್ಲಿ ನಾಯಕತ್ವದಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದರು.

ಮತ ಪ್ರಮಾಣ ಕಡಿಮೆಯಾಗಿರುವ ಬಗ್ಗೆ ಪರಾಮರ್ಶೆ ಮಾಡುತ್ತೀರಾ ಎಂದು ಕೇಳಿದಾಗ, ಈಗ ಆ ಚರ್ಚೆ ಬೇಡ ಸಮಯ ಬಂದಾಗ ನೋಡೋಣ ಎಂದರು.

ದಾವಣಗೆರೆ ದಕ್ಷಿಣದಲ್ಲಿ ಶಿವಶಂಕರಪ್ಪ ಅವರು ಪಡೆದ ಮುನ್ನಡೆ ಈಗ ಬರಲಿಲ್ಲ ಎಂದು ಕೇಳಿದಾಗ, ಒಂದೊಂದು ಚುನಾವಣೆ ಒಂದೊಂದು ರೀತಿ ನಡೆಯುತ್ತದೆ. ಬಾಗಲಕೋಟೆಯಲ್ಲಿ 5ಸಾವಿರ ಇದ್ದ ಅಂತರ ಈಗ 22 ಸಾವಿರಕ್ಕೆ ಏರಿಕೆಯಾಗಿದೆಯಲ್ಲ ಅದಕ್ಕೆ ಏನು ಹೇಳುತ್ತೀರಾ ಅಲ್ಲಿ ಒಗ್ಗಟ್ಟಿನಲ್ಲಿ ಕೆಲಸ ಮಾಡಿರುವಂತೆ ಇಲ್ಲೂ ಒಗ್ಗಟ್ಟಿನಲ್ಲಿ ಕೆಲಸ ಮಾಡಿದ್ದಾರೆ ಎಂದರು.

ದಾವಣಗೆರೆಯಲ್ಲಿ ಇನ್ನು ಸ್ವಲ್ಪ ಮುನ್ನಡೆ ಬರಬಹುದಿತ್ತು ಎಂದು ಕೇಳಿದಾಗ, ಸ್ವಲ್ಪ ಮತಗಳು ಎಸ್ ಡಿಪಿಐ ಅಭ್ಯರ್ಥಿಗೆ ಹೋದ ಕಾರಣ ಗೆಲುವಿನ ಅಂತರ ಕಡಿಮೆಯಾಗಿದೆ. ಮುಂದೆ ಈ ರೀತಿ ಆಗದಂತೆ ದಾಗ್ರತೆ ವಹಿಸುತ್ತೇವೆ ಎಂದರು.

ದಾವಣಗೆರೆ ಉಪಚುನಾವಣೆಗೆ ಸಂಬಂಧಿಸಿದಂತೆ ಜರುಗಿಸಲಾಗಿರುವ ಶಿಸ್ತು ಕ್ರಮ ಹಿಂಪಡೆಯುತ್ತೀರಾ ಎಂದು ಕೇಳಿದಾಗ, ಇದು ಪಕ್ಷದ ಆಂತರಿಕ ವಿಚಾರ. ಕೆಲವರು ರಾಜಕಾರಣದಲ್ಲಿ ಒಬ್ಬರಿಗೊಬ್ಬರು ತ್ಯಾಗ ಮಾಡಬೇಕಾಗುತ್ತದೆ ಎಂದರು.

ದಾವಣಗೆರೆ ಫಲಿತಾಂಶ ಬರುವ ಮುನ್ನವೇ ಕ್ರಮಕೈಗೊಂಡಿದ್ದು ಆತುರವಾಗಲಿಲ್ಲವೇ ಎಂದು ಕೇಳಿದಾಗ, ಪಕ್ಷವು ತನಗೆ ಮಾಹಿತಿ ತಿಳಿದ ನಂತರ ಯಾವ ಸಮಯಕ್ಕೆ ಯಾವ ನಿರ್ಧಾರ ತೆಗೆದುಕೊಳ್ಳಬೇಕೋ ಅದನ್ನು ತೆಗೆದುಕೊಂಡಿದೆ. ಸಾಕ್ಷಿ ಸಮೇತ ಮಾಹಿತಿ ರವಾನೆಯಾಗಿದ್ದು, ಈ ವಿಚಾರವಾಗಿ ಮುಖ್ಯಮಂತ್ರಿಗಳು, ಹೈಕಮಾಂಡ್ ನಾಯಕರು, ನಮಗೆ ಹಾಗೂ ಅದನ್ನು ಮಾಡಿದವರಿಗೂ ಗೊತ್ತಿತ್ತು ಎಂದು ಹೇಳಿದರು.

**ಕೇರಳದಲ್ಲಿ ನಿರೀಕ್ಷೆಯಂತೆ 2/3 ಬಹುಮತ:** ಕೇರಳದಲ್ಲಿ ಬಹುದೊಡ್ಡ ಅಂತರದಿಂದ ಯುಡಿಎಫ್ ಸರ್ಕಾರವನ್ನು ಜನ ಅಧಿಕಾರಕ್ಕೆ ತಂದಿದ್ದಾರೆ. ಎಲ್ ಡಿಎಫ್ ಹಾಗೂ ಬಿಜೆಪಿ ಒಳ ಒಪ್ಪಂದ ಮಾಡಿಕೊಂಡರೂ ಜನ ನಮಗೆ ಆಶೀರ್ವಾದ ಮಾಡಿದ್ದಾರೆ. ತಮಿಳುನಾಡಿನಲ್ಲಿ ಡಿಎಂಕೆ ಸೋತಿದ್ದರೂ ಬಿಜೆಪಿ ಅಂಗಪಕ್ಷವನ್ನು ಜನ ಸೋಲಿಸಿದ್ದಾರೆ. ಆಮೂಲಕ ಕೋಮುವಾದಿ ಶಕ್ತಿಯನ್ನು ದೂರವಿಟ್ಟಿದ್ದಾರೆ. ಹೀಗಾಗಿ ಅಲ್ಲಿನ ಮತದಾರರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದರು.

ಕೇರಳದಲ್ಲಿ ಇಷ್ಟು ದೊಡ್ಡ ಬಹುಮತ ಬರುವ ವಿಶ್ವಾಸವಿತ್ತೆ ಎಂದು ಕೇಳಿದಾಗ, ಖಂಡಿತ, ನಾನು ಕೇರಳ ಚುನಾವಣೆ ಪ್ರಚಾರದ ವೇಳೆ ನನ್ನ ಹೇಳಿಕೆ ಗಮನಿಸಿ. ನಾವು ಮೂರನೇ ಎರಡರಷ್ಟು ಬಹುಮತದೊಂದಿಗೆ ಅಧಿಕಾರಕ್ಕೆ ಬರುವ ವಿಶ್ವಾಸ ವ್ಯಕ್ತಪಡಿಸಿದ್ದೆ. ಕೇರಳದಲ್ಲಿ ಎಲ್ಲಾ ನಾಯಕರು ಒಗ್ಗಟ್ಟಾಗೊ ಕೆಲಸ ಮಾಡಿದ್ದಾರೆ. ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ. ಕೇರಳದ ಕಾರ್ಯಕರ್ತರು ಹಾಗೂ ಮತದಾರರಿಗೆ ಧನ್ಯವಾದ ಅರ್ಪಿಸುತ್ತೇನೆ. ದಕ್ಷಿಣ ಭಾರತದಲ್ಲಿ ಜನ ಬಿಜೆಪಿಯನ್ನು ಸಂಪೂರ್ಣವಾಗಿ ಕಿತ್ತೊಗೆದು ಸಂದೇಶ ರವಾನಿಸಲಾಗಿದೆ ಎಂದು ತಿಳಿಸಿದರು.

ಟಿವಿಕೆ ಜೊತೆ ಮಾತುಕತೆ ನಡೆಸಲು ನೀವು ಹೋಗುತ್ತೀರಾ ಎಂದು ಕೇಳಿದಾಗ, ಪಕ್ಷ ಎಷ್ಟು ಹೇಳುತ್ತದೋ ಅಷ್ಟು ಕೆಲಸ ಮಾಡಿಕೊಂಡಿರುವವನು ನಾನು. ಉಳಿದ ವಿಚಾರದ ಬಗ್ಗೆ ತಲೆ ಕೆಡಿಸಿಕೊಳ್ಳುವುದಿಲ್ಲ. ನನಗೆ ಪಕ್ಷ ಹೇಳಿದ ಕೆಲಸ ಮಾಡುತ್ತೇನೆ ಎಂದು ತಿಳಿಸಿದರು.

**ಬಿಜೆಪಿಯಿಂದ ಅಧಿಕಾರ ದುರುಪಯೋಗ:** ಕೆಪಿಸಿಸಿ ಅಧ್ಯಕ್ಷರಾಗಿ ಪಂಚರಾಜ್ಯ ಚುನಾವಣೆಯನ್ನು ಹೇಗೆ ವ್ಯಾಖ್ಯಾನ ಮಾಡುತ್ತೀರಿ ಎಂದು ಕೇಳಿದಾಗ, ಜನರಿಗೆ ಭಾವನೆ ಮೇಲೆ ರಾಜಕಾರಣ ಮಾಡಬೇಕು. ಇನ್ನು ಈ ಬಾರಿಯ ಚುನಾವಣೆಯಲ್ಲಿ ಬಿಜೆಪಿ ಅಧಿಕಾರ ದುರುಪಯೋಗ ಮಾಡಿಕೊಂಡಿದೆ. ವಿಶೇಷವಾಗಿ ಪಶ್ಚಿಮ ಬಂಗಾಳ, ಅಸ್ಸಾಂ ಹಾಗೂ ತಮಿಳುನಾಡಿನಲ್ಲಿ ದೊಡ್ಡಮಟ್ಟದಲ್ಲಿ ಅಧಿಕಾರ ದುರುಪಯೋಗ ಮಾಡಿಕೊಂಡಿದ್ದಾರೆ. 2.50 ಲಕ್ಷ ಕೇಂದ್ರ ಸಶಸ್ತ್ರ ಮೀಸಲು ಪಡೆ ಸಿಬ್ಬಂದಿ ನಿಯೋಜಿಸಿ 96 ಲಕ್ಷ ಮತದಾರರನ್ನು ಮತಪಟ್ಟಿಯಿಂದ ತೆಗೆದುಹಾಕಿ ಚುನಾವಣೆ ಮಾಡಿದ್ದಾರೆ ಎಂದು ತಿಳಿಸಿದರು.

ಅಸ್ಸಾಂ ಚುನಾವಣೆ ಬಗ್ಗೆ ನೀವು ಬಹಳಷ್ಟು ಭರವಸೆ ಹೊಂದಿದ್ದಿರಿ ಎಂದಾಗ, ರಾಜಕಾರಣಿಯಾಗಿ ನಾನು ಭರವಸೆಯಿಂದಲೇ ಬದುಕಬೇಕು ಎಂದರು.

ವಿಜಯ್ ಅವರಿಗೆ ರಾಜಕೀಯ ಅನುಭವವಿಲ್ಲ ಎಂಬ ನಿಮ್ಮ ಹೇಳಿಕೆ ವೈರಲ್ ಆಗುತ್ತಿದೆ ಎಂಬ ನಿಮ್ಮ ಹೇಳಿಕೆ ಈಗ ವೈರಲ್ ಆಗುತ್ತಿದೆ ಎಂದು ಕೇಳಿದಾಗ, ಅವರು ಚುನಾವಣೆ ಪ್ರಚಾರದ ವೇಳೆ ಕಾಂಗ್ರೆಸ್ ಪಕ್ಷದ ಬೆಂಬಲ ನಮಗಿದೆ ಎಂದಿದ್ದರು. ನಾವು ಅವರಿಗೆ ಎಲ್ಲಿ ಬೆಂಬಲ ನೀಡಿದ್ದೆವು ಆ ವಿಚಾರವಾಗಿ ನಾನು ಆ ಮಾತು ಹೇಳಿದ್ದೆ. ನಾವು ಈಗಾಗಲೇ ಒಂದು ಪಕ್ಷದ ಜತೆ ಮೈತ್ರಿ ಮಾಡಿಕೊಂಡಿರುವಾಗ ಹೇಗೆ ಆ ರೀತಿ ಮಾಡಲು ಸಾಧ್ಯ. ಒಂದು ಪಕ್ಷದ ಜತೆ ಅರ್ಧ, ಮತ್ತೊಂದು ಪಕ್ಷದ ಜತೆ ಅರ್ಧ ಮೈತ್ರಿ ಮಾಡಲು ಆಗುವುದಿಲ್ಲ ಎಂದರು.

ತಮಿಳುನಾಡಿನಲ್ಲಿ ಟಿವಿಕೆ ಬಹುಮತಕ್ಕೆ ಬೆಂಬಲದ ಅಗತ್ಯವಿದ್ದು ಕಾಂಗ್ರೆಸ್ ಬೆಂಬಲ ನೀಡುವುದೇ ಎಂದು ಕೇಳಿದಾಗ, ನಮ್ಮ ಪಕ್ಷ ಏನು ತೀರ್ಮಾನ ಮಾಡುತ್ತದೋ ಗೊತ್ತಿಲ್ಲ. ನಾನು ಅದರ ಬಗ್ಗೆ ಪ್ರತಿಕ್ರಿಯೆ ನೀಡುವುದಿಲ್ಲ. ಬಿಜೆಪಿ ಹಾಗೂ ಅದರ ಮೈತ್ರಿಯನ್ನು ದೂರವಿಡುವುದು ನಮ್ಮ ಗುರಿ ಎಂದರು.

ನೀವು ಪ್ರಚಾರ ಮಾಡಿದ ಕಡೆ ಸೋಲಾಗಿದೆ ಎಂಬ ಬಿಜೆಪಿ ನಾಯಕರ ಟೀಕೆ ಬಗ್ಗೆ ಕೇಳಿದಾಗ, ಬಿಜೆಪಿ ನಾಯಕರು ಬಾಗಲಕೋಟೆ, ದಾವಣಗೆರೆ ದಕ್ಷಿಣಕ್ಕೆ ಹೋಗಿದ್ದರು. ಅಲ್ಲಿ ಯಾಕೆ ಅವರು ಗೆಲ್ಲಲಿಲ್ಲ. ನೀವು ಅವರನ್ನು ತೋರಿಸುತ್ತೀರಿ ಎಂಬ ಕಾರಣಕ್ಕೆ ಅವರು ಏನೋ ಟೀಕೆ ಮಾಡಿ ಮಾತನಾಡುತ್ತಾರೆ ಎಂದು ತಿಳಿಸಿದರು.

# ಸಿಜೇರಿಯನ್ ಹೆರಿಗೆಯ ಪ್ರಮಾಣ ಹೆಚ್ಚಳ ಆತಂಕಕಾರಿ: ಡಾ. ನಿಶ್ಚಲನಂದನಾಥ ಸ್ವಾಮೀಜಿ




**ಕೆ.ಎಂ.ದೊಡ್ಡಿ:** ಪ್ರಸ್ತುತ ದಿನಗಳಲ್ಲಿ ಶೇ. 80ರಷ್ಟು ಗರ್ಭಿಣಿಯರು ಸಿಜೇರಿಯನ್ (ಶಸ್ತ್ರಚಿಕಿತ್ಸೆ) ಮೂಲಕವೇ ಮಕ್ಕಳನ್ನು ಪಡೆಯುತಿದ್ದು ಆರೋಗ್ಯ ಮತ್ತು ಆರ್ಥಿಕ ಹಿನ್ನಡೆಗೆ ಕಾರಣವಾಗುತ್ತಿದೆ ಎಂದು ವಿಶ್ವ ಒಕ್ಕಲಿಗರ ಮಹಾ ಸಂಸ್ಥಾನ ಮಠದ ಪೀಠಾಧ್ಯಕ್ಷ ಡಾ. ನಿಶ್ಚಲಾನಂದನಾಥ ಸ್ವಾಮೀಜಿ ಆತಂಕ ವ್ಯಕ್ತಪಡಿಸಿದರು.

ಇಲ್ಲಿನ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಸ್ಫೂರ್ತಿ ಲಯನ್ಸ್ ಸಂಸ್ಥೆ ವತಿಯಿಂದ ಹಸಿವು-ಆರೈಕೆ ಮತ್ತು ಆರೋಗ್ಯ ಕಿಟ್ ವಿತರಣಾ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಅವರು, ಸಾಮಾನ್ಯ ಹೆರಿಗೆಗಳು ಕಡಿಮೆಯಾಗುತಿದ್ದು ಸಿಜೇರಿಯನ್ (ಶಸ್ತ್ರಚಿಕಿತ್ಸೆ) ಹೆರಿಗೆಗಳು ಹೆಚ್ಚಾಗುತ್ತಿರುವುದು ಉತ್ತಮ ಬೆಳವಣಿಗೆ ಅಲ್ಲ ಎಂದರು.

ಗರ್ಭಿಣಿ ಮತ್ತು ಬಾಣಂತಿಯರು ಸ್ಥಳೀಯವಾಗಿ ದೊರೆಯುವ ಹಾಲು, ಮೊಟ್ಟೆ, ನುಗ್ಗೆಸೊಪ್ಪು, ಸೀಬೆ, ಪರಂಗಿ ಹಣ್ಣು ಸೇರಿದಂತೆ ಇತರೆ ಹಣ್ಣು ಮತ್ತು ತರಕಾರಿಗಳನ್ನು ಹೆಚ್ಚು ಸೇವಿಸಿ ಸದೃಢ ಆರೋಗ್ಯ ವೃದ್ಧಿಗೊಳಿಸಿಕೊಳ್ಳಬೇಕು. ಆ ಮೂಲಕ ಸಹಜ ಹೆರಿಗೆಗೊಳಪಡಲು ಪ್ರಯತ್ನಿಸಬೇಕೆಂದು ಸಲಹೆ ನೀಡಿದರು.

ಹೆರಿಗೆ ಸಮಯದಲ್ಲಿ ಉಂಟಾಗುವ ನೋವು ಸಹಜವಾಗಿದ್ದು, ಗರ್ಭಿಣಿಯರು ತಾಳ್ಮೆ ವಹಿಸಬೇಕು. ಮಗುವಿನ ಜನನದ ನಂತರ ತಮ್ಮ ನೋವು ಮರೆಯಾಗಿ ಮೂಡುವ ಸಂತಸ ಶಾಶ್ವತವಾಗಿರುತ್ತದೆ ಎಂಬುದನ್ನು ಹಿರಿಯ ವೈದ್ಯ ಡಾ. ಟಿ.ಎಚ್. ಆಂಜನಪ್ಪ ಅವರ ಕಿವಿ ಮಾತನ್ನು ಪೋಷಕರು ಮತ್ತು ಗರ್ಭಿಣಿಯರು ಪಾಲಿಸಬೇಕು. ನಮ್ಮ ಪೂರ್ವಾಶ್ರಮದ ಹೆತ್ತಮ್ಮನಿಗೆ ಹದಿನಾಲ್ಕು ಮಕ್ಕಳು. ಅವರು 89 ವರ್ಷದವರೆಗೂ ಸದೃಢ ಆರೋಗ್ಯವಂತರಾಗಿ ಬಾಳ್ವೆ ನಡೆಸಿದ್ದರು. ಆದರೆ, ಈ ತಲೆಮಾರಿನ ಹೆಣ್ಣು ಮಕ್ಕಳು ಹೆಚ್ಚು ಅನಾರೋಗ್ಯಕ್ಕೀಡಾಗುತ್ತಿರುವುದು ವಿಷಾದಕರ ಸಂಗತಿ ಎಂದರು.

ಹುಟ್ಟುಹಬ್ಬದ ಹೆಸರಿನಲ್ಲಿ ಇಂತಹ ಮೌಲ್ಯಯುತ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವುದು ಹಾಗೂ ಆಚರಿಸುವುದು ಅತ್ಯುತ್ತಮ ಕೆಲಸ ಎಂದು ಶ್ಲಾಘಿಸಿದ ಶ್ರೀಗಳು ಸ್ಫೂರ್ತಿ ಲಯನ್ಸ್ ಸಂಸ್ಥೆಯ ದಾಸೋಹ ಕಾರ್ಯಕ್ರಮ ನಿರಂತರವಾಗಿರಲಿ ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ ಡಾ. ಟಿ.ಎಚ್. ಆಂಜನಪ್ಪ ಮಾತನಾಡಿ, ಮನುಷ್ಯ ಇಂದಿನ ಆಹಾರ ಪದ್ಧತಿಯಿಂದ ಆಯಸ್ಸು ಕಡಿಮೆ ಮಾಡಿ ಕೊಳ್ಳುತ್ತಿದ್ದಾರೆ ಮನುಷ್ಯನ ಆಯಸ್ಸು ಬರೋಬರಿ 120 ವರ್ಷ ಆಗಿದ್ದು ಉತ್ತಮ ಆರೋಗ್ಯ ಕಾಪಾಡಿ ಕೊಳ್ಳು ಹಣ್ಣು ತರಕಾರಿ ಹೆಚ್ಚು ಉಪಯೋಗಿಸಿ ಎಂದರು.

ಕಾರ್ಯಕ್ರಮಕ್ಕೂ ಮೊದಲು ಯಲಾದಹಳ್ಳಿಯ ಮಳವಳ್ಳಿ ದೇವೇಗೌಡರ ಎತ್ತಿನ ಬಂಡಿ ಗಾಡಿಯಲ್ಲಿ ಮದ್ದೂರು-ಮಳವಳ್ಳಿ ಮುಖ್ಯ ರಸ್ತೆಯಲ್ಲಿ ಡಾ. ನಿಶ್ಚಲಾನಂದನಾಥ ಸ್ವಾಮೀಜಿ ಮತ್ತು ಗಣ್ಯರನ್ನು ಜನಪದ ಕಲಾತಂಡದ ಪೂಜಾ ಕುಣಿತದೊಂದಿಗೆ ಮೆರವಣಿಗೆ ಮೂಲಕ ವೇದಿಕೆಗೆ ಕರೆತರಲಾಯಿತು.

ಈ ಸಂದರ್ಭದಲ್ಲಿ ಜನರಕ್ಷಾ ಗ್ರಾಮೀಣಾಭಿವೃದ್ಧಿ ಟ್ರಸ್ಟ್ ಅಧ್ಯಕ್ಷ ಕೃಷ್ಣೇಗೌಡ, ಜಿಲ್ಲಾ ರಾಜ್ಯಪಾಲ ಕೆ.ಎಲ್. ರಾಜಶೇಖರ, ಕೆಂಗಲ್‌ಗೌಡ, ಸೋಮೇಗೌಡ, ಸಿದ್ದೇಗೌಡ

ವೇದಿಕೆಯಲ್ಲಿ ಲಯನ್ಸ್ ಸಂಸ್ಥೆಯ ಜಿಲ್ಲಾ ರಾಜ್ಯಪಾಲ ಕೆ.ಎಲ್.ರಾಜಶೇಖರ್, ಜಿಲ್ಲಾ 2ನೇ ಉಪರಾಜ್ಯಪಾಲ ಸಿದ್ದೇಗೌಡ, ಪ್ರಾಂತೀಯ ಅಧ್ಯಕ್ಷ ಟಿ.ಆರ್.ಸೋಮೇಗೌಡ, ಸ್ಫೂರ್ತಿ ಲಯನ್ಸ್ ಸಂಸ್ಥೆ ಅಧ್ಯಕ್ಷ ಕೆ.ಎಲ್.ಶಿವರಾಮು ಸಂಸ್ಥೆಯ ಕಾರ್ಯದರ್ಶಿ ಬಿ.ಎಸ್.ಬೋರೇಗೌಡ, ಪಟ್ಟರಾಮರಾಜೇ ಅರಸು, ಡಿ.ಎ.ಕೆರೆ ಚಂದ್ರಶೇಖರ್, ಸದಸ್ಯರುಗಳಾದ ಅಣ್ಣೂರು ಸಂದೀಪ್, ವಕ್ರತುಂಡ ವೆಂಕಟೇಶ್, ಚೆನ್ನಶೆಟ್ಟಿ, ಬೋರೇಗೌಡ, ದೇವರಾಜು, ರಘುವೆಂಕಟೇಗೌಡ, ಬಿದರಹಳ್ಳಿ ಹನುಮಯ್ಯ, ಪಿಡಿಒ ಸುಧಾ, ಲೀಲಾರಾಮೇಗೌಡ ಸೇರಿದಂತೆ ಮತ್ತಿತರಿದ್ದರು.

# ಕೂಡ್ಲೂರು ವಿಹಾರದಲ್ಲಿ ಬುದ್ಧ ಪೂರ್ಣಿಮಾ ಮಹೋತ್ಸವ




**ತಿ.ನರಸೀಪುರ:** ತಥಾಗತ ಗೌತಮ ಬುದ್ಧನ ಧಮ್ಮವನ್ನು ಒಪ್ಪಿಕೊಂಡು, ಪಂಚಶೀಲಗಳನ್ನು ಪಾಲಿಸುತ್ತಾ, ಜೀವನದ ಗುರಿಯನ್ನು ಸಾಧಿಸಲು ಸನ್ಮಾರ್ಗದಲ್ಲಿ ಪ್ರತಿಯೊಬ್ಬರೂ ನಡೆಯಬೇಕು ಎಂದು ನಳಂದ ಬುದ್ಧ ವಿಹಾರದ ಪ್ರಧಾನ ಬಿಕ್ಕು ಬೋಧಿರತ್ನ ಭಂತೆಜೀ ಹೇಳಿದರು.

ತಾಲೂಕಿನ ಕೂಡ್ಲೂರು ಗ್ರಾಮದ ಬಳಿಯಿರುವ ನಳಂದ ಬುದ್ಧ ವಿಹಾರದ ಆವರಣದಲ್ಲಿ ಗೌತಮ ಬುದ್ಧ ಎಜುಕೇಷನಲ್ ಅಂಡ್ ಕಲ್ಚರಲ್ ಟ್ರಸ್ಟ್ ನ ವತಿಯಿಂದ ಆಯೋಜಸಿದ್ದ 2670ನೇ ಬುದ್ಧ ಪೂರ್ಣಿಮಾ ಮಹೋತ್ಸವ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಅವರು ನಾವು ಅಂಬೇಡ್ಕರ್ ವಾದಿ, ಬೌದ್ಧ ಬಿಕ್ಕುವಾಗಿ ಹೇಳುವುದೇನೆಂದರೆ ಯಾರಿಗೆ ಅರಿವಿನ ಪ್ರಜ್ಞೆ ಜಾಗೃತಿ ಬರುತ್ತದೊ,ಆ ಜಾಗೃತಿ ಮನಸ್ಸುಗಳು ದಮ್ಮದ ಕಡೆಗೆ ಮನಸ್ಸು ಮಾಡುತ್ತವೆ ಎಂದರು.

ಮೊದಲು ಮಾನಸಿಕ ಗುಲಾಮಗಿರಿಯಿಂದ ಹೊರಬರಬೇಕು. ಭಾರತ ದೇಶದ ಪ್ರತಿಯೊಬ್ಬ ಪ್ರಜೆಯು ಮಾನಸಿಕ ಗುಲಾಮಗಿರಿಯಿಂದ ದೂರವಿರಲು ಡಾ.ಬಿ.ಆರ್. ಅಂಬೇಡ್ಕರ್ ರವರು ಸಂವಿಧಾನವನ್ನು ನೀಡಿದ್ದಾರೆ.

ಸಂವಿಧಾನ ಬದ್ಧವಾದ ನಮ್ಮ ಹಕ್ಕುಗಳಿಗಾಗಿ ಹೊರಟ ಮಾಡಲು ದಲಿತ ಎಂಬ ಪದದಿಂದ ತದನಂತರ ಬಹುಜನರು ನಂತರ ಬುದ್ಧ ಧರ್ಮದಿಂದ ಪರಿವರ್ತನೆ ಹೊಂದಬೇಕು. ನಾವೆಲ್ಲರೂ ಬುದ್ಧ ಧರ್ಮದ ಮರದ ಕಾಂಡಗಳು ಬೌದ್ಧ ಧರ್ಮದ ಫಲ ಪುಷ್ಪಗಳು ಎಂದರು.

ಈ ದೇಶದ ನೆಲೆಯಲ್ಲಿ ಹುಟ್ಟಿದ ಬೌದ್ಧ ಧರ್ಮವನ್ನು ಚೀನಾ ಜಪಾನ್ ಚೈನಾ ಅಮೆರಿಕ ಶ್ರೀಲಂಕಾ ಹಾಗೂ ಪ್ರಪಂಚದ ಹಲವಾರು ರಾಷ್ಟ್ರಗಳು ಈ ಧರ್ಮದ ಪಂಚಶೀಲ ತತ್ವಗಳು ಸಮಾನತೆಗಳು ಒಪ್ಪಿಕೊಂಡಿದ್ದಾರೆ. ಇನ್ನು ಮುಂದಾದರೂ ಮೌಢ್ಯ ಬಿಟ್ಟು ಬುದ್ಧ ಧರ್ಮದ ಕಡೆ ನಡೆಯೋಣ ನಮ್ಮ ಮಕ್ಕಳ ಭವಿಷ್ಯವನ್ನು ಸದೃಢರಾಗಿ ಮಾಡೋಣ ಎಂದು ಬೋಧಿರತ್ನ ಭಂತೆಜೀ ಹೇಳಿದರು.

ಬೌದ್ಧ ಮಹಾ ಉಪಾಸಕ ಜಂಬೂ ದ್ವಿಪದ ನಾಗಸಿದ್ದಾರ್ಥ. ಮಾಜಿ ಜಿಲ್ಲಾ ಪಂಚಾಯತಿ ಅಧ್ಯಕ್ಷ ಎಸ್‌ಎನ್ ಸಿದ್ದಾರ್ಥ, ಬಿಎಸ್‌ಪಿ ಮಹಿಳಾ ಘಟಕದ ಶಶಿಕಲಾ ಸುರೇಶ್, ಕೆಂಚಪ್ಪ ಅವರು ಗೌತಮ ಬುದ್ಧ ಮತ್ತು ಅಂಬೇಡ್ಕರ್ ಅವರನ್ನು ಕುರಿತು ಮಾತಾಡಿದರು. ಕಾರ್ಯಕ್ರಮದಲ್ಲಿ ಟ್ರಸ್ಟಿಗಳಾದ ಬಿ.ಆರ್.ಪುಟ್ಟಸ್ವಾಮಿ, ಮಹದೇವಯ್ಯ (ಸೀನಪ್ಪ ), ಎನ್.ಲಿಂಗಪ್ಪಾಜಿ, ಹಾಗೂ ಜಗದೀಶ್, ನರಸಿಂಹಯ್ಯ, ನಾರಾಯಣ ಮೂರ್ತಿ, ದಂಡಿಕೆರೆ ಬಸವಣ್ಣ, ಬಿ ಮಹದೇವಸ್ವಾಮಿ, ಶಿವಮಲ್ಲಯ್ಯ, ಜಯಪ್ಪ, ನಾಗರಾಜು, ಲಕ್ಷ್ಮಣ ಶಿವಕುಮಾರ್, ನಾಗರಾಜ್ ಮೂರ್ತಿ, ರಾಜಣ್ಣ ಸೇರಿದಂತೆ ಇತರರು ಇದ್ದರು.

# ಮಫ್ತಿಯಲ್ಲಿದ್ದ ಮುಖ್ಯಪೇದೆ ಮೇಲೆ ಹಲ್ಲೆ




**ಮೈಸೂರು:** ಮದ್ಯ ತರಲು ಬಾರ್ ಗೆ ಹೋದ ವೇಳೆ ಮಫ್ತಿಯಲ್ಲಿದ್ದ ಮುಖ್ಯಪೇದೆ ಹಲ್ಲೆ ನಡೆಸಿದ ಪರಿಣಾಮ ವ್ಯಕ್ತಿಯೊಬ್ಬರು ಕಣ್ಣಿನ ದೃಷ್ಟಿ ಕಳೆದುಕೊಂಡ ಘಟನೆ ಇತ್ತೀಚೆಗೆ ಮೈಸೂರು ಜಿಲ್ಲೆ ಕೆ.ಆರ್ ನಗರದಲ್ಲಿ ನಡೆದಿದ್ದು ಆದರೆ ಪೊಲೀಸರು ಪ್ರಕರಣ ದಾಖಲಿಸಲು ವಿಳಂಬ ಧೋರಣೆ ತಾಳಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ.ಮೈಸೂರು ತಾಲೂಕಿನ ಬೆಳವಾಡಿ ಸಮೀಪದ ಬಸವನಹಳ್ಳಿ ಗ್ರಾಮದ ಸ್ವಾಮಿ, ಆರ್. ಎಂಬವವರೇ ಕಣ್ಣಿನ ದೃಷ್ಟಿ ಕಳೆದುಕೊಂಡವರು. ಪರಶುರಾಮ್ ಎಂಬುವವರು ಹಲ್ಲೆ ನಡೆಸಿರುವ ಮುಖ್ಯಪೇದೆ.ಸ್ವಾಮಿ ಪಟ್ಟಣದ ಮೈಸೂರು-ಹಾಸನ ರಸ್ತೆಯಲ್ಲಿರುವ ಹರ್ಷಬಾರ್ ನಲ್ಲಿ ಸ್ನೇಹಿತನ ಮನೆಯ ಹಬ್ಬಕ್ಕೆ ಡ್ರಿಂಕ್ಸ್ ಖರೀದಿಸುವ ವೇಳೆ ಮಾತಿನ ಚಕಮಕಿ ನಡೆದು ಸಣ್ಣಪುಟ್ಟ ಗಲಾಟೆಯಾಗಿತ್ತು. ಈ ವೇಳೆ ಹಲ್ಲೆಯಾಗಿದೆ ಎನ್ನಲಾಗಿದೆ.

## ಮಾನಸಿಕ ಖಿನ್ನತೆ: ದೇವರಾಜ ಠಾಣೆ ಮುಖ್ಯಪೇದೆ ಆತ್ಮಹತ್ಯೆ



**ಮೈಸೂರು:** ಮಾನಸಿಕ ಖಿನ್ನತೆ ಹಿನ್ನಲೆ ದೇವರಾಜ ಪೊಲೀಸ್ ಠಾಣೆ ಮುಖ್ಯಪೇದೆ ನೇಣು ಬಿಗಿದು ಆತ್ಮಹತ್ಯೆಗೆ ಶರಣಾದ ಘಟನೆ ಮೈಸೂರಿನ ಪೊಲೀಸ್ ಲೇಔಟ್ ನಲ್ಲಿ ನಡೆದಿದೆ. ಶ್ಯಾಂಪ್ರಸಾದ್ (46) ಮೃತ ದುರ್ದೈವಿ. ಪೊಲೀಸ್ ಲೇಔಟ್ ನಲ್ಲಿ ಸ್ವಂತ ಮನೆ ಹೊಂದಿರುವ ಶ್ಯಾಂಪ್ರಸಾದ್ ದೇವರಾಜ ಪೊಲೀಸ್ ಠಾಣೆಯಲ್ಲಿ ಕಳೆದ 5 ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿದ್ದರು. ಮನೆಯಲ್ಲಿ ಯಾರೂ ಇಲ್ಲದ ವೇಳೆ ನೇಣಿಗೆ ಶರಣಾಗಿದ್ದಾರೆ.ಬೆಳಿಗ್ಗೆ ಶುಭೋದಯ ಕೆಲಸಕ್ಕೆ ಶ್ಯಾಂಪ್ರಸಾದ್ ರನ್ನ ನಿಯೋಜಿಸಲಾಗಿತ್ತು. ಕರ್ತವ್ಯಕ್ಕೆ ಹಾಜರಾಗದ ಹಿನ್ನಲೆ ಪರಿಶೀಲನೆ ನಡೆಸಿದಾಗ ಆತ್ಮಹತ್ಯೆಗೆ ಶರಣಾಗಿರುವ ಮಾಹಿತಿ ತಿಳಿದು ಬಂದಿದೆ. ನಜರಬಾದ್ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಮುಂದಿನ ಕ್ರಮ ಕೈಗೊಂಡಿದ್ದಾರೆ.

# ಮಂತ್ರಮಾಂಗಲ್ಯ ಮದುವೆಯಾದ ತೇಜಸ್ವಿ ಸಂಬಂಧಿ ತನ್ಮಯ್- ಸಿಮ್ರಾನ



**ಮೈಸೂರು:** ಜಾತ್ಯತೀತ ಒಲವಿನ ವಿವಾಹ ವೇದಿಕೆ ಮಾನವ ಮಂಟಪದ ಆಶ್ರದಲ್ಲಿ ಆರ್.ತನ್ಮಯ್ ಹಾಗೂ ಎಚ್.ಆರ್.ಸಿಮ್ರಾನ ಕುವೆಂಪು ಮಂತ್ರ ಮಾಂಗಲ್ಯದ ವಿಧಾನದಂತೆ ಮದುವೆಯಾದರು.

ಮೈಸೂರು ನಗರದ ನಿತ್ಯೋತ್ಸವ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಿದ್ದ ಮಂತ್ರ ಮಾಂಗಲ್ಯ ಸಮಾರಂಭದಲ್ಲಿ

ಸಾಹಿತಿ ಪೂರ್ಣಚಂದ್ರ ತೇಜಸ್ವಿಯವರ ಪತ್ನಿ ರಾಜೇಶ್ವರಿ ಅವರ ಅಕ್ಕನ ಮಗನಾದ ಮೂಡಿಗೆರೆಯ ಕೃಷಿಕ ಹಾಗೂ ಪುಸ್ತಕ ಪ್ರಕಾಶನದಲ್ಲಿ ಒಬ್ಬರಾದ ಆರ್.ರಾಘವೇಂದ್ರ ಮತ್ತು ಎಂ.ಎನ್.ವಿನತ ಅವರ ಪುತ್ರ ತನ್ಮಯ್ ಹಾಗೂ ನಗರದ ಡಾ.ಶಶಿರೇಖಾ ಮಾಚಾನಿ ಮತ್ತು ಡಾ.ಎಚ್.ಟಿ.ರವೀಂದ್ರ ಅವರ ಪುತ್ರಿ ಸಿಮ್ರಾನ ಮದುವೆಯಾದರು. ಇವರಿಬ್ಬರೂ ಸಾಫ್ಟ್‌ವೇರ್ ಎಂಜಿನಿಯರುಗಳು. ಮಾನವ ಮಂಟಪದ ಡಾ.ಕೆ.ಕಾಳಚನ್ನೇಗೌಡ ವಧು ವರರಿಗೆ ವಿವಾಹದ ಪ್ರಮಾಣ ವಚನ ಬೋಧಿಸಿದರು. ಕುವೆಂಪು ಅವರ ವಿವಾಹ ಸಂಹಿತೆಯನ್ನು ಉಗ್ರನರಸಿಂಹೇಗೌಡ ಓದಿದರು. ಧನಂಜಯ ಎಲಿಯೂರು ಕಾರ್ಯಕ್ರಮ ನಿರ್ವಹಿಸಿದರು.

ಕುವೆಂಪು ಅವರ ಅಳಿಯ ಡಾ.ಚಿದಾನಂದಗೌಡ, ಮಗಳು ತಾರಿಣಿ, ಪುಸ್ತಕ ಪ್ರಕಾಶನದ ನಿವೃತ್ತ ಪ್ರಾಧ್ಯಾಪಕರಾದ ಶ್ರೀರಾಮ್ ಹಾಗೂ ಲೇಖಕಿ ಪದ್ಮಾ ಶ್ರೀರಾಮ್, ಕವಯತ್ರಿ ಲತಾ ಮೈಸೂರು, ಉಪನ್ಯಾಸಕಿ ಸ್ನೇಹಾ ಓಂಕಾರ್, ಪೂರ್ಣಚಂದ್ರ ತೇಜಸ್ವಿಯವರ ಪುತ್ರಿ ಸುಸ್ಮಿತಾ ಇತರರು ಭಾಗವಹಿಸಿದ್ದರು.

# ಕುಟುಂಬಕ್ಕೆ ಸಮಯ ನೀಡಲು ವಕೀಲರಿಗೆ ಸಲಹೆ




**ಪಿರಿಯಾಪಟ್ಟಣ:** ವಕೀಲರು ತಮ್ಮ ಕುಟುಂಬಕ್ಕೆ ಹೆಚ್ಚು ಸಮಯ ಮೀಸಲಿಡಬೇಕು ಹಾಗೂ ತಂದೆ-ತಾಯಿಯನ್ನು ನಿರ್ಲಕ್ಷ್ಯ ಮಾಡಬಾರದು ಎಂದು ಪ್ರಧಾನ ಸಿವಿಲ್ ನ್ಯಾಯಾಧೀಶ ಎಂ.ಆರ್. ಯೋಗೇಶ್ ಸಲಹೆ ನೀಡಿದರು.

ಪಟ್ಟಣದ ವಕೀಲರ ಭವನದಲ್ಲಿ ಶನಿವಾರ ಆಯೋಜಿಸಿದ್ದ ಬೀಳ್ಕೊಡುಗೆ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು. ನಾನು ನ್ಯಾಯಾಧೀಶರ ವೃತ್ತಿಯನ್ನು ತೊರೆಯಬೇಕೆಂದು ನಿರ್ಧರಿಸಿದ್ದೆ. ಆದರೆ ಪಿರಿಯಾಪಟ್ಟಣಕ್ಕೆ ಬಂದ ನಂತರ ಬದಲಾಗಿದ ಪರಿಸ್ಥಿತಿ ಹಾಗೂ ಮನಸ್ಥಿತಿಯಿಂದ ಇಲ್ಲಿ ವೃತ್ತಿಯನ್ನು ಮುಂದುವರಿಸಿದ್ದೇನೆ ಎಂದು ಹೇಳಿದರು. ಯಾರ ವಿರುದ್ಧವೂ ವೈಯಕ್ತಿಕ ದ್ವೇಷದಿಂದ ವರ್ತಿಸದೆ, ಪರಿಸ್ಥಿತಿಗೆ ಅನುಗುಣವಾಗಿ ನಡೆದುಕೊಂಡಿದ್ದೇನೆ. ಇಲ್ಲಿನ ವಕೀಲರು ಉತ್ತಮ ಸಹಕಾರ ನೀಡಿದ್ದಾರೆ ಎಂದು ಅವರು ತಿಳಿಸಿದರು.

ವರ್ಗಾವಣೆಗೊಂಡು ಸನ್ಮಾನ ಸ್ವೀಕರಿಸಿದ ಹೆಚ್ಚುವರಿ ಸಿವಿಲ್ ನ್ಯಾಯಾಧೀಶೆ ಜೆ. ಶ್ವೇತ ಮಾತನಾಡಿ, ನ್ಯಾಯಾಲಯದಲ್ಲಿ ಸೌಜನ್ಯದಿಂದ ವರ್ತನೆ ಅಗತ್ಯವಾಗಿದೆ. ಕೆಲವೊಮ್ಮೆ ಕಠಿಣವಾಗಿ ನಡೆದುಕೊಂಡಿದ್ದರೂ ಇಲ್ಲಿನ ವಕೀಲರಿಂದ ಸಾಕಷ್ಟು ಕಲಿತಿದ್ದೇನೆ ಎಂದು ಹೇಳಿದರು.

ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶ ಎಂ. ರಾಜು ಮಾತನಾಡಿ, ನ್ಯಾಯಾಲಯದ ಕಲಾಪಗಳಲ್ಲಿ ಸಕ್ರಿಯವಾಗಿ ಭಾಗವಹಿಸುವ ವಕೀಲರ ಅಭಿಪ್ರಾಯ ಮತ್ತು ಸಲಹೆಗಳನ್ನು ಪರಿಗಣಿಸಿ ನ್ಯಾಯಾಧೀಶರು ತಮ್ಮ ಕಾರ್ಯವೈಖರಿಯನ್ನು ಸುಧಾರಿಸಿಕೊಳ್ಳಬೇಕು ಎಂದು ಅಭಿಪ್ರಾಯಪಟ್ಟರು. ನ್ಯಾಯಾಧೀಶರ ಕರ್ತವ್ಯದಲ್ಲಿ ನಿಷ್ಠುರತೆ ಹಾಗೂ ದ್ವಂದ್ವ ಪರಿಸ್ಥಿತಿಗಳ ನಿರ್ವಹಣೆ ಸವಾಲಿನ ಕೆಲಸವಾಗಿದ್ದು, ಅದನ್ನು ಎಂ.ಆರ್. ಯೋಗೇಶ್ ಮತ್ತು ಜೆ. ಶ್ವೇತ ಸಮರ್ಥವಾಗಿ ನಿಭಾಯಿಸಿದ್ದಾರೆ ಎಂದು ಪ್ರಶಂಸಿಸಿದರು.

ವಕೀಲರ ಸಂಘದ ಅಧ್ಯಕ್ಷ ಧನಪಾಲ್, ಕಾರ್ಯದರ್ಶಿ ಶಂಕರ್, ಖಜಾಂಚಿ ಹರೀಶ್ ಸೇರಿದಂತೆ ಹಿರಿಯ ಹಾಗೂ ಕಿರಿಯ ವಕೀಲರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಬಿಜೆಪಿ ಗೆಲುವು: ಮೈಸೂರಲ್ಲಿ ಸಂಭ್ರಮಾಚರಣೆ



**ಮೈಸೂರು:** ಪಶ್ಚಿಮ ಬಂಗಾಳ ಸೇರಿ ಮೂರು ರಾಜ್ಯಗಳಲ್ಲಿ ಬಿಜೆಪಿ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು.

ಈ ವೇಳೆ ಶಾಸಕ ಟಿ.ಎಸ್.ಶ್ರೀವತ್ಸ ಮಾತನಾಡಿ, ಪಶ್ಚಿಮ ಬಂಗಾಳದಲ್ಲಿ ಇದೇ ಮೊದಲ ಬಾರಿ ಪೂರ್ಣ ಬಹುಮತದೊಂದಿಗೆ ಬಿಜೆಪಿ ಅಧಿಕಾರಕ್ಕೆ ಬರುತ್ತಿದೆ. ಮಮತಾ ಬ್ಯಾನರ್ಜಿಯವರ 15 ವರ್ಷಗಳ ದುರಾಡಳಿತ ಅಂತ್ಯಗೊಂಡಿದೆ. ಸಂವಿಧಾನ ವಿರೋಧಿಯಾಗಿ ನಡೆದುಕೊಂಡ ಮಮತಾ ಬ್ಯಾನರ್ಜಿಗೆ ಮತದಾರರು ತಕ್ಕ ಪಾಠ ಕಲಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಚಿವ ಅಮಿತ್ ಶಾ, ಬಿಜೆಪಿ ರಾಷ್ಟ್ರಾಧ್ಯಕ್ಷ ನಿತಿನ್ ನಬಿನ್ ಜೊತೆಗೆ ಲಕ್ಷಾಂತರ ಕಾರ್ಯಕರ್ತರು ಪಕ್ಷದ ಗೆಲುವಿಗೆ ಶ್ರಮಿಸಿದ್ದಾರೆ. ಅಸ್ಸಾಂ ಮತ್ತು ಪುದುಚೇರಿಯಲ್ಲೂ ಬಿಜೆಪಿ ಅಭೂತಪೂರ್ವ ಗೆಲುವು ಸಾಧಿಸಿದೆ. ಮಮತಾ ಬ್ಯಾನರ್ಜಿ ಮಹಿಳಾ ಮೀಸಲಾತಿ ವಿರೋಧಿಸಿದ್ದ ಫಲ ಇದಾಗಿದೆ. ತನಿಖಾಧಿಕಾರಿ, ಚುನಾವಣಾಧಿಕಾರಿ ಹಾಗೂ ನ್ಯಾಯಾಮೂರ್ತಿಗಳಿಗೂ ಬೆಲೆ ನೀಡದೇ ಏಕಮುಖ ಧೋರಣೆ ತೋರಿದ್ದಕ್ಕೆ ಜನತೆಯೇ ಅವರಿಗೆ ತಕ್ಕಪಾಠ ಕಲಿಸಿದ್ದಾರೆಂದರು.

ಪಶ್ಚಿಮ ಬಂಗಾಳದಂತೆ ಕರ್ನಾಟದಲ್ಲೂ ಕಾಂಗ್ರೆಸ್ ದುರಾಡಳಿತ ನಡೆಸುತ್ತಿದೆ. ಮುಂಬರುವ ಕರ್ನಾಟಕದ ಚುನಾವಣೆಯಲ್ಲೂ ಪಶ್ಚಿಮ ಬಂಗಾಳದ ಮಾದರಿಯಲ್ಲೇ ಫಲಿತಾಂಶ ಬರಲಿದೆ. ರಾಜ್ಯದಲ್ಲೂ ದುರಾಡಳಿತ ಮಿತಿಮೀರಿದೆ. ಎರಡು ಕ್ಷೇತ್ರಗಳ ಉಪಚುನಾವಣೆಯಲ್ಲಿ ಅನುಕಂಪ ಕೆಲಸ ಮಾಡಿದೆ. ಉಪ ಚುನಾವಣೆಯಲ್ಲಿ ಮತದಾರರು ಆಡಳಿತಾರೂಢ ಪಕ್ಷಕ್ಕೆ ಮತಹಾಕುವುದು ವಾಡಿಕೆ. ನಾವು ಅಧಿಕಾರದಲ್ಲಿದ್ದಾಗ ನಡೆದ ಉಪ ಚುನಾವಣೆಯಲ್ಲಿ ಬಿಜೆಪಿ ಗೆಲುವು ಸಾಧಿಸಿತ್ತು. ಎರಡು ಕ್ಷೇತ್ರಗಳ ಉಪ ಚುನಾವಣೆಯಲ್ಲಿ ಅದು ಮರುಕಳಿಸಿದೆ. ಮುಂಬರುವ ಸಾರ್ವತ್ರಿಕ ಚುನಾವಣೆಯಲ್ಲಿ ಆಡಳಿತಾರೂಢ ಕಾಂಗ್ರೆಸ್ ಪಕ್ಷ ಹೀನಾಯವಾಗಿ ಸೋಲು ಕಾಣಲಿದೆ ಎಂದರು.

ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ ಮಾತನಾಡಿ, ನಿರೀಕ್ಷೆಗೂ ಮೀರಿದ ಗೆಲುವು ಇದಾಗಿದೆ. ಇದೊಂದು ಐತಿಹಾಸಿಕ ರಾಜಕೀಯ ಬದಲಾವಣೆಯಾಗಿದ್ದು, ಮತದಾರರ ಅಭಿಪ್ರಾಯ ಬಿಜೆಪಿ ಪರವಾಗಿ ಎಂಬ ಫಲಿತಾಂಶ ಬಂದಿದೆ. ರಾಜ್ಯ ರಾಜಕೀಯದಲ್ಲಿಯೂ ಮುಂದಿನ ದಿನಗಳಲ್ಲಿ ಬದಲಾವಣೆಗಳಾಗಲು ಇದು ಸಂಕೇತವಾಗಿದೆ. ಹಿಂದೂಗಳು, ಮಹಿಳೆಯರಿಗೆ ತೊಂದರೆ ನೀಡುತ್ತಿದ್ದ ಮಮತಾ ಬ್ಯಾನರ್ಜಿ ದುರಾಡಳಿತ ಅಂತ್ಯವಾಗಿದೆ. 2028ರ ಚುನಾವಣೆಗೆ ಇದು ದಿಕ್ಸೂಚಿಯಾಗಿದೆ. ಪಾಂಡಿಚೇರಿ, ಅಸ್ಸಾಂನಲ್ಲಿಯೂ ಪಕ್ಷ ಅಭೂತಪೂರ್ವ ಗೆಲುವು ಸಾಧಿಸಿರುವುದು ನಮ್ಮೆಲ್ಲರ ರಾಷ್ಟ್ರೀಯ ನಾಯಕರ ಶ್ರಮ ಎಂದರು.

ಬಿಜೆಪಿ ಗ್ರಾಮಾಂತರ ಜಿಲ್ಲಾಧ್ಯಕ್ಷ ಎನ್.ಸುಬ್ಬಣ್ಣ ಮಾತನಾಡಿ, ಮೂರು ರಾಜ್ಯಗಳಲ್ಲಿಯೂ ಬಿಜೆಪಿ ಜಯಭೇರಿ ಭಾರಿಸಿದೆ. ಅದರಲ್ಲೂ ತಮಿಳುನಾಡಿನಲ್ಲಿ ಹಿಂದೂ ವ್ಯವಸ್ಥೆಯನ್ನು ಟೀಕೆ ಮಾಡುತ್ತಿದ್ದ ಸ್ಟಾಲಿನ್ ಸೋಲು ಸ್ವಾಗತಿಸುತ್ತೇವೆ. ಮುಂಬರ ಚುನಾವಣೆಗಳಿಗೆ ಈ ಫಲಿತಾಂಶಗಳು ದಿಕ್ಸೂಚಿಯಾಗಿದೆ ಎಂದು ಹೇಳಿದರು. ಬಿಜೆಪಿ ಗ್ರಾಮಾಂತರ ಮಾಜಿ ಜಿಲ್ಲಾಧ್ಯಕ್ಷೆ ಮಂಗಳಾ ಸೋಮಶೇಖರ್, ವಸ್ತುಪ್ರದರ್ಶನ ಪ್ರಾಧಿಕಾರದ ಮಾಜಿ ಅಧ್ಯಕ್ಷ ಮಿರ್ಲೆ ಶ್ರೀನಿವಾಸ್‌ಗೌಡ, ಮೈಮುಲ್ ನಿರ್ದೇಶಕ ಸದಾನಂದ, ಬಿಜೆಪಿ ವಕ್ತಾರ ಕೆ.ವಸಂತ್‌ಕುಮಾರ್, ಮುಖಂಡರಾದ ಡಾ.ಈ.ಸಿ.ನಿಂಗರಾಜೇಗೌಡ, ಎಂ.ಅಪ್ಪಣ್ಣ, ನಗರವಕ್ತಾರ ಎಂ.ಮೋಹನ್, ಮಹೇಶ್ ರಾಜೇ ಅರಸ್, ಬಿ.ಎಂ.ಸಂತೋಷ್ ಕುಮಾರ್, ಮುಖಂಡರಾದ ಪುನೀತ್‌ಗೌಡ, ದೇವರಾಜ್, ಪ್ರದೀಪಕುಮಾರ್, ಡಿ.ಲೋಹಿತ್, ಶಿವರಾಜ್, ಗಿರಿಗೌಡ ಇನ್ನಿತರರು ಉಪಸ್ಥಿತರಿದ್ದರು.

# ಇಂಜಿನಿಯರಿಂಗ್ ಪಠ್ಯಕ್ರಮಗಳನ್ನು ಮೇಲ್ದರ್ಜೆಗೇರಿಸಲು ಕ್ರಮ: ಸಚಿವ



**ರಾಮನಗರ:** ರಾಜ್ಯದಲ್ಲಿನ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕೈಗಾರಿಕೆಗಳ ಬೇಡಿಕೆ ಹಾಗೂ ಇಂದಿನ ತಂತ್ರಜ್ಞಾನಾಧಾರಿತ ಕೌಶಲ್ಯಗಳಿಗೆ ಅನುಗುಣವಾಗಿ ಪಠ್ಯಕ್ರಮಗಳನ್ನು ಮೇಲ್ದರ್ಜೆಗೇರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಉನ್ನತ ಶಿಕ್ಷಣ ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ.

ಸೋಮವಾರ ರಾಮನಗರದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ನಡೆದ ಮೈಕ್ರೋಸಾಫ್ಟ್ / ಎಸ್‌ಎಪಿ (ಕೃತಕ ಬುದ್ಧಿಮತ್ತೆ ಅತ್ಯುತ್ತಮತೆ ಕೇಂದ್ರ) ಹಾಗೂ ಸೀಮೆನ್ಸ್ ನವೋತ್ಪತ್ತಿ ಕೇಂದ್ರ ಉದ್ಘಾಟನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸೀಮೆನ್ಸ್ ಸಂಸ್ಥೆಯ ವಿಶೇಷ ಅನುದಾನದಲ್ಲಿ ಟೆಟ್ರಾ ಸ್ಪೆಸಿಮನ್ ಯೋಜನೆ ಆರಂಭಿಸಲಾಗಿದ್ದು, ಸಿಎಂಸಿ ಸ್ಪೈರ್ ಫೌಂಡೇಶನ್ ಸೇರಿದಂತೆ ಹಲವು ಸಂಸ್ಥೆಗಳ ಸಹಕಾರದಿಂದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಆಧುನಿಕ ಪ್ರಯೋಗಾಲಯಗಳನ್ನು ಸ್ಥಾಪಿಸಲಾಗಿದೆ. ಈಗಾಗಲೇ ಟೊಯೋಟಾ ಸಂಸ್ಥೆಯ ಸಹಭಾಗಿತ್ವದಲ್ಲಿ ಕೆಲವು ವಿಭಾಗಗಳನ್ನು ಅಭಿವೃದ್ಧಿಪಡಿಸಲಾಗಿದೆ ಎಂದು ಹೇಳಿದರು.

ರಾಜ್ಯದಲ್ಲಿ ಸುಮಾರು 11 ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಿದ್ದು, ಈಗಾಗಲೇ 6 ಕಾಲೇಜುಗಳಲ್ಲಿ ಈ ರೀತಿಯ ಪ್ರಯೋಗಾಲಯಗಳನ್ನು ಸ್ಥಾಪಿಸಲಾಗಿದೆ. ಉಳಿದ 5 ಕಾಲೇಜುಗಳಲ್ಲಿ ಮುಂದಿನ ದಿನಗಳಲ್ಲಿ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಎಸ್‌ಎಪಿ ವತಿಯಿಂದ 'ಕೃತಕ ಬುದ್ಧಿಮತ್ತೆ ಉದ್ಯೋಗ ಮಹಿಳೆ ಯರಿಗೆ' ಎಂಬ ಅನ್ವಯಿಕೆಯನ್ನು ಅಭಿವೃದ್ಧಿಪಡಿಸಲಾಗಿದ್ದು, ಇದು ವಿಶೇಷವಾಗಿ ಮಹಿಳಾ ವಿದ್ಯಾರ್ಥಿಗಳಿಗೆ ಉಪಯುಕ್ತವಾಗಲಿದೆ. ಅದನ್ನು ಇಂಜಿನಿಯರಿಂಗ್ ಕಾಲೇಜುಗಳಿಗೆ ವಿಸ್ತರಿಸಲಾಗುವುದು. ಹಾಗೆಯೇ ಮೈಕ್ರೋಸಾಫ್ಟ್ ಸಂಸ್ಥೆ ರಾಮನಗರ ಮತ್ತು ಹಾಸನದಲ್ಲಿ ಕಾರ್ಯಕ್ರಮಗಳನ್ನು ಆರಂಭಿಸಿದ್ದು, ಮುಂದಿನ ದಿನಗಳಲ್ಲಿ ಚಾಮರಾಜನಗರ ಮತ್ತು ಹಾವೇರಿಯಲ್ಲಿಯೂ ವಿಸ್ತರಣೆ ಮಾಡುವ ಯೋಜನೆ ಇದೆ ಎಂದು ಹೇಳಿದರು.

ವಿದ್ಯಾರ್ಥಿಗಳು ಇಂತಹ ಆಧುನಿಕ ತಂತ್ರಜ್ಞಾನಗಳನ್ನು ಅಳವಡಿಸಿಕೊಂಡು ಕೌಶಲ್ಯಗಳನ್ನು ಅಭಿವೃದ್ಧಿಪಡಿಸಿಕೊಳ್ಳಬೇಕು. ಸಂಬಂಧಿತ ಪ್ರಮಾಣಪತ್ರಗಳನ್ನು ಪಡೆದುಕೊಂಡರೆ ಉದ್ಯೋಗಾವಕಾಶಗಳು ಹೆಚ್ಚಾಗಲಿವೆ ಎಂದು ಸಲಹೆ ನೀಡಿದರು. ಈ ಸಂದರ್ಭದಲ್ಲಿ ರಾಮನಗರ ಶಾಸಕ ಎಚ್.ಎ.ಇಕ್ಬಾಲ್ ಹುಸೇನ್, ಬೆಂಗಳೂರು ದಕ್ಷಿಣ ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಕೆ.ರಾಜು, ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಚೇತನ್ ಕುಮಾರ್, ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್, ಕಾಲೇಜಿನ ಪ್ರಾಂಶುಪಾಲ ಡಾ.ಜಿ.ಪುಂಡರೀಕಾ ಸೇರಿದಂತೆ ವಿವಿಧ ಗಣ್ಯರು ಹಾಗೂ ಉಪನ್ಯಾಸಕರು ಉಪಸ್ಥಿತರಿದ್ದರು.

# ಸಡಗರದಿಂದ ನೆರವೇರಿದ ಗ್ರಾಮ ದೇವರುಗಳ ಉತ್ಸವ

**ಕೆ.ಆರ್.ನಗರ:** ಕ್ಷೇತ್ರದ ಸಾಲಿಗ್ರಾಮ ತಾಲೂಕಿನ ಕಾಳಮ್ಮನ ಕೊಪ್ಪಲು ಗ್ರಾಮದಲ್ಲಿ ಗ್ರಾಮ ದೇವರುಗಳ ಉತ್ಸವವು ಅತ್ಯಂತ ಸಡಗರ ಮತ್ತು ಭಕ್ತಿಭಾವದಿಂದ ನೆರವೇರಿತು.

ಗ್ರಾಮದ ಹೊರವಲಯದಲ್ಲಿರುವ ಶೀಗವಾಳು ಕೆರೆಯ ಅಂಗಳದಲ್ಲಿ ಗ್ರಾಮ ದೇವತೆಗಳಾದ ಶ್ರೀ ಕಾಳಮ್ಮ ತಾಯಿ, ಶ್ರೀ ಮೈಲಾರಲಿಂಗೇಶ್ವರ ಸ್ವಾಮಿ, ಶ್ರೀ ಹರವಮ್ಮ ತಾಯಿ, ಶ್ರೀ ಸತ್ತಿಗಪ್ಪ ಸ್ವಾಮಿ ಹಾಗೂ ಶ್ರೀ ಗಂಗ ಮಾಳಮ್ಮ ತಾಯಿ ಅವರ ಮೂರ್ತಿಗಳನ್ನು ಆಕರ್ಷಕವಾಗಿ ಅಲಂಕರಿಸಿ ಅಡ್ಡ ಪಲ್ಲಕ್ಕಿಗಳಲ್ಲಿ ಪ್ರತಿಷ್ಠಾಪಿಸಲಾಯಿತು. ಬಳಿಕ ವಾದ್ಯಗೋಷ್ಠಿಗಳ ನಾದದೊಂದಿಗೆ ಮೆರವಣಿಗೆಯ ಮೂಲಕ ಗ್ರಾಮಕ್ಕೆ ಕರೆತರಲಾಗಿದ್ದು, ಗ್ರಾಮದೆಲ್ಲೆಡೆ ಭಕ್ತಿಪೂರ್ಣವಾಗಿ ಉತ್ಸವವನ್ನು ಆಚರಿಸಲಾಯಿತು.

ಉತ್ಸವದಲ್ಲಿ ಮಹಿಳೆಯರು, ಮಕ್ಕಳು ಸೇರಿದಂತೆ ಅಪಾರ ಸಂಖ್ಯೆಯಲ್ಲಿ ಸಾರ್ವಜನಿಕರು ಪಾಲ್ಗೊಂಡು ದೇವರ ಮೂರ್ತಿಗಳಿಗೆ ವಿಶೇಷ ಪೂಜೆ ಸಲ್ಲಿಸಿ ತಮ್ಮ ಇಷ್ಟಾರ್ಥಗಳಿಗಾಗಿ ಪ್ರಾರ್ಥಿಸಿದರು.

ಈ ದೇವತಾ ಕಾರ್ಯದಲ್ಲಿ ಗ್ರಾಮದ ಯಜಮಾನರು, ಮುಖಂಡರು, ಜನಪ್ರತಿನಿಧಿಗಳು ಹಾಗೂ ಯುವಕರು ಸೇರಿದಂತೆ ಅಪಾರ ಸಂಖ್ಯೆಯಲ್ಲಿ ಗ್ರಾಮಸ್ಥರು ಭಾಗವಹಿಸಿ ಉತ್ಸವಕ್ಕೆ ಮೆರುಗು ತಂದರು.





# ಚಿಪ್ಪುಹಂದಿ ಬೇಟೆಯಾಡಿ ಮಾರಾಟಕ್ಕೆ ಯತ್ನ: ಓರ್ವ ಬಂಧನ

**ಮೈಸೂರು:** ಕಾಡುಪ್ರಾಣಿ ಬೇಟೆ ಹಾಗೂ ಅಕ್ರಮ ಮಾರಾಟಕ್ಕೆ ಯತ್ನಿಸಿದ ಆರೋಪದ ಮೇಲೆ ವ್ಯಕ್ತಿಯೊಬ್ಬನನ್ನು ಅರಣ್ಯ ಇಲಾಖೆ ಅಧಿಕಾರಿಗಳು ದಾಳಿ ನಡೆಸಿ ಬಂಧಿಸಿದ್ದಾರೆ.

ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿದ ಅರಣ್ಯ ಇಲಾಖೆ ತಂಡ, ಎಚ್.ಡಿ.ಕೋಟೆ ತಾಲ್ಲೂಕಿನ ಅಗಸನಹುಂಡಿ ಬಸ್ ನಿಲ್ದಾಣದ ಬಳಿ ಚಿಪ್ಪುಹಂದಿಯನ್ನು ಬೇಟೆಯಾಡಿ ಅದರ ಮಾಂಸ ಹಾಗೂ ಮುಳ್ಳುಗಳನ್ನು ಮಾರಾಟ ಮಾಡಲು ಯತ್ನಿಸುತ್ತಿದ್ದ ಆರೋಪಿಯನ್ನು ವಶಕ್ಕೆ ಪಡೆದಿದೆ. ಬಂಧಿತ ವ್ಯಕ್ತಿ ಹರೀಶ್ ಎಂದು ಗುರುತಿಸಲಾಗಿದೆ. ಆರೋಪಿ ಬಳಿ ಬೇಟೆಗೆ ಬಳಸಿದ ಸಾಧನಗಳು ಹಾಗೂ ಮುಳ್ಳುಹಂದಿಯ ಅವಶೇಷಗಳು ಪತ್ತೆಯಾಗಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಮುಳ್ಳುಹಂದಿ ವನ್ಯಜೀವಿ ಸಂರಕ್ಷಣಾ ಕಾಯ್ದೆ–1972ರ ಶೆಡ್ಯೂಲ್ 4ರ ಅಡಿಯಲ್ಲಿ ಸಂರಕ್ಷಿತ ಪ್ರಾಣಿಯಾಗಿದ್ದು, ಇದರ ಬೇಟೆ, ಸಾಗಾಟ, ಮಾರಾಟ ಶಿಕ್ಷಾರ್ಹ ಅಪರಾಧ. ಆರೋಪಿ ವಿರುದ್ಧ ಕಾಯ್ದೆಯ ಸೆಕ್ಷನ್ 9, 39 ಮತ್ತು 51ರ ಅಡಿಯಲ್ಲಿ ಪ್ರಕರಣ ದಾಖಲಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದೆ. ನ್ಯಾಯಾಲಯ ಆರೋಪಿಗೆ 14 ದಿನಗಳ ನ್ಯಾಯಾಂಗ ಬಂಧನ ವಿಧಿಸಿದೆ. ಮುಳ್ಳುಹಂದಿಯ ಮಾಂಸ, ಮುಳ್ಳು, ಮೂಳೆಗಳಿಗೆ ಔಷಧೀಯ ಗುಣವಿದೆ ಎಂಬ ಮೂಢನಂಬಿಕೆಯಿಂದ ಅಕ್ರಮ ಬೇಟೆ ನಡೆಯುತ್ತಿದೆ. ಕಾಡುಪ್ರಾಣಿಗಳ ಬೇಟೆ ಪರಿಸರ ಸಮತೋಲನಕ್ಕೆ ಧಕ್ಕೆ. ಸಾರ್ವಜನಿಕರು ಇಂತಹ ಅಕ್ರಮ ಚಟುವಟಿಕೆ ಕಂಡುಬಂದರೆ ತಕ್ಷಣ ಅರಣ್ಯ ಇಲಾಖೆ ಸಹಾಯವಾಣಿ 1926ಗೆ ಮಾಹಿತಿ ನೀಡಬೇಕು' ಎಂದು ವಲಯ ಅರಣ್ಯಾಧಿಕಾರಿ ತಿಳಿಸಿದ್ದಾರೆ.

# `ದೃಢ ದೇಹದ ದಂತಕಥೆ: ಪ್ರೇಮ್ ಚಂದ್`



| ಡಾ.ಸುಧಾಕರ.ಜಿ.ಲಕ್ಕವಳ್ಳಿ

ಸ್ಫೂರ್ತಿ ಸುಧೆ - 12

ನೆಪಗಳ ಬೆನ್ನುಬಿದ್ದು ಸೋಲೊಪ್ಪುವ ಇಂದಿನ ಪೀಳಿಗೆಗೆ ಪ್ರೇಮ್ ಚಂದ್ ದೇಗ್ರ ಎಂಬ ಹೆಸರು ಕೇವಲ ವ್ಯಕ್ತಿಯಲ್ಲ, ಅದೊಂದು ಮೈ ನಡುಗಿಸುವ ಜಯಘೋಷ! ಪಂಜಾಬ್‌ನ ಹಳ್ಳಿಯ ಮಣ್ಣಿನ ಅಖಾಡದಲ್ಲಿ ಕುಸ್ತಿ ಆಡುತ್ತಿದ್ದ ಒಬ್ಬ ಸಾಮಾನ್ಯ ಹುಡುಗ, ಅಂತರರಾಷ್ಟ್ರೀಯ ವೇದಿಕೆಯಲ್ಲಿ ಅಮೆರಿಕದ ದೈತ್ಯರನ್ನು ಮಣ್ಣುಮುಕ್ಕಿಸಿ ವಿಶ್ವವಿಜೇತನಾದದ್ದು ಅಪ್ಪಟ ರೋಚಕ ಇತಿಹಾಸ.

ದುಬಾರಿ ಪ್ರೋಟೀನ್‌ಗಳಿಲ್ಲದ, ಹೈಟೆಕ್ ಜಿಮ್‌ಗಳಿಲ್ಲದ ಆ ಕಾಲದಲ್ಲಿ ದೇಗ್ರ ನಂಬಿದ್ದು ಕೇವಲ ಅಚಲ ಛಲ ಮತ್ತು ಕಠಿಣ ಶಿಸ್ತು. ಅರೆಹೊಟ್ಟೆ ಉಂಡು,ಹಗಲಿರುಳು ಕಬ್ಬಿಣದೊಂದಿಗೆ ಸೆಣಸಾಡಿ ಅವರು ಕೆತ್ತಿದ ಆ ಸ್ನಾಯುಗಳು ಜಗತ್ತನ್ನೇ ಬೆರಗುಗೊಳಿಸಿದವು. ಅವರ ಪಾಲಿಗೆ ದೇಹ ದಾರ್ಢ್ಯ ಎಂಬುದು ಕೇವಲ ಪ್ರದರ್ಶನವಾಗಿರಲಿಲ್ಲ;ಅದೊಂದು ಪವಿತ್ರ ತಪಸ್ಸಾಗಿತ್ತು. ಇವರ ನರನಾಡಿಗಳಲ್ಲಿ ಹರಿಯುತ್ತಿದ್ದ ವೀರತ್ವಕ್ಕೆ ಜಗತ್ತೇ ಮಣಿದಿತ್ತು ಮಿಸ್ಟರ್ ಯೂನಿವರ್ಸ್(1988) ಆಸ್ಟ್ರೇಲಿಯಾದಲ್ಲಿ ವಿಶ್ವದ ಸರ್ವೋಚ್ಚ ಕಿರೀಟ ತೊಟ್ಟು ಭಾರತದ ತ್ರಿವರ್ಣ ಧ್ವಜ ಹಾರಿಸಿದ ಐತಿಹಾಸಿಕ ಕ್ಷಣ,ಪದ್ಮಶ್ರೀ(1990) ಮತ್ತು ಅರ್ಜುನ ಪ್ರಶಸ್ತಿ (1986) ದೇಶದ ಅಪ್ರತಿಮ ಪರಾಕ್ರಮಕ್ಕೆ ಸಂದ ಶ್ರೇಷ್ಠ ಮನ್ನಣೆಗಳು,ಸತತ 8 ಬಾರಿ ಮಿಸ್ಟರ್ ಏಷ್ಯಾ ಹಾಗೂ 9 ಬಾರಿ ಮಿಸ್ಟರ್ ಇಂಡಿಯಾ ಪಟ್ಟ ಗೆದ್ದ ಅಜೇಯ ಸುಲ್ತಾನ.

ಯಶಸ್ಸು ಎಂಬುದು ಅದೃಷ್ಟದ ಲಾಟರಿಯಲ್ಲ;ಅದು ಹನಿಹನಿ ಬೆವರಿನಿಂದ ಅರ್ಜಿಸಬೇಕಾದ ಆಸ್ತಿ. ಸೌಲಭ್ಯಗಳಿಲ್ಲ ಎಂಬ ಮಾತು ಸೋಮಾರಿಗಳ ನೆಪವಷ್ಟೇ. ದೇಗ್ರ ಅವರ ಹಾದಿ ನಮಗೆ ಕಲಿಸುವ ಪಾಠವೊಂದೇ ಬೆವರಿನ ಹನಿಗಳು ಪ್ರಾಮಾಣಿಕವಾಗಿದ್ದರೆ, ಬಡತನದ ಗುಡಿಸಲಿನಿಂದ ವಿಶ್ವದ ಸಿಂಹಾಸನದವರೆಗೆ ಯಾವುದೂ ಅಸಾಧ್ಯವಲ್ಲ!

ಕೃತಕ ಮಾರ್ಗ ಬಿಡಿ,ನೈಸರ್ಗಿಕ ಶ್ರಮಕ್ಕೆ ಒತ್ತು ನೀಡಿ.ನಿಮ್ಮೊಳಗಿನ ಸಾಧಕನನ್ನು ಇಂದೇ ಎಚ್ಚರಿಸಿ. ಮುಂದಿನ ಇತಿಹಾಸವನ್ನು ನಿಮ್ಮ ಶ್ರಮ ಮತ್ತು ಶಿಸ್ತಿನಿಂದಲೇ ಬರೆಯಿರಿ.ಈ ಭಾರತೀಯ ಭೀಷ್ಮನೇ ನಿಮ್ಮ ದಾರಿದೀಪ!



# ಕಾಯಕದಲ್ಲಿಯೇ ಕೈಲಾಸವನ್ನು ಕಂಡ ಶರಣ ಹೂಗಾರ ಮಾದಯ್ಯ



| ವೀಣಾ ಹೇಮಂತ್‌ಗೌಡ ಪಾಟೀಲ್

ಉಪೇಕ್ಷಿತ ವಚನಕಾರರು

ಮೃಡ ಜನರ ಸೇವೆಯನ್ನು ಮಾಡುತ್ತ ಇಲ್ಲೇಕೆ ಇರುವೆ ನನ್ನೊಂದಿಗೆ ಕೈಲಾಸಕ್ಕೆ ಬಾ ಅಲ್ಲಿ ಆರಾಮಾಗಿ ಇರಬಹುದು ಎಂಬ ಪರಶಿವನ ಮಾತಿಗೆ ಕಾಯಕವೇ ಇಲ್ಲವಾದ ಕೈಲಾಸದಲ್ಲಿ ನನಗೇನು ಕೆಲಸ, ನನ್ನ ಕಾಯಕದಲ್ಲಿ ನನಗೆ ತೃಪ್ತಿ ಇದೆ ನಿನ್ನ ಕೈಲಾಸ ನನಗೆ ಬೇಡ ಎಂದು ತಿರಸ್ಕರಿಸಿದನು ಆ ಶರಣ ಜೀವಿ. ಆತನೇ ಕಾಯಕಕ್ಕೆ ಮಹತ್ತರವಾದ ಸ್ಥಾನವನ್ನು ನೀಡಿ ಕಾಯಕದ ಮೂಲಕವೇ ಮುಕ್ತಿಯ ಪಥವನ್ನು ಹೊಂದಬಹುದು ಎಂದು ಸಾರಿದ ಮಹಾನ್ ಶಿವ ಶರಣ ಹೂಗಾರ ಮಾದಯ್ಯ.

12ನೇ ಶತಮಾನದ ವಚನ ಚಳುವಳಿಯ ಪ್ರಮುಖ ಕಾಯಕಯೋಗಿ ಎಂದೇ ಗುರುತಿಸಿಕೊಂಡ ಮಾದಯ್ಯನವರು ವೃತ್ತಿಯಿಂದ ಹೂಗಾರರು. ಊರಿನ ವಿವಿಧ ವನಗಳಿಂದ, ಅನುಭವ ಮಂಟಪದ ಹತ್ತಿರದ ಪತ್ರಿವನದಿಂದ ಹೂವು ಹಾಗೂ ಬಿಲ್ವಪತ್ರೆಗಳನ್ನು ತಂದು ದೇವರಿಗೆ ಅಲಂಕಾರ ಮಾಡುವ ಹಾಗೂ ಜನರ ಮನೆಮನೆಗಳಿಗೆ ಹೂವು ಪತ್ರಿಗಳನ್ನು ಮುಟ್ಟಿಸುವ ಕಾಯಕ ಅವರದಾಗಿತ್ತು. ಸುಂದರವಾದ ಹಾರಗಳನ್ನು ಕೂಡ ಅವರು ತಯಾರಿಸುತ್ತಿದ್ದರು. ಕಾಯಕ ಮತ್ತು ದಾಸೋಹ ತತ್ವಗಳನ್ನು ಅಳವಡಿಸಿಕೊಂಡ ಶರಣ ದಂಪತಿಗಳಲ್ಲಿ ಹೂಗಾರ ಮಾದಯ್ಯ ಮತ್ತು ಅವರ ಪತ್ನಿ ಮಹಾದೇವಿ ಅಗ್ರಗಣ್ಯರು.

ಗಿಡ ಮರಗಳಿಗೂ ಜೀವವಿದೆ ಎಂಬ ಜೀವ ಕಾರುಣ್ಯದ ಭಾವವನ್ನು ಹೊಂದಿದ ವ್ಯಕ್ತಿ ಹೂಗಾರ ಮಾದಯ್ಯ. ಅದೊಂದು ದಿನ ಶಿವ ಪೂಜೆಗೆ ಹೂಗಳನ್ನು ಕಿತ್ತುತ್ತಿರುವಾಗ ಗಿಡಮರಗಳು ಒದ್ದಾಡಿದಂತೆ ಅವರಿಗೆ ಭಾಸವಾಯಿತು. ಹೂಗಳನ್ನು ಕಿತ್ತರೆ ಅವುಗಳಿಗೆ ನೋವಾಗುತ್ತದೆ ಎಂದು ತೋರಿತು. ಅಂದಿನಿಂದ ಕೆಳಗೆ ಬಿದ್ದ ಹೂವುಗಳನ್ನು ಮಾತ್ರ ಆಯ್ದು ತಂದು ಪೂಜೆಗೆ ನೀಡುತ್ತಿದ್ದ ಮಾನವತಾವಾದಿ ಮಾದಯ್ಯ. ಗಿಡ–ಮರ, ಪಶು–ಪಕ್ಷಿ,ಮನುಷ್ಯ ಹೀಗೆ ಯಾವ ಜೀವಿಗೂ ನಾವು ನೋವನ್ನುಂಟು ಮಾಡಬಾರದು ಎಂಬುದು ಅವರ ಬದುಕಿನ ಉದ್ದೇಶವಾಗಿತ್ತು. ವಚನಗಳನ್ನು ರಚಿಸದೇ ಇದ್ದರೂ ಕೂಡ ಇವರು ತಮ್ಮ ನಡೆ–ನುಡಿ, ಕಾಯಕ ಹಾಗೂ ದಾಸೋಹಗಳಲ್ಲಿ ಶರಣ ತತ್ವ ಪರಿಪಾಲನೆ ಮಾಡುತ್ತಾ ಬದುಕನ್ನು ಸಾಗಿಸುತ್ತಿದ್ದರು. ಕಾಯಕದಲ್ಲಿಯೇ ಮುಕ್ತಿ ಮಾರ್ಗವಿದೆ ಎಂದು ಸಾರಿದ ಮಾದಯ್ಯನವರು ಆ ಕಾಲದ ಮಹಾರಾಜನಾದ ಸಕಲೇಶ ಮಾದರಸರ ಸ್ನೇಹಿತರಾಗಿದ್ದರು. ಮಾದಯ್ಯನವರ ಶರಣ ಜೀವನದ ಕುರಿತು ಹೆಚ್ಚಿನ ಮಾಹಿತಿ ತಿಳಿದು ಬರದಿದ್ದರೂ ಇವರ ತಂದೆ ಮಹಾದೇವರು ಬಾದಾಮಿ ಹತ್ತಿರದ ಶಿವ ದೇವಾಲಯದಲ್ಲಿ ಅರ್ಚಕ ವೃತ್ತಿಯನ್ನು ಮಾಡುತ್ತಿದ್ದರು ಎಂಬುದು ತಿಳಿದು ಬರುತ್ತದೆ. ಇವರ ಸಂಪರ್ಕಕ್ಕೆ ಐಹೊಳೆ ಪಟ್ಟಣದಲ್ಲಿ ವೇದಾಭ್ಯಾಸ ಮಾಡುತ್ತಿದ್ದ ಗುಣವತಿ ದಂಪತಿಗಳ ಮಗ ಶಿವಯೋಗಿ ಮಲ್ಲರಸ ( ಮಾದರಸ, ಮುಂದೆ ಕಲಕುರ್ಕಿ ಸಂಸ್ಥಾನದ ಮಹಾರಾಜ) ನ ಸ್ನೇಹ ಬೆಳೆಯುತ್ತದೆ.



ಮಹಾದೇವ ದಂಪತಿಗಳಿಗೆ ಅನಂತನ ಹುಣ್ಣಿಮೆಯ ದಿನ ಗಂಡು ಮಗುವಿನ ಜನನವಾಗುತ್ತದೆ. ಶಿವನ ಮೇಲಿನ ಅಪಾರ ಭಕ್ತಿಯಿಂದ ತಂದೆ ತನ್ನ ಮಗನನ್ನು ಕೂಡ ಮಹಾದೇವ ಎಂಬ ಹೆಸರಿನಿಂದಲೇ ಕರೆಯುತ್ತಾನೆ... ಆದರೆ ತಂದೆ ಮತ್ತು ಮಗ ಇಬ್ಬರ ಹೆಸರು ಒಂದೇ ಆಗಿರುವುದರಿಂದ ಮಗನನ್ನು ಎಲ್ಲರೂ ಚಿಕ್ಕ ಮಾದಣ್ಣ ಎಂದು ಕರೆಯಲು ಆರಂಭಿಸುತ್ತಾರೆ.

ಬೆಳೆಯುವ ಸಿರಿ ಮೊಳಕೆಯಲ್ಲಿ ಎಂಬಂತೆ ತನ್ನ ಪಾಲಕರ ರೀತಿಯಲ್ಲಿಯೇ ಚಿಕ್ಕ ಮಾದಣ್ಣನ ಕೂಡ ಹೂವು ಪತ್ರಗಳನ್ನು ತಂದು ಲಿಂಗಕ್ಕೆ ಅತ್ಯಂತ ಶ್ರದ್ಧಾ ಭಕ್ತಿಯಿಂದ ಶಿವಲಿಂಗವನ್ನು ಪೂಜಿಸಿ ನಂತರ ಹೂವು ಪತ್ರಿಗಳಿಂದ ಸುಂದರವಾಗಿ ಅಲಂಕಾರವನ್ನು ಮಾಡಿ ನೋಡುಗರ ಮನ ಸೆಳೆಯುವಂತೆ ಭಕ್ತಿ ಭಾವ ಉಕ್ಕಿ ಹರಿಯುವಂತೆ ಮಾಡುತ್ತಿದ್ದನು. ಈತ ಮಾಡುತ್ತಿದ್ದ ಪುಷ್ಪಾಲಂಕಾರವನ್ನು ನೋಡಲು ವಿವಿಧ ಗ್ರಾಮಗಳಿಂದ ಕೂಡ ಜನ ಬರುತ್ತಿದ್ದರು ಇದೇ ಮುಂದುವರೆದು ಅವರನ್ನು ಹೂಗಾರ ಮಾದಣ್ಣ ಎಂದೇ ಕರೆಯಲಾರಂಭಿಸಿದರು ಎಂದು ನಮ್ಮ ಜನಪದರು ನೆನೆಯುತ್ತಾರೆ.

ಬಾದನಿಗೆ ಬಾಸಿಂಗ ಭೂಮಿ ತಾಯಿಗೆ ದಂಡೆ ಸಾಲ
ಶರಣರಿಗೆ ಸರಮಾಲೆ ಸಾಲ / ಕಟಗೊಂಡು
ಮಾದಯ್ಯ ಗೆದ್ದ ಕೈಲಾಸ

ಆ ಭಾಗದಲ್ಲಿ ಬೆಳವಲದ ಸುಗ್ಗಿಯಲ್ಲಿ ರಾಶಿಯ ಕಣಕ್ಕೆ ಏರಿಸಲು ಹೂ ಪತ್ರಿಯನ್ನು ಮಾದಯ್ಯ ನೀಡುತ್ತಿದ್ದು, ಆ ಹೂವು ಪತ್ರಿಗಳನ್ನು ಭೂಮಿತಾಯಿಗೆ ಏರಿಸುತ್ತಿದ್ದರು.ಸಾಲ ಶರಣರು ಅಂದರೆ ಸುಗ್ಗಿಯ ಕಾಲದಲ್ಲಿ ಬಳಸುತ್ತಿದ್ದ ಗುಂಟೆ, ಕರಿ ಬಂಟು, ಬಿಳಿ ಬಂಟುಗಳನ್ನು ಕೂಡ ಪೂಜಿಸಲು ಹೂವು ಪತ್ರೆಗಳನ್ನು ನೀಡುತ್ತಿದ್ದರು

ಸಕಲೇಶ ಮಾದರಸರಿಂದ ಕಲ್ಯಾಣದ ಹಾಗೂ ಬಸವಾದಿ ಶಿವಶರಣರ ಕುರಿತ ಎಲ್ಲ ವಿದ್ಯಮಾನಗಳನ್ನು ಅರಿತು ಶರಣ ಧರ್ಮದಡೆ ಆಕರ್ಷಿತರಾಗುತ್ತಾರೆ. ಸಕಲೇಶ ಮಾದರಸರಿಂದ ಲಿಂಗ ದೀಕ್ಷೆಯನ್ನು ಪಡೆಯುತ್ತಾರೆ. ಮುಂದೆ ಹೂಗಾರ ಮಾದಯ್ಯ ತನ್ನ ಪತ್ನಿ ಮಹಾದೇವಿಯೊಂದಿಗೆ ಕಲ್ಯಾಣಕ್ಕೆ ಹೋಗಿ ಅಲ್ಲಿ ಅನುಭವ ಮಂಟಪದಲ್ಲಿ ಎಲ್ಲರನ್ನೂ ಭೇಟಿಯಾಗಿ ಅಂತಿಮವಾಗಿ ಮಡಿವಾಳ ಮಾಚಿದೇವರೊಂದಿಗೆ ತಾನು ಅಲ್ಲಿಯೇ ನೆಲೆಸುವುದಾಗಿ ಕೇಳಿಕೊಳ್ಳುತ್ತಾರೆ.

ಕಲ್ಯಾಣದಲ್ಲಿಯೇ ಉಳಿದುಕೊಳ್ಳುವ ಶರಣ ದಂಪತಿಗಳು ತಮ್ಮ ವೃತ್ತಿ ಬದುಕನ್ನು ಅಲ್ಲಿ ಮುಂದುವರೆಸುತ್ತಾ ಶರಣರ ಜೊತೆಗೆ ದಾಸೋಹ ಹಾಗೂ ಅನುಭವ ಮಂಟಪದಲ್ಲಿ ವಿಚಾರ ವಿನಿಮಯ, ಚರ್ಚೆಗಳಲ್ಲಿ ಪಾಲ್ಗೊಂಡು ತಮ್ಮ ಅನುಭಾವವನ್ನು ಹೆಚ್ಚಿಸಿಕೊಳ್ಳುತ್ತಾರೆ


**ಸಿಗದೇ ಹಣ ಬರಲು**
**ಕುಗ್ಗದಲೇ ಬರದಿರಲು**
**ಎಗ್ಗಿಲ್ಲದೆ ಮಾಡಿ ಕಾಯಕವಾ/**
**ಮಾದಯ್ಯ**
**ಬುಗ್ಗೆ ಪಡೆದಂತೆ ದಾಸೋಹ**

ಮನೆ ಮನೆಗೆ ಹೂವು ಪತ್ರಿಗಳನ್ನು ತಲುಪಿಸುವ ದಂಪತಿಗಳಿಗೆ ಕೆಲವರು ಹಣ ಕೊಟ್ಟರೆ ಮತ್ತೆ ಕೆಲವರು ಕೊಡುತ್ತಿರಲಿಲ್ಲ, ಆದರೂ ಕೂಡ ದಂಪತಿಗಳು ಈ ಕುರಿತು ಕಿಂಚಿತ್ತು ಯೋಚಿಸದೆ ತಮಗೆ ಬಂದ ಹಣದಲ್ಲಿ ದಾಸೋಹವನ್ನು ನಡೆಸುತ್ತಿದ್ದರು, ಅವರಿಗೆ ಲಿಂಗಣ್ಣ ಎಂಬ ಓರ್ವ ಪುತ್ರನಿದ್ದ.

ಕಾಯಕ ನಿಷ್ಠರಾದ ಮೇದಾರ ಕೇತಯ್ಯನವರ ಎದೆಯಲ್ಲಿ ಬಿದಿರು ಸಿಕ್ಕರೂ ಪಟ್ಟು ಬಿಡದೆ ತಮ್ಮ ಕಾಯಕವನ್ನು ಮಾಡಿ ಮನೆಗೆ ಬಂದು ಪತ್ನಿಯಿಂದ ಬಿದಿರನ್ನು ತೆಗೆಸಿಕೊಂಡು ಮರಣ ಹೊಂದಿದರು. ರಾತ್ರಿಯ ಸರಹೊತ್ತಿನಲ್ಲಿ ಪತಿಯು ಮರಣ ಹೊಂದಿದುದನ್ನು ನೋಡಿ ದೃತಿಗೆಡದ ಅವರ ಪತ್ನಿ ರಾತ್ರಿಯೆಲ್ಲ ಒಬ್ಬಳೇ ಕುಳಿತು ದುಃಖಿಸಿದಳು. ಮರುದಿನ ನಸುಕಿನ ಜಾವದಲ್ಲಿಯೇ ಪತ್ರಿ ಹಾಗೂ ಹೂಗಳನ್ನು ಕೊಡಲು ಬಂದ ಮಾದಯ್ಯನವರು ವೀರಗಂಟಿ ಮಡಿವಾಳ ಮಾಚಿದೇವರಿಗೆ ಸುದ್ದಿ ಮುಟ್ಟಿಸಿದರು. ಮಡಿವಾಳ ಮಾಚಿದೇವರು ಬಂದ ನಂತರ ಮಾದಯ್ಯನವರು ಕೇತಯ್ಯನವರನ್ನು ಕುರಿತು ಎದ್ದೇಳಿ ಶರಣರೇ,ಕಾಯಕಕ್ಕೆ ಹೊತ್ತಾಯಿತು ಎಂದು ತಟ್ಟಿ ಎಬ್ಬಿಸಿದಾಗ ನಿದ್ರೆಯಿಂದ ತಿಳಿದೆದ್ದವರಂತೆ ಕೇತಯ್ಯನವರು ಎದ್ದು ಕುಳಿತರಂತೆ.

ಮಾದಯ್ಯನವರು ಯಾವುದೇ ವಚನಗಳನ್ನು ರಚಿಸಿಲ್ಲ. ಮಾದಯ್ಯನವರ ಕುರಿತು ನಮಗೆ ಭೀಮಕವಿಯ ಬಸವ ಪುರಾಣ, ಸಿದ್ದಯ್ಯ ಪುರಾಣಿಕರ ಶರಣ ಚರಿತಾಮೃತ, ಸೋಮನಾಥ ಎಳವ ಅವರ ವಚನಾಮೃತಗಳಲ್ಲಿ ಉಲ್ಲೇಖವಿದೆ.

ಪ್ರತಿ ವರ್ಷ ಅನಂತನ ಹುಣ್ಣಿಮೆಯಂದು ಹೂಗಾರ ಸಮಾಜದವರು ಹೂಗಾರ ಮಾದಯ್ಯನವರ ಜಯಂತಿಯನ್ನು ಆಚರಿಸುತ್ತಾರೆ.



**ಹೂಗಾರ ಮಾದಯ್ಯನಂತಹ ಕಾಯಕನಿಷ್ಠ ಶರಣರಿಗೆ ಶರಣು ಶರಣಾರ್ಥಿ**

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,